Volume : 9 | Issue : 136 | August : 12 : 2026 : Wednesday
ಸಂಪುಟ : 9 | ಸಂಚಿಕೆ : 136 | ಆಗಸ್ಟ್ : 12 : 2026 : ಬುಧವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI
PRGI NO: KARKAN/2018/78481





'ಟಾಕ್ಸಿಕ್' ಜತೆ ಕ್ಲ್ಯಾಶ್ ತಪ್ಪಿಸಿಕೊಂಡ 'ಈಠಾ' -ಶ್ರದ್ಧಾ ಕಪೂರ್ ಅಭಿನಯದ ಸಿನಿಮಾ ಡಿ.4ಕ್ಕೆ ಬಿಡುಗಡೆ. ವಿಠಾಬಾಯಿ ನಾರಾಯಣಗಾಂವ್ಕರ್ ಅವರ ಜೀವನಾಧಾರಿತ ಚಿತ್ರ ಇದಾಗಿದೆ.

ಸಚಿವ ಸ್ಥಾನದಿಂದ ನಾಗೇಂದ್ರ ಹೆಸರು ಕೈಬಿಡಿ- ಬಿ.ವೈ.ವಿಜಯೇಂದ್ರ ಆಗ್ರಹ ಪುಟ 3

ಆ.14ರಂದು ಸ್ಪೀಕರ್, ಸಭಾಪತಿ ಸ್ಥಾನಕ್ಕೆ ಚುನಾವಣೆ ಪುಟ 4

# 'ರೈತರ ಹಿತ ನೋಡಿ ಕಾವೇರಿ ಬಿಡುಗಡೆ'

● ವಿಕ್ರಮ ವಾಹಿನಿ । ಬೆಂಗಳೂರು



**ತಮಿಳುನಾಡಿಗೆ 12,000 ಕ್ಯುಸೆಕ್ ಕಾವೇರಿ ನೀರು ಹರಿಸುವಂತೆ ಸಿಡಬ್ಲ್ಯುಆರ್‌ಸಿ ನೀಡಿರುವ ಆದೇಶದ ಕುರಿತು ರಾಜ್ಯದ ಜಲಾಶಯಗಳ ನೀರಿನ ಮಟ್ಟ, ಒಳಹರಿವು ಹಾಗೂ ರೈತರ ಹಿತಾಸಕ್ತಿ ಪರಿಶೀಲಿಸಿ ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು ಎಂದು ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ನ್ಯಾಯಾಲಯದ ಆದೇಶ ಪಾಲನೆಯ ಜತೆಗೆ ರೈತರ ರಕ್ಷಣೆಯೂ ಸರ್ಕಾರದ ಕರ್ತವ್ಯ ಎಂದಿದ್ದಾರೆ.**

ತಮಿಳುನಾಡಿಗೆ 12,000 ಕ್ಯುಸೆಕ್ ಕಾವೇರಿ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ (ಅಫಖಅ) ನೀಡಿರುವ ಆದೇಶದ ಕುರಿತು ರಾಜ್ಯದ ಜಲ ಪರಿಸ್ಥಿತಿಯನ್ನು ಕೂಲಂಕಷವಾಗಿ ಪರಿಶೀಲಿಸಿದ ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಉಪಮುಖ್ಯಮಂತ್ರಿ ಹಾಗೂ ಜಲಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಮಂಗಳವಾರ ವಿಧಾನಸೌಧದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಅವರು, ರಾಜ್ಯದ ಜಲಾಶಯಗಳಲ್ಲಿನ ನೀರಿನ ಸಂಗ್ರಹ, ಒಳಹರಿವು ಹಾಗೂ ರೈತರ ಬೆಳೆ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ನಿರ್ಧಾರ ಕೈಗೊಳ್ಳಲಾಗುವುದು ಎಂದರು.

ನ್ಯಾಯಾಲಯದ ಆದೇಶವನ್ನು ಪಾಲಿಸುವುದರ ಜತೆಗೆ ರಾಜ್ಯದ ರೈತರ ಹಿತಾಸಕ್ತಿಯನ್ನೂ ರಕ್ಷಿಸುವ ಅಗತ್ಯವಿದೆ. ಈ ಎರಡೂ ಅಂಶಗಳನ್ನು ಸಮತೋಲನದಲ್ಲಿಟ್ಟುಕೊಂಡು ಮುಂದಿನ ಹೆಜ್ಜೆ ಇಡಲಾಗುವುದು. ಈ ಕುರಿತು ಈಗಾಗಲೇ ನೀರಾವರಿ ಸಚಿವರೊಂದಿಗೆ ಚರ್ಚಿಸಲಾಗಿದೆ ಎಂದು ಹೇಳಿದರು.

ರಾಜ್ಯದ ವಿವಿಧ ನದಿಗಳು ಮತ್ತು ಜಲಾಶಯಗಳಿಗೆ ಹರಿದುಬರುತ್ತಿರುವ ನೀರಿನ ಒಳಹರಿವಿನ ಮೇಲೆ ನಿರಂತರ ನಿಗಾ ಇರಿಸಲಾಗಿದೆ. ಕೇವಲ ಕಾವೇರಿ ಜಲಾನಯನ ಪ್ರದೇಶವನ್ನಷ್ಟೇ ಪರಿಗಣಿಸದೆ, ತುಂಗಭದ್ರಾ ಹಾಗೂ ಆಲಮಟ್ಟಿ ಸೇರಿದಂತೆ ರಾಜ್ಯದ ಪ್ರಮುಖ ಜಲಾಶಯಗಳಲ್ಲಿನ ನೀರಿನ ಸಂಗ್ರಹವನ್ನೂ ಪರಿಗಣಿಸಬೇಕಾಗಿದೆ ಎಂದು ತಿಳಿಸಿದರು.

**ರೈತರೊಂದಿಗೆ ಚರ್ಚಿಸಿ ಬೆಳೆ ನಿರ್ಧಾರ**

ಲಭ್ಯವಿರುವ ನೀರಿನ ಪ್ರಮಾಣಕ್ಕೆ ಅನುಗುಣವಾಗಿ ಯಾವ ಬೆಳೆ ಬೆಳೆಯಬೇಕು ಎಂಬುದರ ಕುರಿತು ಸ್ಥಳೀಯ ಮಟ್ಟದಲ್ಲಿ ರೈತರೊಂದಿಗೆ ಸಭೆ ನಡೆಸಿ ಚರ್ಚಿಸುವ ಅಗತ್ಯವಿದೆ. ಜಲಾಶಯಗಳಲ್ಲಿನ ನೀರಿನ ಮಟ್ಟ, ಒಳಹರಿವು ಮತ್ತು ಮುಂದಿನ ದಿನಗಳಲ್ಲಿ ಲಭ್ಯವಾಗಬಹುದಾದ ನೀರಿನ ಪ್ರಮಾಣವನ್ನು ಆಧರಿಸಿ ಬೆಳೆ ಪದ್ಧತಿ ಕುರಿತು ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ಶಿವಕುಮಾರ್ ಹೇಳಿದರು.

ರಾಜ್ಯದ ನೀರಿನ ಪರಿಸ್ಥಿತಿಯ ಬಗ್ಗೆ ಸರ್ಕಾರ ನಿರಂತರವಾಗಿ ಮಾಹಿತಿ ಸಂಗ್ರಹಿಸುತ್ತಿದ್ದು, ರೈತರ ಹಿತಾಸಕ್ತಿಗೆ ಧಕ್ಕೆಯಾಗದ ರೀತಿಯಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಭರವಸೆ ನೀಡಿದರು.

**'ರೈತರನ್ನು ರಕ್ಷಿಸುವುದು ನಮ್ಮ ಕರ್ತವ್ಯ'**

ಕಾವೇರಿ ನೀರು ವಿಚಾರವಾಗಿ ರೈತರು ಪ್ರತಿಭಟನೆ ನಡೆಸುವ ಸಾಧ್ಯತೆ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಶಿವಕುಮಾರ್, ಸರ್ಕಾರ ಪಾರದರ್ಶಕವಾಗಿ ಕಾರ್ಯನಿರ್ವಹಿಸಲಿದೆ ಎಂದರು.

"ರಾಜಕೀಯ ಮಾಡುವವರು ಅಥವಾ ಮಾಧ್ಯಮಗಳ ಮುಂದೆ ಮಾತನಾಡುವವರಿಗಾಗಿ ನಾವು ನಿರ್ಧಾರ ಕೈಗೊಳ್ಳುವುದಿಲ್ಲ. ರೈತರನ್ನು ರಕ್ಷಿಸಲು ಜನರು ನಮಗೆ ಅಧಿಕಾರ ನೀಡಿದ್ದಾರೆ. ಯಾವುದೇ ಕಾರಣಕ್ಕೂ ಯಾವುದೇ ರೈತರಿಗೆ ತೊಂದರೆಯಾಗಲು ನಾವು ಬಿಡುವುದಿಲ್ಲ" ಎಂದು ಹೇಳಿದರು.

ಜನರು ಸಂಯಮದಿಂದ ಇರಬೇಕು. ಸರ್ಕಾರ ರೈತರೊಂದಿಗಿದ್ದು, ಅವರ ಹಿತಕ್ಕಾಗಿ ಕೆಲಸ ಮಾಡಲಿದೆ. ಶಾಂತವಾಗಿ ಪರಿಸ್ಥಿತಿಯನ್ನು ನಿಭಾಯಿಸಿದರೆ ಎಲ್ಲ ಸಮಸ್ಯೆಗಳನ್ನೂ ಸೌಹಾರ್ದಯುತವಾಗಿ ಬಗೆಹರಿಸಬಹುದು. ಪ್ರಕೃತಿಯೇ ನಮ್ಮನ್ನು ಕಾಪಾಡಲಿದೆ ಎಂಬ ವಿಶ್ವಾಸವಿದೆ ಎಂದು ಅವರು ಹೇಳಿದರು.

## ಬುಧವಾರ ಸಚಿವರು, ಪಕ್ಷದ ನಾಯಕರ ಸಭೆ

ಪಕ್ಷದ ಮುಂದಿನ ಯೋಜನೆಗಳ ಕುರಿತು ಚರ್ಚಿಸಲು ಬುಧವಾರ ಸಚಿವರು ಹಾಗೂ ಪಕ್ಷದ 15 ಪ್ರಮುಖ ನಾಯಕರೊಂದಿಗೆ ಸಭೆ ಕರೆಯಲಾಗಿದೆ ಎಂದು ಶಿವಕುಮಾರ್ ತಿಳಿಸಿದರು.

"ಮಾರ್ಗದರ್ಶನ ನೀಡಲು ಹಾಗೂ ಪಕ್ಷದ ಮುಂದಿನ ಯೋಜನೆಗಳ ಕುರಿತು ಚರ್ಚಿಸಲು ಈ ಸಭೆ ನಡೆಯಲಿದೆ. ಗುರುವಾರ ಸಂಪುಟ ಸಭೆಯೂ ನಿಗದಿಯಾಗಿದೆ" ಎಂದು ಅವರು ಹೇಳಿದರು. ಕಾವೇರಿ ನೀರು ಹಂಚಿಕೆ ವಿಚಾರದಲ್ಲಿ ರಾಜ್ಯದ ಜಲ ಪರಿಸ್ಥಿತಿ, ರೈತರ ಹಿತಾಸಕ್ತಿ ಹಾಗೂ ನ್ಯಾಯಾಲಯದ ಆದೇಶವನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ಮುಂದಿನ ನಿರ್ಧಾರ ಕೈಗೊಳ್ಳಲಿದೆ ಎಂಬುದನ್ನು ಶಿವಕುಮಾರ್ ಅವರ ಹೇಳಿಕೆ ಸ್ಪಷ್ಟಪಡಿಸಿದೆ.

■ ಸುದ್ದಿ ಚುಟುಕು

## 21 ಬೀದಿ ನಾಯಿಗಳ ನಾಪತ್ತೆ: ಆರೋಪ ಪಟ್ಟಿ ಸಲ್ಲಿಕೆಗೆ ಆದೇಶ

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರಿನ ಕಗ್ಗದಾಸಪುರದಲ್ಲಿರುವ, ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆಯ (ಡಿಆರ್‌ಡಿಒ) ಎರಡನೇ ಹಂತದ ಕ್ಯಾಂಪಸ್‌ನಲ್ಲಿ ಮುಕ್ತವಾಗಿ ಸುತ್ತಾಡುತ್ತಿದ್ದ 21 ಬೀದಿ ನಾಯಿಗಳ ನಾಪತ್ತೆ ಪ್ರಕರಣದ ಸಂಬಂಧಿತ ಆರೋಪ ಪಟ್ಟಿಯನ್ನು ಸಕ್ಷಮ ನ್ಯಾಯಾಲಯಕ್ಕೆ ಸಲ್ಲಿಸಲು ಪೊಲೀಸರಿಗೆ ಹೈಕೋರ್ಟ್ ನಿರ್ದೇಶಿಸಿದೆ.

ತಮ್ಮ ವಿರುದ್ಧದ ಪ್ರಕರಣ ರದ್ದುಪಡಿಸುವಂತೆ ಕೋರಿ ಸಿ ವಿ ರಾಮನ್ ನಗರದಲ್ಲಿರುವ ಡಿಆರ್‌ಡಿಒ ಟೌನ್‌ಷಿಪ್ ಮೊದಲನೇ ಹಂತದ ಎಸ್ಟೇಟ್ ಮ್ಯಾನೇಜರ್ ರಾಕೇಶ್ ಕುಮಾರ್ ಸಾಹು ಹಾಗೂ ಡಿಆರ್‌ಡಿಒ ಸ್ವಚ್ಛತಾ ಮೇಲ್ವಿಚಾರಕ ಟಿ ಜಿ ಸುಧಾಕರ್ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಏಕಸದಸ್ಯ ಪೀಠ ನಡೆಸಿತು.

ರಾಜ್ಯ ಸರ್ಕಾರವನ್ನು ಪ್ರತಿನಿಧಿಸಿದ್ದ ರಾಜ್ಯ ಸರ್ಕಾರಿ ಅಭಿಯೋಜಕ ಬಿ ಎನ್ ಜಗದೀಶ್ ಅವರು ಡಿಆರ್‌ಡಿಒ ಎಸ್ಟೇಟ್ ವ್ಯವಸ್ಥಾಪಕ ರಾಕೇಶ್ ಕುಮಾರ್ ಸಾಹು ಅವರ ಹೆಸರನ್ನು ಆರೋಪ ಪಟ್ಟಿಯಿಂದ ಕೈಬಿಡಲಾಗಿದೆ. ಡಿಆರ್‌ಡಿಒ ಸ್ವಚ್ಛತಾ ಮೇಲ್ವಿಚಾರಕ ಟಿ ಜಿ ಸುಧಾಕರ್ ಮತ್ತು ಇತರರ ವಿರುದ್ಧ ಆರೋಪ ಪಟ್ಟಿ ಸಿದ್ಧಪಡಿಸಲಾಗಿದೆ" ಎಂದರು.

ಅರ್ಜಿದಾರರ ಪರ ವಕೀಲ ವಿ ವಿನಯ್ ಅವರು ಸಾಹು ಅವರನ್ನು ಎಫ್‌ಐಆರ್‌ನಲ್ಲಿ ಮೊದಲ ಆರೋಪಿಯನ್ನಾಗಿಸಲಾಗಿತ್ತು. ಈಗ ಅವರನ್ನು ಕೈಬಿಟ್ಟು ಸ್ವಚ್ಛತಾ ಮೇಲ್ವಿಚಾರಕ ಮತ್ತು ಇತರರ ವಿರುದ್ಧ ಆರೋಪ ಮಾಡಲಾಗಿದೆ. ಹೀಗಾಗಿ, ಅದನ್ನು ದಾಖಲಿಸಬೇಕು" ಎಂದರು.

ಇದಕ್ಕೆ ಕಿವಿಗೊಡದ ನ್ಯಾಯಾಲಯವು ಆರೋಪ ಪಟ್ಟಿ ಸಲ್ಲಿಸಲು ಪೊಲೀಸರಿಗೆ ಅನುಮತಿಸಿ, ವಿಚಾರಣೆಯನ್ನು ಆಗಸ್ಟ್ 20ಕ್ಕೆ ಮುಂದೂಡಿತು.

## ಕೆ.ಆರ್. ಪುರದಲ್ಲಿ ಬೈಕ್ ಶೋರೂಂಗೆ ಬೆಂಕಿ

● ವಿಕ್ರಮ ವಾಹಿನಿ । ಬೆಂಗಳೂರು

ನಗರದ ಕೆ.ಆರ್. ಪುರದ ಎನ್‌ಆರ್‌ಐ ಲೇಔಟ್‌ನಲ್ಲಿರುವ ಎಲೆಕ್ಟ್ರಿಕ್ ಬೈಕ್ ಶೋರೂಂನಲ್ಲಿ ತಡರಾತ್ರಿ ಭಾರಿ ಬೆಂಕಿ ಅವಘಡ ಸಂಭವಿಸಿದ್ದು, 100ಕ್ಕೂ ಹೆಚ್ಚು ಬೈಕ್‌ಗಳು ಬೆಂಕಿಗಾಹುತಿಯಾಗಿವೆ. ಅದೃಷ್ಟವಶಾತ್ ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ.

ಶೋರೂಂ ರಾತ್ರಿ 9 ಗಂಟೆ ಸುಮಾರಿಗೆ ಎಂದಿನಂತೆ ಮುಚ್ಚಲಾಗಿತ್ತು. ಬಳಿಕ ಶೋರೂಂನಿಂದ ಹೊಗೆ ಬರುತ್ತಿರುವುದನ್ನು ಭದ್ರತಾ ಸಿಬ್ಬಂದಿ ಗಮನಿಸಿದ್ದಾರೆ. ತಕ್ಷಣ ಶೋರೂಂ ತೆರೆಯಲು ಮುಂದಾದಾಗ, ಒಳಗೆ ಬೆಂಕಿ ವ್ಯಾಪಕವಾಗಿ ಆವರಿಸಿಕೊಂಡಿರುವುದು ಕಂಡುಬಂದಿದೆ. ಕ್ಷಣಾರ್ಧದಲ್ಲೇ ಬೆಂಕಿ ಶೋರೂಂನ ಬಹುತೇಕ ಭಾಗಕ್ಕೆ ವ್ಯಾಪಿಸಿದ್ದರಿಂದ ಒಳಗಿದ್ದ ಎಲೆಕ್ಟ್ರಿಕ್ ಬೈಕ್‌ಗಳನ್ನು ಹೊರತೆಗೆಯಲು ಸಾಧ್ಯವಾಗಲಿಲ್ಲ.

ಮಾಹಿತಿ ತಿಳಿದು ಸ್ಥಳಕ್ಕೆ ಎರಡು ಅಗ್ನಿಶಾಮಕ ವಾಹನಗಳು ಹಾಗೂ ಸಿಬ್ಬಂದಿ ಧಾವಿಸಿ, ಬೆಂಕಿ ನಂದಿಸುವ ಕಾರ್ಯಾಚರಣೆ ಕೈಗೊಂಡರು. ಹಲವು ಗಂಟೆಗಳ ಕಾರ್ಯಾಚರಣೆಯ ಬಳಿಕ ಬೆಂಕಿಯನ್ನು ನಿಯಂತ್ರಣಕ್ಕೆ ತರಲಾಯಿತು. ಶೋರೂಂನಲ್ಲಿದ್ದ ಬಹುತೇಕ ಎಲ್ಲಾ ಬೈಕ್‌ಗಳು ಸುಟ್ಟು ಸಂಪೂರ್ಣವಾಗಿ ಹಾನಿಗೊಳಗಾಗಿವೆ.

ಪ್ರಾಥಮಿಕ ಮಾಹಿತಿಯ ಪ್ರಕಾರ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಕಾಣಿಸಿಕೊಂಡಿರುವ ಶಂಕೆ ವ್ಯಕ್ತವಾಗಿದೆ. ಆದರೆ ಬೆಂಕಿ ಅವಘಡಕ್ಕೆ ನಿಖರ ಕಾರಣ ಇನ್ನಷ್ಟೇ ತಿಳಿದುಬರಬೇಕಿದೆ. ಅಗ್ನಿಶಾಮಕ ಇಲಾಖೆ ಹಾಗೂ ಪೊಲೀಸರು ಘಟನೆಯ ಕುರಿತು ಪರಿಶೀಲನೆ ನಡೆಸುತ್ತಿದ್ದಾರೆ.

ಬೆಂಕಿಯ ತೀವ್ರತೆಯಿಂದ ಶೋರೂಂನ ಪಕ್ಕದಲ್ಲಿದ್ದ ಆಸ್ಪತ್ರೆಯ ಕಟ್ಟಡಕ್ಕೂ ಹಾನಿಯಾಗಿದ್ದು, ಮುನ್ನೆಚ್ಚರಿಕಾ ಕ್ರಮವಾಗಿ ಸುತ್ತಮುತ್ತಲಿನ ಪ್ರದೇಶದಲ್ಲಿ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಯಿತು. ಘಟನೆ ನಡೆದ ಸಂದರ್ಭದಲ್ಲಿ ಶೋರೂಂ ಮುಚ್ಚಿದ್ದರಿಂದ ಯಾವುದೇ ಸಿಬ್ಬಂದಿ ಒಳಗೆ ಇರಲಿಲ್ಲ. ಹೀಗಾಗಿ ಸಂಭವನೀಯ ದೊಡ್ಡ ಅನಾಹುತ ತಪ್ಪಿದಂತಾಗಿದೆ.

ಎಲೆಕ್ಟ್ರಿಕ್ ವಾಹನಗಳಲ್ಲಿರುವ ಬ್ಯಾಟರಿಗಳಿಂದ ಬೆಂಕಿ ವೇಗವಾಗಿ ಹರಡಿರುವ ಸಾಧ್ಯತೆಯ ಬಗ್ಗೆಯೂ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.

# ನಟ ಪ್ರಕಾಶ್ ರಾಜ್ ಆರೋಪ ಸುಳ್ಳು: ಜಿಬಿಎ ಸ್ಪಷ್ಟನೆ

● ವಿಕ್ರಮ ವಾಹಿನಿ । ಬೆಂಗಳೂರು



ನಟ ಪ್ರಕಾಶ್ ರಾಜ್ ಅವರು ವಿಡಿಯೋವೊಂದನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಯಬಿಟ್ಟಿದ್ದು, ಅದರಲ್ಲಿ ಅವರು ತಾನು ಬೆಂಗಳೂರಿನಲ್ಲೇ ಹುಟ್ಟಿ ಬೆಳೆದಿದ್ದರೂ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ–2026 ಪ್ರಕ್ರಿಯೆಯಲ್ಲಿ ತಮ್ಮ ಹೆಸರನ್ನು ಕೈಬಿಡಲಾಗಿದೆ ಎಂದು ತಿಳಿಸಿದ್ದಾರೆ. ಈ ಆರೋಪ ಸತ್ಯಕ್ಕೆ ದೂರವಾದುದು ಎಂದು ಬೆಂಗಳೂರು ಕೇಂದ್ರ ನಗರ ಪಾಲಿಕೆ ಆಯುಕ್ತರು ಹಾಗೂ ಕೇಂದ್ರ ಅಪರ ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಗದೀಶ್ ಜಿ., ಸ್ಪಷ್ಟನೆ ನೀಡಿದ್ದಾರೆ.

ಪ್ರಕಾಶ್ ರಾಜ್ ಅವರ ಹೆಸರು ಶಾಂತಿನಗರ ವಿಧಾನಸಭಾ ಕ್ಷೇತ್ರದ ಭಾಗ ಸಂಖ್ಯೆ 1 ರ ಕ್ರಮ ಸಂಖ್ಯೆ 970 ರಲ್ಲಿ ಜೂನ್ 16–2026 ರಂತೆ ಎಸ್ ಐ ಆರ್ ಚಟುವಟಿಕೆಗಳಿಗಾಗಿ ಮತದಾರರ ಪಟ್ಟಿಯನ್ನು ಸ್ಥಗಿತಗೊಳಿಸಿದ ದಿನಾಂಕ ನೋಂದಾಯಿಸಲಾಗಿದೆ.

ಬೂತ್ ಮಟ್ಟದ ಅಧಿಕಾರಿ ಮನೆ–ಮನೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದಾಗ, ಪ್ರಕಾಶ್ ರಾಜ್ ಅವರು ತಮ್ಮ ನೋಂದಾಯಿತ ವಿಳಾಸ ಫ್ಲಾಟ್ ಸಂಖ್ಯೆ 266, ಗಾರ್ಡನ್ ಅಪಾರ್ಟ್ಮೆಂಟ್, ವಿಠಲ್ ಮಲ್ಯ ರಸ್ತೆ, ಬೆಂಗಳೂರು–560001 ಇಲ್ಲಿಂದ ಸ್ಥಳಾಂತರಗೊಂಡಿದ್ದರು. ಅಪಾರ್ಟ್ ಮೆಂಟ್ ಮಾಲೀಕರಿಗೆ ದೂರವಾಣಿ ಮೂಲಕ ವಿಚಾರಿಸಿದಾಗ ನಟ ಪ್ರಕಾಶ್ ರಾಜ್ ಕಳೆದ 4 ವರ್ಷಗಳಿಂದ ಸದರಿ ಸ್ಥಳದಲ್ಲಿ ವಾಸವಿಲ್ಲ. ಪ್ರಸ್ತುತ ಬೇರೆ ಬಾಡಿಗೆದಾರರು ವಾಸವಿರುವುದಾಗಿ ತಿಳಿಸಿದ್ದರು.

ಬಿಎಲ್‌ಓ ಅವರು ನೆರೆಹೊರೆಯವರು ಮತ್ತು ಅಪಾರ್ಟಮೆಂಟ್ ನ ವ್ಯವಸ್ಥಾಪಕರನ್ನು ವಿಚಾರಿಸಿದ್ದಾರೆ. ಅವರ ಹೇಳಿಕೆಗಳ ಆಧಾರದ ಮೇಲೆ 'ಮಹಜರ್' ಸಿದ್ಧಪಡಿಸಿ, ಭಾರತೀಯ ಚುನಾವಣಾ ಆಯೋಗದ ಕಾನೂನು ಮತ್ತು ಮಾರ್ಗಸೂಚಿಗಳ ಪ್ರಕಾರ ಕಾನೂನು ಪ್ರಕ್ರಿಯೆಯನ್ನು ಅನುಸರಿಸಿ ಅವರ ಹೆಸರನ್ನು 'ಸ್ಥಳಾಂತರಗೊಂಡಿದೆ' ಎಂದು ಗುರುತಿಸಿದ್ದಾರೆ.

ಆಗಸ್ಟ್ 11 ರಂದು ಸಂಜೆ 05:30 ಕ್ಕೆ ಆಸ್ತಿ ವ್ಯವಸ್ಥಾಪಕರು ದೂರವಾಣಿ ಕರೆ ಮೂಲಕ ಈ ವಿಷಯವನ್ನು ಖಚಿತಪಡಿಸಿದ್ದು, ಈ ನೈಜ ಅಂಶಗಳ ಹಿನ್ನೆಲೆಯಲ್ಲಿ ನಟ ಪ್ರಕಾಶ್ ರಾಜ್ ರವರೊಂದಿಗೆ ತಾವು ಇಂದು ದೂರವಾಣಿ ಮೂಲಕ ಮಾತನಾಡಿರುವುದಾಗಿ ಆಯುಕ್ತರು ತಿಳಿಸಿದ್ದಾರೆ. 2ನೇ ಪುಟಕ್ಕೆ.

## 'ಇದು ಮುದಿ ಗುಳ್ಳೆ ನರಿ'

● ವಿಕ್ರಮ ವಾಹಿನಿ । ನವದೆಹಲಿ


ದೆಹಲಿಯಲ್ಲಿ ಕಾಕ್ರೋಚ್ ಜನತಾ ಪಕ್ಷ ನೇತೃತ್ವದ ವಿದ್ಯಾರ್ಥಿ ಪ್ರತಿಭಟನೆಯ ಬಳಿಕ ಹಿರಿಯ ನಟ ನಸೀರುದ್ದೀನ್ ಶಾ ಹಾಗೂ ನಟ ಪಿಯೂಷ್ ಮಿಶ್ರಾ ನಡುವೆ ನಡೆಯುತ್ತಿರುವ ವಾಗ್ವಾದ ಇದೀಗ ರಾಜಕೀಯ ವಲಯಕ್ಕೂ ತಲುಪಿದೆ. ಬಿಜೆಪಿ ಸಂಸದೆ ಹಾಗೂ ನಟಿ ಕಂಗನಾ ರಣಾವತ್ ಅವರು ನಸೀರುದ್ದೀನ್ ಶಾ ಅವರ ಹೇಳಿಕೆಗಳನ್ನು ಟೀಕಿಸಿದ್ದಾರೆ.



ವಿದ್ಯಾರ್ಥಿ ಪ್ರತಿಭಟನೆ ವೇಳೆ ಬಾಲಿವುಡ್‌ನ ಪ್ರಮುಖ ತಾರೆಯರು ಮೌನ ವಹಿಸಿರುವುದನ್ನು ನಸೀರುದ್ದೀನ್ ಶಾ ಪ್ರಶ್ನಿಸಿದ್ದರು. ಆತ್ಮಸಾಕ್ಷಿ ಹೇಳಿದಾಗ ಮಾತ್ರ ಮಾತನಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅವರು ಹೇಳಿಕೆ ನೀಡಿದ್ದರು. ಈ ಹಿನ್ನೆಲೆಯಲ್ಲಿ ಪಿಯೂಷ್ ಮಿಶ್ರಾ ಅವರು ಶಾ ಅವರ ಹೇಳಿಕೆಯನ್ನು ಟೀಕಿಸಿದ್ದರು.

**'ನಾಯಿ' ಹೇಳಿಕೆಗೆ ಕಂಗನಾ ತಿರುಗೇಟು**

ಪಿಯೂಷ್ ಮಿಶ್ರಾ ಅವರ ಹೇಳಿಕೆಗೆ ಬೆಂಬಲ ವ್ಯಕ್ತಪಡಿಸಿರುವ ಕಂಗನಾ, ತಮ್ಮ ಇನ್‌ಸ್ಟಾಗ್ರಾಂ ಖಾತೆಯಲ್ಲಿ ಈ ಕುರಿತು ಸುದ್ದಿ ವರದಿಯನ್ನು ಹಂಚಿಕೊಂಡು ನಸೀರುದ್ದೀನ್ ಶಾ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ನಾಯಿ ಎಂಬುದು ನಿಷ್ಠೆಯ ಸಂಕೇತ. ದೇಶದಿಂದ ಎಲ್ಲವನ್ನೂ ಪಡೆದುಕೊಂಡು ದೇಶದ ಪರವಾಗಿ ನಿಲ್ಲದ ಮನೋಭಾವವನ್ನು ಪ್ರಶ್ನಿಸಬೇಕು ಎಂದು ಕಂಗನಾ ಹೇಳಿದ್ದಾರೆ. ಇದೇ ಸಂದರ್ಭದಲ್ಲಿ ನಸೀರುದ್ದೀನ್ ಶಾ ಅವರನ್ನು 'ನಾಯಿ'ಗಿಂತ 'ನರಿ' ಎಂದು ಕರೆಯಲು ಬಯಸುವುದಾಗಿ ಅವರು ಟೀಕಿಸಿದ್ದಾರೆ.



**ಬಾಲಿವುಡ್ ಮೌನದ ಬಗ್ಗೆ ಶಾ ಪ್ರಶ್ನೆ**

ವಿದ್ಯಾರ್ಥಿ ಪ್ರತಿಭಟನೆ ಸಂದರ್ಭದಲ್ಲಿ ಬಾಲಿವುಡ್‌ನ ಅನೇಕ ನಟ–ನಟಿಯರು ಮೌನವಾಗಿರುವುದನ್ನು ನಸೀರುದ್ದೀನ್ ಶಾ ಪ್ರಶ್ನಿಸಿದ್ದರು. ಆತ್ಮಸಾಕ್ಷಿಯ ಮಾತು ಕೇಳಿದಾಗ ಮಾತ್ರ ಸಾರ್ವಜನಿಕವಾಗಿ ಮಾತನಾಡುವ ಪರಿಸ್ಥಿತಿ ಇದೆ ಎಂದು ಅವರು ಹೇಳಿದ್ದರು.

ಬಾಯಿಯಲ್ಲಿ ಮೂಳೆ ಇರುವ ನಾಯಿ ಬೊಗಳುವುದಿಲ್ಲ ಎಂಬ ಗಾದೆಯನ್ನು ಉಲ್ಲೇಖಿಸಿದ್ದ ಶಾ, ಮೂಳೆ ಬಿದ್ದಾಗ ಅಥವಾ ಹಲ್ಲು ಮುರಿದಾಗ ಮಾತ್ರ ಅದು ಬೊಗಳುತ್ತದೆ ಎಂದು ಹೇಳಿದ್ದರು. ಅವರ ಈ ಹೇಳಿಕೆಗೆ ಇದೀಗ ಪಿಯೂಷ್ ಮಿಶ್ರಾ ಹಾಗೂ ಕಂಗನಾ ರಣಾವತ್ ತೀವ್ರ ಪ್ರತಿಕ್ರಿಯೆ ನೀಡಿದ್ದು, ವಿವಾದ ಮತ್ತಷ್ಟು ಚರ್ಚೆಗೆ ಕಾರಣವಾಗಿದೆ. ಈ ವಿವಾದದ ನಡುವೆ ಸಾಮಾಜಿಕ ಜಾಲತಾಣಗಳಲ್ಲಿ ಇಬ್ಬರು ನಟರ ಹೇಳಿಕೆಗಳು ಹಾಗೂ ಕಂಗನಾ ಅವರ ಪ್ರತಿಕ್ರಿಯೆ ಕುರಿತು ಪರ–ವಿರೋಧದ ಚರ್ಚೆ ತೀವ್ರಗೊಂಡಿದೆ.

# 'ಹರ್ ಘರ್ ತಿರಂಗಾ, ಹರ್ ಮನ್ ತಿರಂಗಾ'

**ಸ್ವಾತಂತ್ರ್ಯ ದಿನದಂದು ಪ್ರತಿಯೊಬ್ಬರೂ ಹೆಮ್ಮೆಯಿಂದ ರಾಷ್ಟ್ರಧ್ವಜ ಹಾರಿಸಿ 'ಹರ್ ಘರ್ ತಿರಂಗಾ' ಅಭಿಯಾನದಲ್ಲಿ ಪಾಲ್ಗೊಳ್ಳಬೇಕು. ಸ್ವಾತಂತ್ರ್ಯ ಹೋರಾಟಗಾರರನ್ನು ಸ್ಮರಿಸಿ, 'ವಿಕಸಿತ ಭಾರತ' ನಿರ್ಮಾಣಕ್ಕೆ ಸಂಕಲ್ಪ ತೊಡಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದ್ದಾರೆ.**

● ವಿಕ್ರಮ ವಾಹಿನಿ । ನವದೆಹಲಿ



ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ದೇಶದ ಪ್ರತಿಯೊಬ್ಬ ನಾಗರಿಕರು 'ಹರ್ ಘರ್ ತಿರಂಗಾ' ಅಭಿಯಾನದಲ್ಲಿ ಉತ್ಸಾಹದಿಂದ ಪಾಲ್ಗೊಳ್ಳಬೇಕು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಕರೆ ನೀಡಿದ್ದಾರೆ.

ಇನ್‌ಸ್ಟಾಗ್ರಾಂನಲ್ಲಿ ಹಂಚಿಕೊಂಡಿರುವ ವಿಶೇಷ ವಿಡಿಯೊ ಸಂದೇಶದಲ್ಲಿ ಮೋದಿ, ಆಗಸ್ಟ್ 15ರಂದು ಹೆಮ್ಮೆ ಮತ್ತು ಗೌರವದಿಂದ ಸ್ವಾತಂತ್ರ್ಯ ದಿನವನ್ನು ಆಚರಿಸುವಂತೆ ಮನವಿ ಮಾಡಿದ್ದಾರೆ. ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರನ್ನು ಸ್ಮರಿಸಿ ಗೌರವ ಸಲ್ಲಿಸುವುದರ ಜೊತೆಗೆ, 'ವಿಕಸಿತ ಭಾರತ' ನಿರ್ಮಾಣಕ್ಕೆ ಸಂಕಲ್ಪ ತೊಡಬೇಕೆಂದು ಹೇಳಿದರು.

ಪ್ರತಿಯೊಂದು ಮನೆಯ ಮೇಲೂ ರಾಷ್ಟ್ರಧ್ವಜವನ್ನು ಹೆಮ್ಮೆಯಿಂದ ಹಾರಿಸುವ ಮೂಲಕ 'ಹರ್ ಘರ್ ತಿರಂಗಾ, ಹರ್ ಮನ್ ತಿರಂಗಾ' ಅಭಿಯಾನದಲ್ಲಿ ಭಾಗವಹಿಸಬೇಕು ಎಂದು ಪ್ರಧಾನಿ ಮನವಿ ಮಾಡಿದರು. ತ್ರಿವರ್ಣ ಧ್ವಜವು ದೇಶದ ಏಕತೆ, ಹೆಮ್ಮೆ ಮತ್ತು ರಾಷ್ಟ್ರೀಯ ಭಾವನೆಯ ಸಂಕೇತವಾಗಿದೆ ಎಂದು ಅವರು ಹೇಳಿದರು.

ದೇಶಪ್ರೇಮದ ಭಾವನೆ ಬಲಪಡಿಸುವ ಅಭಿಯಾನ 'ಹರ್ ಘರ್ ತಿರಂಗಾ' ಅಭಿಯಾನವು ಜನರಲ್ಲಿ ರಾಷ್ಟ್ರಧ್ವಜದೊಂದಿಗೆ ಭಾವನಾತ್ಮಕ ಬಾಂಧವ್ಯವನ್ನು ಗಟ್ಟಿಗೊಳಿಸುವ ಉದ್ದೇಶ ಹೊಂದಿದೆ. ಮನೆಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ತ್ರಿವರ್ಣ ಧ್ವಜ ಹಾರಿಸುವ ಮೂಲಕ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗವನ್ನು ಸ್ಮರಿಸಲು ಅವಕಾಶ ಕಲ್ಪಿಸುತ್ತದೆ.

ವಿಕಸಿತ ಭಾರತದ ಸಂಕಲ್ಪ

ಸ್ವಾತಂತ್ರ್ಯೋತ್ಸವವನ್ನು ಕೇವಲ ಆಚರಣೆಗೆ ಸೀಮಿತಗೊಳಿಸದೆ, ದೇಶದ ಅಭಿವೃದ್ಧಿ ಮತ್ತು ಏಕತೆಗಾಗಿ ಹೊಸ ಸಂಕಲ್ಪ ಕೈಗೊಳ್ಳಬೇಕು ಎಂದು ಪ್ರಧಾನಿ ಕರೆ ನೀಡಿದರು. ಪ್ರತಿಯೊಬ್ಬ ನಾಗರಿಕರ ಸಕ್ರಿಯ ಪಾಲ್ಗೊಳ್ಳುವಿಕೆಯ ಮೂಲಕ ದೇಶಪ್ರೇಮ, ಒಗ್ಗಟ್ಟು ಮತ್ತು 'ವಿಕಸಿತ ಭಾರತ'ದ ಆಶಯಕ್ಕೆ ಮತ್ತಷ್ಟು ಬಲ ಸಿಗಲಿದೆ ಎಂದು ಹೇಳಿದರು.

# ಹಾಳು ಆಹಾರ ಸಿಕ್ಕರೆ ಹೋಟೆಲ್, ಪಬ್, ಬಾರ್‌ಗಳಿಗೆ ದಂಡ

● ವಿಕ್ರಮ ವಾಹಿನಿ । ಬೆಂಗಳೂರು

ನಗರದ ಕೆಲವು ಸ್ಟಾರ್ ಹೋಟೆಲ್‌ಗಳ ಅಡುಗೆಮನೆಗಳಲ್ಲಿ ಅವಧಿ ಮೀರಿದ ಆಹಾರ, ಫಂಗಸ್ ಹಿಡಿದ ತರಕಾರಿ, ಹಾಳಾದ ಮಾಂಸ ಹಾಗೂ ಹಾಲಿನ ಉತ್ಪನ್ನಗಳು ಪತ್ತೆಯಾದ ಹಿನ್ನೆಲೆಯಲ್ಲಿ ಆಹಾರ ಸುರಕ್ಷತಾ ಇಲಾಖೆ ಹೋಟೆಲ್, ಪಬ್, ಬಾರ್ ಮತ್ತು ರೆಸ್ಟೋರೆಂಟ್‌ಗಳಿಗೆ ಹೊಸ ಮಾರ್ಗಸೂಚಿ ಪ್ರಕಟಿಸಿದೆ.

ಇತ್ತೀಚೆಗೆ ನಡೆದ ವಿಶೇಷ ತಪಾಸಣೆಯಲ್ಲಿ 60ಕ್ಕೂ ಹೆಚ್ಚು 3–ಸ್ಟಾರ್ ಹಾಗೂ 5–ಸ್ಟಾರ್ ಹೋಟೆಲ್‌ಗಳನ್ನು ಪರಿಶೀಲಿಸಲಾಗಿದ್ದು, 1,000 ಕೆಜಿಗೂ ಅಧಿಕ ಆಹಾರ ಪದಾರ್ಥಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಇಲಾಖೆ ತಿಳಿಸಿದೆ. ಗ್ರಾಹಕರ ಆರೋಗ್ಯದ ದೃಷ್ಟಿಯಿಂದ ಆಹಾರ ಸಂಗ್ರಹಣೆ, ಅಡುಗೆ ಮತ್ತು ನಿರ್ವಹಣೆಯಲ್ಲಿ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಲಾಗಿದೆ.

ಮಾಂಸಾಹಾರವನ್ನು 4 ಡಿಗ್ರಿ ಸೆಲ್ಸಿಯಸ್ ಅಥವಾ ಅದಕ್ಕಿಂತ ಕಡಿಮೆ ತಾಪಮಾನದಲ್ಲಿ ಸಂಗ್ರಹಿಸಬೇಕು. ಶೀತ ಆಹಾರವನ್ನು 5 ಡಿಗ್ರಿ ಹಾಗೂ ಫ್ರೋಜನ್ ಆಹಾರವನ್ನು ಮೈನಸ್ 18 ಡಿಗ್ರಿ ಸೆಲ್ಸಿಯಸ್ ಅಥವಾ ಅದಕ್ಕಿಂತ ಕಡಿಮೆ ತಾಪಮಾನದಲ್ಲಿ ಇರಿಸಬೇಕು.

ವೆಜ್ ಆಹಾರವನ್ನು 65 ಡಿಗ್ರಿ ಹಾಗೂ ನಾನ್‌ವೆಜ್ ಆಹಾರವನ್ನು 70 ಡಿಗ್ರಿ ಸೆಲ್ಸಿಯಸ್ ತಾಪಮಾನದಲ್ಲಿ ಇರಿಸುವಂತೆ ಸೂಚಿಸಲಾಗಿದೆ. ತಯಾರಿಸಿದ ಆಹಾರವನ್ನು ಮರುಬಿಸಿ ಮಾಡುವಾಗ ಕನಿಷ್ಠ 75 ಡಿಗ್ರಿ ಸೆಲ್ಸಿಯಸ್ ತಾಪಮಾನ ಕಾಯ್ದುಕೊಳ್ಳಬೇಕು.

ಕಚ್ಚಾ, ಅರೆಬೆಂದ ಹಾಗೂ ಸಂಪೂರ್ಣವಾಗಿ ಬೇಯಿಸಿದ ಆಹಾರವನ್ನು ಪ್ರತ್ಯೇಕವಾಗಿ ಸಂಗ್ರಹಿಸುವುದು ಕಡ್ಡಾಯ. ವೆಜ್ ಮತ್ತು ನಾನ್‌ವೆಜ್ ಆಹಾರಕ್ಕೂ ಪ್ರತ್ಯೇಕ ಸಂಗ್ರಹಣೆ ಹಾಗೂ ನಿರ್ವಹಣಾ ವ್ಯವಸ್ಥೆ ಇರಬೇಕು ಎಂದು ಇಲಾಖೆ ಸೂಚಿಸಿದೆ.

ಅಡುಗೆಗೆ ಬಳಸುವ ಎಣ್ಣೆಯ ಗುಣಮಟ್ಟವನ್ನೂ ಪರಿಶೀಲಿಸಬೇಕು. ಎಣ್ಣೆಯಲ್ಲಿನ ಟೋಟಲ್ ಪೋಲಾರ್ ಕಾಂಪೌಂಡ್ಸ್ ಪ್ರಮಾಣ ಶೇ.25 ಮೀರದಂತೆ ನೋಡಿಕೊಳ್ಳಬೇಕು ಎಂದು ಮಾರ್ಗಸೂಚಿಯಲ್ಲಿ ತಿಳಿಸಲಾಗಿದೆ.

ಹೋಟೆಲ್, ಪಬ್, ಬಾರ್ ಮತ್ತು ರೆಸ್ಟೋರೆಂಟ್‌ಗಳು ಆಹಾರ ಸುರಕ್ಷತೆ ಮತ್ತು ಗುಣಮಟ್ಟಕ್ಕೆ ಸಂಬಂಧಿಸಿದ ಎಫ್‌ಎಸ್‌ಎಸ್‌ಎಐ ಪ್ರಮಾಣಪತ್ರವನ್ನು ಗ್ರಾಹಕರಿಗೆ ಕಾಣುವಂತೆ ಪ್ರದರ್ಶಿಸಬೇಕು. ನಿಯಮಗಳನ್ನು ಉಲ್ಲಂಘಿಸುವ ಸಂಸ್ಥೆಗಳ ವಿರುದ್ಧ ಪರಿಶೀಲನೆ ನಡೆಸಿ ಅಗತ್ಯ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಇಲಾಖೆ ಎಚ್ಚರಿಸಿದೆ.

ಆಹಾರ ಸುರಕ್ಷತಾ ನಿಯಮಗಳ ಉಲ್ಲಂಘನೆ ತಡೆಗಟ್ಟಲು ಮುಂದಿನ ದಿನಗಳಲ್ಲೂ ಹೋಟೆಲ್‌ಗಳು ಹಾಗೂ ಆಹಾರ ಸೇವಾ ಕೇಂದ್ರಗಳ ಮೇಲೆ ತಪಾಸಣೆ ಮುಂದುವರಿಯಲಿದೆ. ಅವಧಿ ಮೀರಿದ ಅಥವಾ ಹಾಳಾದ ಆಹಾರ ಪದಾರ್ಥಗಳನ್ನು ಬಳಸಿ ಗ್ರಾಹಕರ ಆರೋಗ್ಯಕ್ಕೆ ಅಪಾಯ ಉಂಟುಮಾಡುವವರ ವಿರುದ್ಧ ಯಾವುದೇ ರಾಜಿ ಇಲ್ಲದೆ ಕ್ರಮ ಕೈಗೊಳ್ಳುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ.

### ಹೋಟೆಲ್‌ಗಳಿಗೆ ಆಹಾರ ಸುರಕ್ಷತಾ ನಿಯಮಗಳ ಬಿಸಿ

- ಮಾಂಸಾಹಾರವನ್ನು 4°C ಅಥವಾ ಅದಕ್ಕಿಂತ ಕಡಿಮೆ ತಾಪಮಾನದಲ್ಲಿ ಸಂಗ್ರಹಿಸಬೇಕು.
- ವೆಜ್ ಆಹಾರ 65ಲಿಅ & ನಾನ್‌ವೆಜ್ ಆಹಾರ 70ಲಿಅ ತಾಪಾಮನದಲ್ಲಿ ಇಡಬೇಕು.
- ಶೀತ ಆಹಾರ 5°C & ಫ್ರೋಜನ್ ಆಹಾರ –18ಲಿಅ ಅಥವಾ ಅದಕ್ಕಿಂತ ಕಡಿಮೆ ತಾಪಮಾನದಲ್ಲಿ ಇರಿಸಬೇಕು
- ಅಡುಗೆ 25% ಟಿಪಿಸಿ ಮೀರದಂತ ಎಣ್ಣೆಯನ್ನು ಆಹಾರಕ್ಕೆ ಬಳಸಬೇಕು.
- ಕಚ್ಚಾ ಆಹಾರ, ಅರೆಬೆಂದ ಆಹಾರ ಮತ್ತು ಪೂರ್ಣವಾಗಿ ಬೇಯಿಸಿದ ಆಹಾರವನ್ನು ಪ್ರತ್ಯೇಕವಾಗಿ ಸಂಗ್ರಹಿಸಬೇಕು.
- ವೆಜ್ ಮತ್ತು ನಾನ್‌ವೆಜ್ ಆಹಾರಕ್ಕೆ ಪ್ರತ್ಯೇಕ ಸಂಗ್ರಹಣೆ ಹಾಗೂ ನಿರ್ವಹಣೆ ಕಡ್ಡಾಯ.
- ತಯಾರಿಸಿದ ಆಹಾರ ಮತ್ತೆ ಬಿಸಿ ಮಾಡುವಾಗ 75ಲಿಅ ತಾಪಮಾನ ಅಥವಾ ಅದಕ್ಕಿಂತ ಹೆಚ್ಚಿನ ತಾಪಮಾನ ಬಳಸಬೇಕು.
- ಜೊತೆಗೆ ಎಫ್‌ಎಸ್‌ಎಸ್‌ಎಐ ಅಂಗೀಕೃತ ಪ್ರಮಾಣ ಪತ್ರ ಹೋಟೆಲ್ ಬಲ್ಲಿ ಪ್ರದರ್ಶನ ಮಾಡಬೇಕು.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481

ವಿಕ್ರಮ ವಾಹಿನಿ

## ಸವಿ ವಾಹಿನಿ

ನಿಮ್ಮ ಜೀವನದ ಎಲ್ಲ ಪ್ರಶ್ನೆಗಳಿಗೆ ಗೂಗಲನಲ್ಲಿ ಉತ್ತರ ಸಿಗಲು ಸಾಧ್ಯವಿಲ್ಲ. ನಿಮಗೆ ಬೇಕಾಗಿರುವುದನ್ನೆಲ್ಲ ಮಾಡಿಕೊ ಇಂಟರನೆಟನಿಂದ ಡೌನಲೋಡ ಮಾಡಿಕೊಳ್ಳಲು ಬರಲ್ಲ. ಸೋ ರಿಯಾಲಿಟಿಯನ್ನು ಅರ್ಥ ಮಾಡಿಕೊಳ್ಳಿ. ನಿಮಗೇನು ಬೇಕೋ ಅದನ್ನೇ ನೀವೇ ಕಷ್ಟಪಟ್ಟು ಬೆವರು ಸುರಿಸಿ ಪಡೆದುಕೊಳ್ಳಿ.

## ದಿನ ಪಂಚಾಂಗ

ಆಗಸ್ಟ್, 12–2026 ಗ್ರೀಷ್ಮ ಋತು, ಆಷಾಢ ಮಾಸ, ಬಹುಳ ಪಕ್ಷ. ಅಮಾವಸ್ಯೆ ತಿಥಿ ರಾ–11:36
ಪುಷ್ಯ ನಕ್ಷತ್ರ ಬೆ–9:02
ರಾಹುಕಾಲ ಮ–12:24–1:58
ಭೀಮನ ಅಮಾವಾಸ್ಯೆ, ಜ್ಯೋತಿರ್ಭೀಮೇಶ್ವರ ವ್ರತ, ದಿವಸೀ ಗೌರೀಪೂಜೆ, ನರಹರಿ ಪರ್ವತ ತೀರ್ಥ, ಮರವಂತೆ ಜಾತ್ರೆ, ಪಂಜ ಜಾತ್ರೆ, ಟಿ. ನರಸೀಪುರ ಜಾತ್ರೆ,ಕೊಳ್ಳೇಗಾಲ ಕೊಳ್ಳೇಗಾಲ ಸುಬ್ರಹ್ಮಣ್ಯ ಉಯ್ಯಾಲೋತ್ಸವ, ಹೊನ್ನುಟಗಿ ಹೊನ್ನಮಲ್ಲೇಶ್ವರ ಕಾರ್ತಿಕ, ಆಖ್ರಿ ಚಾರ್‌ಷುಂಬಾ, ಚಡಚಣ ಉತ್ಸವ, ರಂಭಾಪುರಿ ದೇಶಿಕೇಂದ್ರಸ್ವಾಮಿ ಅಡ್ಡಪಲ್ಲಕ್ಕಿ, ರಾಜಮಹೇಂದ್ರಿ ಪುಣ್ಯದಿನ, ಸುರಪುರ ನೀಲಯ್ಯಸ್ವಾಮಿ ಪುಣ್ಯದಿನ

## ಆರೋಗ್ಯ

# ಮಕ್ಕಳಿಗೆ ವೈರಲ್ ಸೋಂಕಿನ ಕಾಟ

● ವಿಕ್ರಮ ವಾಹಿನಿ | ಬೆಂಗಳೂರು

ರಾಜಧಾನಿ ಬೆಂಗಳೂರಿನಲ್ಲಿ ಮಳೆ, ಬಿಸಿಲು ಹಾಗೂ ಶೆಕೆ ಮಿಶ್ರಿತ ವಾತಾವರಣ ಮುಂದುವರಿದಿರುವ ಬೆನ್ನಲ್ಲೇ ಮಕ್ಕಳಲ್ಲಿ ವೈರಲ್ ಜ್ವರ, ಕೆಮ್ಮು, ನೆಗಡಿ ಸೇರಿದಂತೆ ವಿವಿಧ ಸೋಂಕುಗಳ ಪ್ರಕರಣಗಳು ಹೆಚ್ಚಾಗುತ್ತಿವೆ. ಕಳೆದ ಕೆಲವು ದಿನಗಳಿಂದ ಮಕ್ಕಳನ್ನು ಆಸ್ಪತ್ರೆಗೆ ಕರೆತರುವ ಪೋಷಕರ ಸಂಖ್ಯೆ ಹೆಚ್ಚಾಗಿದೆ ಎಂದು ವರದಿಯಾಗಿದೆ. ಇದರೊಂದಿಗೆ ವಾಂತಿ, ಭೇದಿ ಸೇರಿದಂತೆ ಜಠರ ಸಂಬಂಧಿತ ಸಮಸ್ಯೆಗಳು ಹಾಗೂ ಆಹಾರದಿಂದ ಉಂಟಾಗುವ ಸೋಂಕಿನ ಪ್ರಕರಣಗಳೂ ಕಂಡುಬರುತ್ತಿವೆ.

ಹವಾಮಾನದಲ್ಲಿ ಪದೇಪದೇ ಆಗುತ್ತಿರುವ ಬದಲಾವಣೆ ಮಕ್ಕಳಲ್ಲಿ ಸಾಮಾನ್ಯ ವೈರಲ್ ಸೋಂಕುಗಳಿಗೆ ಕಾರಣವಾಗುವ ಅಂಶಗಳಲ್ಲಿ ಒಂದಾಗಿರಬಹುದು. ಮಳೆಗಾಲದಲ್ಲಿ ತೇವಾಂಶ ಹೆಚ್ಚಾಗುವುದರಿಂದ ಸಾಂಕ್ರಾಮಿಕ ರೋಗಗಳ ಹರಡುವಿಕೆಗೆ ಅನುಕೂಲಕರ ವಾತಾವರಣ ನಿರ್ಮಾಣವಾಗುವ ಸಾಧ್ಯತೆಯಿದ್ದು, ಮಕ್ಕಳ ಆರೋಗ್ಯದ ಬಗ್ಗೆ ಪೋಷಕರು ಹೆಚ್ಚಿನ ಎಚ್ಚರಿಕೆ ವಹಿಸುವ ಅಗತ್ಯವಿದೆ.

**ಚಂಡಿಪುರ ವೈರಸ್ ಬಗ್ಗೆ ಎಚ್ಚರಿಕೆ**

ಇದರ ನಡುವೆ ಗುಜರಾತ್‌ನಲ್ಲಿ ಚಂಡಿಪುರ ವೈರಸ್ ಪ್ರಕರಣಗಳು ವರದಿಯಾಗಿರುವುದು ಆತಂಕಕ್ಕೆ ಕಾರಣವಾಗಿದೆ. ಕೇಂದ್ರ ಸರ್ಕಾರ ಗುಜರಾತ್ ಮತ್ತು ರಾಜಸ್ಥಾನದಲ್ಲಿ ಸೋಂಕಿನ ಕುರಿತು ನಿಗಾ ಹಾಗೂ ತನಿಖೆ ಬಲಪಡಿಸಲು ರಾಷ್ಟ್ರೀಯ ಜಂಟಿ ರೋಗ ಏಕಾಏಕಿ ಪ್ರತಿಕ್ರಿಯಾ ತಂಡವನ್ನು ನಿಯೋಜಿಸಿದೆ. ವರದಿಯಾಗಿರುವ ಪ್ರಕರಣಗಳು ಮುಖ್ಯವಾಗಿ 15 ವರ್ಷದೊಳಗಿನ ಮಕ್ಕಳಲ್ಲಿವೆ.

ಚಂಡಿಪುರ ವೈರಸ್ ಸಾಮಾನ್ಯ ಜ್ವರದಂತೆ ಆರಂಭವಾಗಿ, ಕೆಲವು ಸಂದರ್ಭಗಳಲ್ಲಿ ತೀವ್ರ ನರಮಂಡಲದ ಸಮಸ್ಯೆಗಳಿಗೆ ಕಾರಣವಾಗಬಹುದು. ಹಠಾತ್ ಜ್ವರ, ತಲೆನೋವು, ವಾಂತಿ, ಅತಿಯಾದ ನಿದ್ರೆ ಅಥವಾ ಮಂಕು, ಸೆಳೆತ ಹಾಗೂ ಪ್ರಜ್ಞೆ ಕಳೆದುಕೊಳ್ಳುವಂತಹ ಲಕ್ಷಣಗಳು ಕಂಡುಬಂದರೆ ತಕ್ಷಣ ವೈದ್ಯಕೀಯ ನೆರವು ಪಡೆಯುವುದು ಅಗತ್ಯ.

**ಸ್ವಚ್ಛತೆ, ಮುನ್ನೆಚ್ಚರಿಕೆ ಅಗತ್ಯ**

ಮಕ್ಕಳಿಗೆ ಕುದಿಸಿ ತಣ್ಣಗಾದ ಅಥವಾ ಸುರಕ್ಷಿತ ನೀರು ನೀಡುವುದು, ಆಹಾರವನ್ನು ಸ್ವಚ್ಛವಾಗಿ ತಯಾರಿಸಿ ತಾಜಾವಾಗಿ ನೀಡುವುದು ಹಾಗೂ ಹೊರಗಿನ ಆಹಾರ ಸೇವನೆಯಲ್ಲಿ ಎಚ್ಚರಿಕೆ ವಹಿಸುವಂತೆ ತಜ್ಞರು ಸಲಹೆ ನೀಡುತ್ತಾರೆ. ಸೊಳ್ಳೆ, ಮರಳುಹುಳು ಸೇರಿದಂತೆ ಕೀಟಗಳ ಕಡಿತದಿಂದ ರಕ್ಷಿಸಿಕೊಳ್ಳಲು ಮನೆ ಹಾಗೂ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛವಾಗಿಡುವುದು, ಅಗತ್ಯವಿದ್ದಲ್ಲಿ ಕೀಟ ನಿವಾರಕ ಕ್ರಮಗಳನ್ನು ಕೈಗೊಳ್ಳುವುದು ಸಹ ಮುಖ್ಯವಾಗಿದೆ. ಚಂಡಿಪುರ ವೈರಸ್ ವಿರುದ್ಧ ಸದ್ಯ ನಿರ್ದಿಷ್ಟ ಲಸಿಕೆ ಅಥವಾ ವೈರಸ್ ನಿರೋಧಕ ಚಿಕಿತ್ಸೆ ಲಭ್ಯವಿಲ್ಲದ ಕಾರಣ, ಕೀಟ ನಿಯಂತ್ರಣ ಮತ್ತು ಸಮಯಕ್ಕೆ ಸರಿಯಾಗಿ ವೈದ್ಯಕೀಯ ನೆರವು ಪಡೆಯುವುದು ಪ್ರಮುಖ ಮುನ್ನೆಚ್ಚರಿಕಾ ಕ್ರಮಗಳಾಗಿವೆ.

ಮಕ್ಕಳಲ್ಲಿ ನಿರಂತರ ಅಥವಾ ತೀವ್ರ ಜ್ವರ, ಉಸಿರಾಟದ ತೊಂದರೆ, ನಿರಂತರ ವಾಂತಿ, ಅತಿಯಾದ ಮಂಕು, ಸೆಳೆತ ಅಥವಾ ಪ್ರಜ್ಞೆ ಕಳೆದುಕೊಳ್ಳುವ ಲಕ್ಷಣಗಳು ಕಂಡುಬಂದರೆ ಮನೆಯಲ್ಲೇ ಚಿಕಿತ್ಸೆ ನೀಡದೆ ತಕ್ಷಣ ವೈದ್ಯರನ್ನು ಸಂಪರ್ಕಿಸುವುದು ಅಗತ್ಯ. ಯಾವುದೇ ಸೋಂಕಿನ ಬಗ್ಗೆ ಅನಗತ್ಯ ಆತಂಕಕ್ಕೆ ಒಳಗಾಗದೆ, ಮಕ್ಕಳ ಆರೋಗ್ಯದಲ್ಲಿ ಅಸಹಜ ಬದಲಾವಣೆ ಕಂಡುಬಂದಾಗ ಸಮಯಕ್ಕೆ ಸರಿಯಾಗಿ ವೈದ್ಯಕೀಯ ಸಲಹೆ ಪಡೆಯುವುದು ಸೂಕ್ತ.

# ಇಂದಿನಿಂದ ಶ್ರೀಜ್ಯೋತಿರ್ಭೀಮೇಶ್ವರ ವ್ರತ: ನಾಳೆಯಿಂದ ಶ್ರಾವಣ ಮಾಸ

ಹಿಂದೂ ಸಂಪ್ರದಾಯದಲ್ಲಿ ಆಷಾಢ ಮಾಸದ ಕೊನೆಯ ದಿನವಾದ ಅಮಾವಾಸ್ಯೆಯನ್ನು ಭೀಮನ ಅಮಾವಾಸ್ಯೆ ಎಂದು ಆಚರಿಸಲಾಗುತ್ತದೆ.

ಭೀಮ ಎಂದರೆ ಪಾಂಡವ ವಂಶಜ ಭೀಮಸೇನನಲ್ಲ. ಈಶ್ವರನನ್ನು ಈ ಹೆಸರಿನಿಂದ ಕರೆಯಲಾಗುತ್ತದೆ. ಅಪರಿಮಿತ ಬಲ, ಭಕ್ತರ ಮನೋಭಿಷ್ಟ ಈಡೇರಿಕೆಯಂತಹ ಸದ್ಗುಣಗಳುಳ್ಳ ಶ್ರೀರುದ್ರದೇವರನ್ನೂ ಭೀಮ ಎಂದು ಕರೆಯಲಾಗುತ್ತದೆ. ಈ ಭೀಮನಾಮಕ ಶ್ರೀರುದ್ರದೇವರನ್ನು ಜ್ಯೋತಿ ರೂಪದ ದೀಪದಲ್ಲಿ ಆವಾಹಿಸಿ ಪೂಜಿಸುವುದರಿಂದ ಜ್ಯೋತಿರ್ಭೀಮೇಶ್ವರ ವ್ರತ ಎಂದು ಕರೆಯಲಾಗುತ್ತದೆ.

ಇವುಗಳ ಜತೆ, ಮುದವಾಗಿ ಸುರಿಯುವ ಜಡಿ ಮಳೆಯ ಮಧ್ಯೆ ಹದವಾಗಿ ಬೇಯಿಸಿದ ಬಿಸಿ ಬಿಸಿ ಭಕ್ಷ್ಯ, ಭೋಜ್ಯಗಳನ್ನು, ಪಾಯಸ, ಕಡುಬು ಇತ್ಯಾದಿ ಮೇಲೋಗರಗಳನ್ನು ಮಜವಾಗಿ ಸವಿದು ಭುಜ ಬಲ ಹೆಚ್ಚಿಸಿಕೊಳ್ಳುವ ಕಾಲ. ಕೃಷಿ ಆಧಾರಿತ ದೇಶದಲ್ಲಿ ಈ ತಿಂಗಳಿಂದ ರೈತನಿಗೆ ಕೆಲಸ ಹೆಚ್ಚು.

ರಾಗಿ, ಭತ್ತ ಇತ್ಯಾದಿ ಆಹಾರ ಧಾನ್ಯಗಳ ಬೀಜ ಬಿತ್ತನೆ, ಬೆಳೆಯ ಆರೈಕೆ ಕೆಲಸಗಳು ಆರಂಭ. ಕೃಷಿಯ ಕಾಯಕದಲ್ಲಿ ತೊಡಗುವ ರೈತನಿಗೆ ದೈಹಿಕ ಶಕ್ತಿ ಅವಶ್ಯ. ಇದರೊಟ್ಟಿಗೆ ಕೆಲಸದ ಮಧ್ಯೆ ತೊಡಗಿಸಿಕೊಳ್ಳುವ ಹಬ್ಬಗಳಿಂದ ದೈಹಿಕ ಬಲ ಹಾಗೂ ಮಾನಸಿಕ ನೆಮ್ಮದಿ ದೊರೆಯುತ್ತದೆ.

ಈ ವರ್ಷ ಮಳೆ ಕೊರತೆಯಾಗಿದೆ. ಇಂದ್ರ ದೇವರ ಅನುಗ್ರಹದಿಂದ ಉತ್ತಮ ಮಳೆ ಸುರಿಯಲಿ. ಇಳೆ ಉತ್ತಮ ಬೆಳೆ ಬೆಳೆಯಲಿ. ಸಸ್ಯ ಸಂಪತ್ತು, ಗೋ ಸಂಪತ್ತು ಹೆಚ್ಚಲಿ.

## ಭೀಮನ ಅಮಾವಾಸ್ಯೆ ವ್ರತದ ವಿಶೇಷ ಆಚರಣೆ

ವಿವಾಹಿತ ಮಹಿಳೆಯರು ತನ್ನ ಪತಿಯ ಆಯುಷ್ಯ ಹಾಗೂ ಶ್ರೇಯಸ್ಸಿಗಾಗಿ, ಈ ದಿನ ಶ್ರೀರುದ್ರದೇವರು(ಶಿವ) ಹಾಗೂ ಪಾರ್ವತೀ ದೇವಿಯನ್ನು ಶ್ರೀಜ್ಯೋತಿರ್ಭೀಮೇಶ್ವರ ರೂಪದಲ್ಲಿ ಆರಾಧಿಸಬೇಕು. ಕನ್ಯೆಯರು ಉತ್ತಮ ಗುಣಗಳಿಂದ ಕೂಡಿದ ವರ ಪ್ರಾಪ್ತವಾಗಲೆಂದು ಈ ವ್ರತ ಆಚರಿಸುತ್ತಾರೆ.

ಆಷಾಢ ಮಾಸದ ಕೊನೆಯ ದಿನವೇ ಭೀಮನ ಅಮಾವಾಸ್ಯೆ, ಇದನ್ನು ನಾಗರ ಅಮಾವಾಸ್ಯೆ ಎಂದೂ ಕರೆಯಲಾಗುತ್ತದೆ. ಈ ದಿನ ಶ್ರೀ ರುದ್ರದೇವರು ಹಾಗೂ ಪಾರ್ವತಿದೇವಿಯನ್ನು ಭಕ್ತಿಯಿಂದ ಪೂಜಿಸಬೇಕು. ಪತಿಗೆ ದೀರ್ಘಾಯುಷ್ಯ, ಆರೋಗ್ಯ ಸೇರಿದಂತೆ ಯಶಸ್ಸನ್ನು ಕರುಣಿಸಲೆಂದು ಬೇಡಿಕೊಳ್ಳಬೇಕು.

ಮಹಿಳೆಯರು ಬೆಳಗ್ಗೆ ಎದ್ದು, ಶುಚಿರ್ಭೂತರಾಗಿ ಹೊಸ ವಸ್ತ್ರ ಧರಿಸಬೇಕು. ನಂತರ ಒಂದು ತಟ್ಟೆಯಲ್ಲಿ ಅಕ್ಕಿಯನ್ನು ಹರಡಿ, ಅದರ ಮೇಲೆ ಎರಡು ದೀಪಸ್ತಂಭಗಳನ್ನಿಟ್ಟು ತುಪ್ಪ, ಶುದ್ಧ ಎಳ್ಳೆಣ್ಣೆ ಅಥವಾ ಕೊಬ್ಬರಿ ಎಣ್ಣೆ ಹಾಕಿ ಹಚ್ಚಬೇಕು. ಈ ದೀಪಗಳಲ್ಲಿ ಪುರುಷ ಹಾಗೂ ಪ್ರಕೃತಿ ಸ್ವರೂಪರಾದ ಶ್ರೀರುದ್ರದೇವರು ಮತ್ತು ಪಾರ್ವತಿ ದೇವಿಯನ್ನು ಆವಾಹನೆ ಮಾಡಿ ಪೂಜಿಸಬೇಕು. ಜ್ಯೋತಿಯಲ್ಲಿ ಶ್ರೀಜ್ಯೋತಿರ್ಭೀಮೇಶ್ವರ ನನ್ನು ಅನುಸಂಧಾನ ಮಾಡಬೇಕು.

ಪೂಜೆಯ ನಂತರ ಕೈಗೆ ಕಟ್ಟಿಕೊಳ್ಳಲು ಬೇಕಾಗುವ ದಾರವನ್ನು ಪೂಜೆಗೆ ಮೊದಲು



ಸಿದ್ಧಪಡಿಸಬೇಕು. ಒಂಭತ್ತು ಅಥವಾ ಹನ್ನೆರಡು ಎಳೆಯ ದಾರವನ್ನು ತೆಗೆದುಕೊಂಡು ಒಂಭತ್ತು ಗಂಟು ಹಾಕಬೇಕು. ಇದನ್ನು ದೇವರ ಸಮೀಪದಲ್ಲಿ ವೀಳೆಯದೆಲೆ ಅಥವಾ ಬೆಳ್ಳಿತಟ್ಟೆಯಲ್ಲಿಡಬೇಕು.

ಆವಾಹನೆ ಮಾಡಿದ ದೇವರಿಗೆ ಗಂಧ, ಪುಷ್ಪ ಅರ್ಪಿಸಬೇಕು. ಈ ದಿನ ಕರಿಗಡಬು ಸಮರ್ಪಣೆ ವಿಶೇಷವಾದ್ದರಿಂದ ನೈವೇದ್ಯಕ್ಕೆ ಕರಿಗಡಬು ಹಾಗೂ ಪಾಯಸ ಮತ್ತಿತರ ಭಕ್ಷ್ಯಗಳನ್ನು ಸಮರ್ಪಿಸಬೇಕು.

ನಂತರ ಆರತಿ ಮಾಡಿ ಪ್ರಾರ್ಥಿಸಬೇಕು. ದೇವ ದೇವಿಗೆ ನಮಿಸಿ, ಭಕ್ತಿಯಿಂದ ಪ್ರಾರ್ಥಿಸಿ ತರುವಾಯ ಗೌರಿ ದಾರವನ್ನು ಕೈಗೆ ಕಟ್ಟಿಕೊಳ್ಳಬೇಕು. ಸುಖ, ಸಂಪತ್ತು, ಸಂತಾನ ಪ್ರದಾಯಕಳಾದ ಪಾರ್ವತಿದೇವಿಯನ್ನು ವಿಶೇಷವಾಗಿ ಪ್ರಾರ್ಥಿಸಿ, ಸ್ಥಿರ ಮಾಂಗಲ್ಯ ಭಾಗ್ಯ ನೀಡುವ ಮೂಲಕ ಪತಿಗೆ ಆಯುಷ್ಯ ಕರುಣಿಸುವಂತೆ ಬೇಡ ಬೇಕು.

ಇದಾದ ಮೇಲೆ ವಿವಾಹಿತ ಮಹಿಳೆ ತನ್ನ ಪತಿಯ ಪಾದಪೂಜೆ ನಡೆಸಿ ನಮಸ್ಕರಿಸಿ ಆಶೀರ್ವಾದ ಪಡೆಯಬೇಕು. ಹೊಸದಾಗಿ ಮದುವೆಯಾದ ದಂಪತಿಗೆ ಇದು ವಿಶೇಷ ದಿನ. ಆಷಾಢಮಾಸ ಕಳೆಯಲು ತವರಿಗೆ ಬಂದ ನವವಧು, ಶ್ರಾವಣದಲ್ಲಿ ಗಂಡನ ಮನೆಗೆ ತೆರಳುತ್ತಾಳೆ. ಪತ್ನಿಯನ್ನು ಕರೆದೊಯ್ಯಲು ಬರುವ ಪತಿಯ ಪಾದಪೂಜೆ ನಡೆಸಿ ಆತನಿಗೆ ವಿಶೇಷ ಆತಿಥ್ಯ ನೀಡುವ ದಿನವಿದು.

ಕನ್ಯೆಯರು ದೇವರ ಪೂಜೆಯ ನಂತರ ಮಾತಾ ಪಿತೃಗಳ ಆಶೀರ್ವಾದ ಪಡೆಯಬಹುದು.

ದಂಪತಿ ಜೀವನ ಅನೋನ್ಯವಾಗಿದ್ದರೆ ಸುಖ, ಸಂತಸ, ಸಂಭ್ರಮ ಸದಾ ಇರುತ್ತದೆ. ಈ ಉದ್ದೇಶದಿಂದ ಈ ವ್ರತವನ್ನು ಆಚರಿಸಲಾಗುತ್ತದೆ. ಒಮ್ಮೆ ಆರಂಭಿಸಿದ ವ್ರತವನ್ನು ಐದು, ಒಂಭತ್ತು ಅಥವಾ ಹದಿನಾರು ವರ್ಷ ಆಚರಿಸಬೇಕು. ಒಮ್ಮೆ ಉದ್ಯಾಪನೆ ಮಾಡಿ, ಬಂಧು ಮಿತ್ರರಿಗೆ ಭೂರಿ ಭೋಜನ ಮಾಡಿಸಬೇಕು.

ಆಷಾಢಮಾಸದ ಅಂತ್ಯ ಹಾಗೂ ಹಬ್ಬಗಳ ತಿಂಗಳಾದ ಶ್ರಾವಣಮಾಸದ ಆರಂಭದ ಪರ್ವಕಾಲದಲ್ಲಿ ಶ್ರೀರುದ್ರದೇವರನ್ನು ಸ್ಮರಿಸೋಣ.

ಶ್ರೀರುದ್ರಾಂತರ್ಗತ ಭಾರತಿರಮಣ ಮುಖ್ಯ ಪ್ರಾಣಾಂತರ್ಗತ ಶ್ರೀಲಕ್ಷ್ಮೀನೃಸಿಂಹ ದೇವರು ಎಲ್ಲರನು ಅನುಗ್ರಹಿಸಲಿ.

## ಶ್ರಾವಣ ಮಾಸದ ವೈಭವ: ಭಕ್ತಿ, ಹಬ್ಬ–ಹರಿದಿನಗಳ ಪರ್ವ ಆರಂಭ

ಮಾಸಗಳಲ್ಲೇ ಅತ್ಯಂತ ಶ್ರೇಷ್ಠವಾದ ಮಾಸ ಶ್ರಾವಣ ಮಾಸ ಗುರುವಾರದಿಂದ ಆರಂಭ. ಯುಗ, ಯುಗಗಳೇ ಕಳೆದರೂ ಅತ್ಯಂತ ಪವಿತ್ರವಾದ ತಿಂಗಳು ಎಂಬುದು ಜನಮಾನಸದಲ್ಲಿ ಉಳಿದಿರುವ ತಿಂಗಳೇ ಈ ಶ್ರಾವಣ ಮಾಸ. ಹದವಾಗಿ ಆಗಾಗ ಸುರಿಯುವ ಜಿಟಿಪಿಟಿ ಸೋನೆ ಮಳೆ ಮೈಯ್ಯಲ್ಲಿ ಕಂಪು ಉಂಟು ಮಾಡಿದರೆ, ಎಲ್ಲೆಡೆ ಹಸಿರಿನಿಂದ ಕೂಡಿದ ಭೂರಮೆ ಮನೋಲ್ಲಾಸಕರವಾಗಿ ಕಂಡು ಕಣ್ಣುಗಳನ್ನು ತಂಪುಗೊಳಿಸುತ್ತದೆ. ಇದರ ಜತೆ ಹಿಂದಿಂದೆಯೇ ಸಾಲು ಸಾಲಾಗಿ ಬರುವ ಹಬ್ಬಗಳಲ್ಲಿ ಮಾಡುವ ಬಗೆ ಬಗೆಯ ಭಕ್ಷ್ಯಗಳು ಉದರವನು ತಣಿಸಿ, ಮನಸ್ಸಿಗೆ ಮಜಾ ದೇಹಕ್ಕೆ ಪುಷ್ಟಿ ನೀಡುತ್ತವೆ.

ದೇವಾಲಯಗಳಲ್ಲಿ ಕೇಳಿ ಬರುವ ಗಂಟೆಗಳ ಶಬ್ದದ ನಿನಾದ ಒಂದು ಕಡೆಯಾದರೆ, ಸುಂದರವಾಗಿ ಅಲಂಕರಿಸಿಕೊಂಡು ದೇಗುಲಗಳಿಗೆ ಭೇಟಿ ನೀಡಿ ಭಕ್ತಿ ಸಮರ್ಪಿಸುವ ಭಕ್ತರ ದಂಡು ಮತ್ತೊಂದೆಡೆ. ಇಂತಹ ಮನೋಹರವಾದ ದೃಶ್ಯ ಬೇರೆ ತಿಂಗಳಲ್ಲಿ ನೋಡಲು ಸಿಗದು.

ಅಂತಹ ಸುಂದರ ಶ್ರಾವಣ ಮಾಸ ಗುರುವಾರ ಆರಂಭ. ಈ ತಿಂಗಳಲ್ಲಿ ಮಾಸ ನಿಯಾಮಕ ಶ್ರೀಧರರೂಪಿ ಶ್ರೀಮಹಾವಿಷ್ಣುವನ್ನು, ಜಗನ್ಮಾತೆ ಶ್ರೀಮಹಾಲಕ್ಷ್ಮಿಯನ್ನು ಹಾಗೂ ಮೋಕ್ಷಕಾರಕ ಶ್ರೀಮಹಾರುದ್ರದೇವರನ್ನು, ಸರ್ವಮಂಗಳದಾಯಿನಿ ಶ್ರೀಗೌರಿದೇವಿಯನ್ನು ವಿಶೇಷವಾಗಿ ಪೂಜಿಸುವ ಪುಣ್ಯ ಮಾಸ. ಒಟ್ಟಿನಲ್ಲಿ ಸಪತ್ನಿ ಸಮೇತ ಹರಿ ಹರ ಇಬ್ಬರನ್ನೂ ಪೂಜಿಸುವ ತಿಂಗಳು ಇದು.

ಇದಲ್ಲದೇ, ಏಕಭುಕ್ತ (ದಿನದಲ್ಲಿ ಒಮ್ಮೆ ಮಾತ್ರ ಊಟ) ಹಾಗೂ ಮೌನವ್ರತ, ಮೌನವಾಗಿ ಸೂರ್ಯದೇವರ ಪೂಜೆ, ಮಾಸ ಮಹಾಲಕ್ಷ್ಮಿಪೂಜೆ, ಮಂಗಳಗೌರಿ ವ್ರತ, ನಾಗಪಂಚಮಿ, ಬುಧ–ಬೃಹಸ್ಪತಿ ಪೂಜೆ, ವರಮಹಾಲಕ್ಷ್ಮೀ ವ್ರತ, ಉಪಾಕರ್ಮ, ಹಯಗ್ರೀವ ಜಯಂತಿ, ನೂಲು ಹುಣ್ಣಿಮೆ, ರಕ್ಷಾಬಂಧನ, ವಿಷ್ಣು, ಶಿವ ಹಾಗೂ ದೇವಿಗೆ ಪವಿತ್ರಾರೋಪಣೆ, ರಾಯರ ಆರಾಧನೆ, ಶ್ರೀಕೃಷ್ಣ ಜಯಂತಿ, ಕುಶಾಗ್ರಹಣ ಹಾಗೂ ಸೋಮವಾರ ಶಿವನ ಪೂಜೆ ಮತ್ತಿತರ ಆಚರಣೆಗಳು ಈ ತಿಂಗಳ ಪ್ರಮುಖ ಹಬ್ಬಗಳು.

ಎಲ್ಲೆಡೆ ಹಚ್ಚ ಹಸಿರಿನ ಸಿರಿ ತುಂಬಿದ ಭೂತಾಯಿ, ಮುದವಾಗಿ ಜಿನುಗುವ ಹೂಮಳೆ, ಸಾಲು ಸಾಲು ಹಬ್ಬಗಳು, ಹಸಿದ ಹೊಟ್ಟೆಗೆ ಸವಿಯಾದ ಭೋಜನ ಈ ತಿಂಗಳಲ್ಲಿ ನಮ್ಮ ಜೀವನಕ್ಕೆ ಮೆರಗು ನೀಡುತ್ತವೆ. ಈ ಮಾಸದಲ್ಲಿ ಸಾಧ್ಯವಾದಷ್ಟು ಇಷ್ಟ ದೇವರುಗಳ ಆರಾಧನೆ, ಅರ್ಚನೆ ಮಾಡಿ ಪುಣ್ಯ ಗಳಿಸುವ ಪರ್ವಕಾಲ.

ಶ್ರಾವಣ ಶನಿವಾರಗಳಂದು ಜನರು ಶ್ರೀವಿಷ್ಣುವಿನ ದೇವಾಲಯಗಳಿಗೆ ಭೇಟಿ ನೀಡಿ ಪೂಜೆ ಸಲ್ಲಿಸುತ್ತಾರೆ. ಅದರಲ್ಲೂ ಶ್ರೀಲಕ್ಷ್ಮೀ ವೇಂಕಟೇಶ್ವರಸ್ವಾಮಿಯ ದೇವಾಲಯಗಳಲ್ಲಿ ದೇವರ ಮೂರ್ತಿಯ ಜತೆ ದೇಗುಲಗಳಲ್ಲಿ ವಿಶೇಷ ಅಲಂಕಾರ ಮಾಡಲಾಗುತ್ತದೆ. ಭಕ್ತರ ಜನ ಜಂಗುಳಿಯಂತೂ ಹೇಳ ತೀರದು. ಎಲ್ಲರಿಗೂ ಶ್ರೀಧನ್ಯಾ ಶ್ರೀಧರ ನಾಮಕ ಶ್ರೀಹರಿ ಸನ್ಮಂಗಳವನ್ನುಂಟು ಮಾಡಲಿ. ಲೋಕಾ ಸಮಸ್ತಾ ಸುಖಿನೋಭವಂತು.

**ಶ್ರೀಶ ಚರಣಾರಾಧಕ**
**ಕೆ.ವಿ.ಲಕ್ಷ್ಮೀನಾರಾಯಣಾಚಾರ್ಯ,**
**ಆನೇಕಲ್**

# ‘ಟೀಮ್ ಕರ್ನಾಟಕವಾಗಿ ಕೆಲಸ ಮಾಡಿ; ಭ್ರಷ್ಟಾಚಾರಕ್ಕೆ ರಾಜಿ ಇಲ್ಲ’: ಡಿಕೆಶಿ

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯದ ಜನರ ಸಮಸ್ಯೆಗಳಿಗೆ ಕಾನೂನು ಚೌಕಟ್ಟಿನಲ್ಲಿ ಸ್ಪಂದಿಸಿ, ಆತ್ಮಸಾಕ್ಷಿಗೆ ಒಪ್ಪುವಂತೆ ಪಾರದರ್ಶಕವಾಗಿ ಕೆಲಸ ಮಾಡಬೇಕು. ಭ್ರಷ್ಟಾಚಾರದ ವಿಚಾರದಲ್ಲಿ ಯಾವುದೇ ರಾಜಿ ಇಲ್ಲ. ಡಬಲ್ ಬಿಲ್, ನಕಲಿ ಬಿಲ್ ಮಾಡುವವರಿಗೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಎಚ್ಚರಿಸಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಮಂಗಳವಾರ ಸರ್ಕಾರಿ ನೌಕರರೊಂದಿಗೆ ನಡೆದ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, “ನಾನು ಸೇರಿದಂತೆ ಸಚಿವರು, ಅಧಿಕಾರಿಗಳು ಎಲ್ಲರೂ ಸರ್ಕಾರಿ ನೌಕರರು. ನಮ್ಮದು ‘ಟೀಮ್ ಕರ್ನಾಟಕ’. ಜನರ ಕಲ್ಯಾಣಕ್ಕಾಗಿ ಎಲ್ಲರೂ ಒಟ್ಟಾಗಿ ಕೆಲಸ ಮಾಡಬೇಕು” ಎಂದು ಕರೆ ನೀಡಿದರು.

ರಾಜ್ಯದ ಜನರ ಸೇವೆ ಮಾಡುವ ಅವಕಾಶ 5.50 ಲಕ್ಷ ಸರ್ಕಾರಿ ನೌಕರರಿಗೆ ದೊರೆತಿದೆ. ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಜನರ ಬದುಕಿನಲ್ಲಿ ಬದಲಾವಣೆ ತರಬೇಕು. ಸರ್ಕಾರಿ ನೌಕರರು ಸರ್ಕಾರ ಮತ್ತು ಜನರ ನಡುವಿನ ಸೇತುವೆಯಾಗಿದ್ದು, ಅವರ ಕಾರ್ಯಕ್ಷಮತೆಯೇ ಆಡಳಿತದ ಗುಣಮಟ್ಟವನ್ನು ನಿರ್ಧರಿಸುತ್ತದೆ ಎಂದರು.

“ಟೀಕೆಗಳು ಸಾಯುತ್ತವೆ, ಆದರೆ ನಮ್ಮ ಕೆಲಸಗಳು ಉಳಿಯುತ್ತವೆ. ಅಧಿಕಾರ ಸಿಂಹಾಸನವಲ್ಲ, ಅದು ಜವಾಬ್ದಾರಿ ಮತ್ತು ಜನಸೇವೆ ಮಾಡುವ ಅವಕಾಶ. ಜನರಲ್ಲೇ ದೇವರನ್ನು ಕಾಣಬೇಕು. ಹೀಗಾಗಿ ಪ್ರತಿಯೊಬ್ಬರೂ ತಮ್ಮ ಆತ್ಮಸಾಕ್ಷಿಗೆ ಒಪ್ಪುವ ರೀತಿಯಲ್ಲಿ ಕೆಲಸ ಮಾಡಬೇಕು” ಎಂದು ಶಿವಕುಮಾರ್ ಹೇಳಿದರು.

**ಕಾನೂನು ಚೌಕಟ್ಟಿನಲ್ಲಿ ಜನರ ಸಮಸ್ಯೆ ಪರಿಹರಿಸಿ**



ಪ್ರತಿ ತಾಲ್ಲೂಕಿನ ಅಧಿಕಾರಿಗಳು ಅಲ್ಲಿಯೇ ವಾಸವಿದ್ದು, ಸ್ಥಳೀಯ ಸಮಸ್ಯೆಗಳನ್ನು ಅರಿತು ಪರಿಹರಿಸಬೇಕು. ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಶಾಸಕರು ತಿಂಗಳಲ್ಲಿ ಎರಡು ಬಾರಿ ತಾಲ್ಲೂಕುಗಳಿಗೆ ಭೇಟಿ ನೀಡಿ ‘ಪ್ರಜಾಸೇವೆ’ ಕಾರ್ಯಕ್ರಮ ನಡೆಸಬೇಕು. ಬಳಿಕ ಪಂಚಾಯಿತಿ ಹಾಗೂ ಹೋಬಳಿ ಮಟ್ಟದಲ್ಲೂ ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಸೂಚಿಸಿದರು.

“ಜನರ ಸಂಕಷ್ಟಕ್ಕೆ ಕಾನೂನು ಚೌಕಟ್ಟಿನೊಳಗೆ ನೆರವು ನೀಡಿ. ಕಚೇರಿಯಲ್ಲಿ ಕುಳಿತು ಸಮಸ್ಯೆಗಳನ್ನು ಪರಿಹರಿಸಲು ಸಾಧ್ಯವಿಲ್ಲ. ಸ್ಥಳಗಳಿಗೆ ಭೇಟಿ ನೀಡಿದಾಗ ಮಾತ್ರ ವಾಸ್ತವ ಪರಿಸ್ಥಿತಿ ಅರಿಯಲು ಸಾಧ್ಯ” ಎಂದರು.

ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ಆಸ್ತಿ ದಾಖಲೆಗಳನ್ನು ಡಿಜಿಟಲೀಕರಣಗೊಳಿಸುವ ಮೂಲಕ ಲಂಚವಿಲ್ಲದೆ ಜನರ ಮನೆ ಬಾಗಿಲಿಗೆ ದಾಖಲೆಗಳನ್ನು ತಲುಪಿಸುವ ವ್ಯವಸ್ಥೆ ಜಾರಿಗೊಳಿಸಲಾಗುತ್ತಿದೆ. ಮುಂದಿನ 6–7 ತಿಂಗಳಲ್ಲಿ ಈ ವ್ಯವಸ್ಥೆಯನ್ನು ರಾಜ್ಯದ ಎಲ್ಲೆಡೆ ವಿಸ್ತರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

**‘ಶೇರಿಂಗ್ ಅಂಡ್ ಕೇರಿಂಗ್’ ಮಂತ್ರ ಅನುಸರಿಸಿ**

ಸರ್ಕಾರಿ ನೌಕರರು ‘ಶೇರಿಂಗ್ ಅಂಡ್ ಕೇರಿಂಗ್’ ಎಂಬ ಮಂತ್ರವನ್ನು ಅನುಸರಿಸಬೇಕು. ಸ್ಥಳೀಯ ಸಮಸ್ಯೆಗಳನ್ನು ಅಲ್ಲಿಯೇ ಪರಿಹರಿಸಬೇಕು. ಸಮಸ್ಯೆಯನ್ನು ಒಂದು ಕಚೇರಿಯಿಂದ ಮತ್ತೊಂದಕ್ಕೆ ವರ್ಗಾಯಿಸುವ ಪ್ರವೃತ್ತಿ ನಿಲ್ಲಬೇಕು ಎಂದು ಶಿವಕುಮಾರ್ ಹೇಳಿದರು.

ರಾಜ್ಯದ ಶಿಕ್ಷಣ, ಆರೋಗ್ಯ ಹಾಗೂ ಮಾನವ ಸಂಪನ್ಮೂಲ ಕ್ಷೇತ್ರದ ಸಾಧನೆಗೆ ಹಲವು ದಶಕಗಳ ಉತ್ತಮ ಆಡಳಿತ ಮತ್ತು ಸರ್ಕಾರಿ ನೌಕರರ ಕೊಡುಗೆ ಕಾರಣವಾಗಿದೆ. ಬೆಂಗಳೂರಿನ ಬೆಳವಣಿಗೆಗೆ ಹಿಂದಿನ ಸರ್ಕಾರಗಳು ಹಾಗೂ ರಾಜಮನೆತನದ ಕಾಲದಿಂದಲೂ ನಡೆದ ಅಭಿವೃದ್ಧಿ ಕಾರ್ಯಗಳು ನೆರವಾಗಿವೆ ಎಂದರು.

**ನಕಲಿ ಬಿಲ್‌ಗಳಿಗೆ ಅವಕಾಶವಿಲ್ಲ**

ಭ್ರಷ್ಟಾಚಾರದ ವಿರುದ್ಧ ಕಠಿಣ ನಿಲುವು ವ್ಯಕ್ತಪಡಿಸಿದ ಶಿವಕುಮಾರ್, ಫಲಾನುಭವಿಗಳ ಯೋಜನೆಗಳ ಪ್ರತಿಯೊಂದು ಹಂತವನ್ನೂ ಪರಿಶೀಲಿಸಲಾಗುವುದು ಎಂದರು. “ಡಬಲ್ ಬಿಲ್ ಮಾಡುವ ಕೆಲಸ ನಡೆಯುತ್ತಿದೆ. ನಕಲಿ ಬಿಲ್‌ಗಳಿಗೆ ಅವಕಾಶವಿಲ್ಲ. ದಾಖಲೆ ತಿದ್ದುವುದಕ್ಕೂ ಕಡಿವಾಣ ಹಾಕಲಾಗುವುದು. ಆಸ್ತಿ ದಾಖಲೆಗಳ ಡಿಜಿಟಲೀಕರಣದಿಂದ ಇಂತಹ ಅಕ್ರಮಗಳಿಗೆ ಬ್ರೇಕ್ ಹಾಕಲಾಗುವುದು. ಅಧಿಕಾರಿಗಳು ಯಾರ ಒತ್ತಡಕ್ಕೂ ಮಣಿಯದೆ ನ್ಯಾಯಯುತವಾಗಿ ಕೆಲಸ ಮಾಡಬೇಕು” ಎಂದು ಸೂಚಿಸಿದರು.

ಪ್ರತಿ ತಾಲ್ಲೂಕಿನ ಅಧಿಕಾರಿಗಳು ತಮ್ಮ ದಿನದ ಕಾರ್ಯಚಟುವಟಿಕೆಗಳ ವಿವರವನ್ನು ಹಿರಿಯ ಅಧಿಕಾರಿಗಳಿಗೆ ನೀಡಬೇಕು. ವಿಧಾನಸಭೆ ಅಧಿವೇಶನದ ಬಳಿಕ ರಾಜ್ಯದ ವಿವಿಧ ತಾಲ್ಲೂಕುಗಳಿಗೆ ಭೇಟಿ ನೀಡಿ ಆಡಳಿತದ ಕಾರ್ಯವೈಖರಿಯನ್ನು ಪರಿಶೀಲಿಸುವುದಾಗಿ ಶಿವಕುಮಾರ್ ತಿಳಿಸಿದರು.



**“ನಾನು ಸೇರಿದಂತೆ ಸಚಿವರು, ಅಧಿಕಾರಿಗಳು ಎಲ್ಲರೂ ಸರ್ಕಾರಿ ನೌಕರರು. ನಮ್ಮದು ‘ಟೀಮ್ ಕರ್ನಾಟಕ’. ಜನರ ಸಮಸ್ಯೆಗಳಿಗೆ ಕಾನೂನು ಚೌಕಟ್ಟಿನಲ್ಲಿ ಸ್ಪಂದಿಸಿ, ಆತ್ಮಸಾಕ್ಷಿಗೆ ಒಪ್ಪುವಂತೆ ಪಾರದರ್ಶಕವಾಗಿ ಕೆಲಸ ಮಾಡಬೇಕು. ಭ್ರಷ್ಟಾಚಾರಕ್ಕೆ ಯಾವುದೇ ರಾಜಿ ಇಲ್ಲ; ಡಬಲ್ ಬಿಲ್ ಮತ್ತು ನಕಲಿ ಬಿಲ್ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು.”**

ಖಾಸಗಿ ಶಾಲೆಗಳು ಸೇರಿದಂತೆ ಎಲ್ಲ ಶಾಲೆಗಳಲ್ಲೂ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

# ನಟ ಪ್ರಕಾಶ್ ರಾಜ್ ಆರೋಪ ಸುಳ್ಳು: ಜಿಬಿಎ ಸ್ಪಷ್ಟನೆ

1ನೇ ಪುಟದಿಂದ

ಪ್ರಕಾಶ್ ರಾಜ್ ಈ ವಿಳಾಸದಲ್ಲಿ ವಾಸವಿಲ್ಲವೆಂದು ತಿಳಿಸಿದ್ದು, ಶಾಂತಿನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬೇರೊಂದು ವಿಳಾಸದಲ್ಲಿ ವಾಸವಿರುವುದಾಗಿ ಹೇಳಿದ್ದಾರೆ. ಈಗ ವಾಸವಿರುವ ವಿಳಾಸದಲ್ಲಿನ ಬಿ.ಎಲ್.ಓ ರವರ ಮೂಲಕ ನಮೂನೆ–6 ನ್ನು ನೀಡಬಹುದಾಗಿದೆ. ಈ ವಿಚಾರ ಚುನಾವಣೆ ಆಯೋಗದ ಮಾರ್ಗಸೂಚಿ ಅನುಸಾರ ಕ್ರಮ ವಹಿಸಲಾಗುವುದು ಎಂದು ಅವರಿಗೆ ತಿಳಿಸಲಾಗಿದೆ ಎಂದು ಆಯುಕ್ತರು ತಿಳಿಸಿದ್ದಾರೆ.

ಆಯುಕ್ತರ ಸ್ಪಷ್ಟನೆಯ ಪ್ರಕಾರ, ಮತದಾರರ ಪಟ್ಟಿಯಿಂದ ಪ್ರಕಾಶ್ ರಾಜ್ ಅವರ ಹೆಸರನ್ನು ಉದ್ದೇಶಪೂರ್ವಕವಾಗಿ ತೆಗೆದುಹಾಕಲಾಗಿಲ್ಲ. ಅವರು ನೋಂದಾಯಿಸಿಕೊಂಡಿದ್ದ ವಿಳಾಸದಲ್ಲಿ ವಾಸಿಸುತ್ತಿಲ್ಲ ಎಂಬ ಪರಿಶೀಲನಾ ವರದಿಯ ಆಧಾರದ ಮೇಲೆ ‘ಸ್ಥಳಾಂತರಗೊಂಡಿದ್ದಾರೆ’ ಎಂದು ಗುರುತಿಸಲಾಗಿದೆ.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಮನೆ–ಮನೆಗೆ ಭೇಟಿ ನೀಡಿ ಮತದಾರರ ವಾಸಸ್ಥಳದ ಕುರಿತು ಪರಿಶೀಲನೆ ನಡೆಸುವುದು ನಿಯಮಿತ ಪ್ರಕ್ರಿಯೆಯಾಗಿದೆ. ಈ ವೇಳೆ ಲಭ್ಯವಾದ ಮಾಹಿತಿ ಹಾಗೂ ಸ್ಥಳೀಯರ ಹೇಳಿಕೆಗಳನ್ನು ದಾಖಲಿಸಿಕೊಂಡು, ಸಂಬಂಧಿಸಿದ ಮಾರ್ಗಸೂಚಿಗಳಂತೆ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಇಂದಿರಾ ಕ್ಯಾಂಟೀನ್‌ಗಳಿಗೆ ನೋಟಿಸ್

**ಬೆಂಗಳೂರಿನ ಗೊಟ್ಟಿಗೆರೆ, ಲಿಂಗರಾಜಪುರ ಹಾಗೂ ಸಿಂಗಸಂದ್ರದ ಇಂದಿರಾ ಕ್ಯಾಂಟೀನ್‌ಗಳ ಕೇಂದ್ರ ಅಡುಗೆ ಘಟಕಗಳಲ್ಲಿ ಆಹಾರ ಸುರಕ್ಷತಾ ನಿಯಮಗಳ ಉಲ್ಲಂಘನೆ ಪತ್ತೆಯಾಗಿದ್ದು, ಮೂರು ಘಟಕಗಳಿಗೆ ನೋಟಿಸ್ ಜಾರಿ ಮಾಡಲಾಗಿದೆ. ಗೊಟ್ಟಿಗೆರೆ ಘಟಕದ ಗೋದಾಮಿನಲ್ಲಿ ಹೆಗ್ಗಣ, ಇಲಿಗಳ ಹಾವಳಿ ಕಂಡುಬಂದ ಹಿನ್ನೆಲೆಯಲ್ಲಿ ಗೋದಾಮನ್ನು ಸೀಲ್ ಮಾಡಲಾಗಿದೆ.**

● ವಿಕ್ರಮ ವಾಹಿನಿ | ಬೆಂಗಳೂರು

ಸಾರ್ವಜನಿಕರಿಗೆ ಕಡಿಮೆ ದರದಲ್ಲಿ ಆಹಾರ ಒದಗಿಸುವ ಇಂದಿರಾ ಕ್ಯಾಂಟೀನ್‌ಗಳ ಕೇಂದ್ರ ಅಡುಗೆ ಘಟಕಗಳಲ್ಲಿ ಆಹಾರ ಸುರಕ್ಷತಾ ನಿಯಮಗಳ ಉಲ್ಲಂಘನೆ ಪತ್ತೆಯಾಗಿದ್ದು, ಮೂರು ಘಟಕಗಳಿಗೆ ಆಹಾರ ಸುರಕ್ಷತಾ ಇಲಾಖೆ ನೋಟಿಸ್ ಜಾರಿ ಮಾಡಿದೆ.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಅಧಿಕಾರಿಗಳು ಮಂಗಳವಾರ ನಗರದ ಗೊಟ್ಟಿಗೆರೆ, ಲಿಂಗರಾಜಪುರ ಹಾಗೂ ಸಿಂಗಸಂದ್ರದಲ್ಲಿರುವ ಇಂದಿರಾ ಕ್ಯಾಂಟೀನ್‌ಗಳ ಕೇಂದ್ರ ಅಡುಗೆ ಘಟಕಗಳ ಮೇಲೆ ದಿಢೀರ್ ತಪಾಸಣೆ ನಡೆಸಿದರು. ಈ ವೇಳೆ ಆಹಾರ ಪದಾರ್ಥಗಳ ಸಂಗ್ರಹಣೆ, ಲೇಬಲಿಂಗ್ ಹಾಗೂ ಅಡುಗೆ ಪರಿಸರದಲ್ಲಿ ಹಲವು ಲೋಪಗಳು ಕಂಡುಬಂದಿವೆ.

ಆಹಾರ ಪದಾರ್ಥಗಳ ಲೇಬಲಿಂಗ್‌ನಲ್ಲಿ ನಿಯಮಾನುಸಾರ ಮಾಹಿತಿ ನಮೂದಿಸದಿರುವುದು ಹಾಗೂ ಮಿಸ್‌ಬ್ರಾಂಡಿಂಗ್ ಸೇರಿದಂತೆ ಹಲವು



ಉಲ್ಲಂಘನೆಗಳು ಪತ್ತೆಯಾಗಿವೆ. ಅಡುಗೆ ಘಟಕಗಳಲ್ಲಿ ಆಹಾರ ನಿರ್ವಹಣೆ ಹಾಗೂ ಸ್ವಚ್ಛತೆಯಲ್ಲಿಯೂ ನಿರ್ಲಕ್ಷ್ಯ ಕಂಡುಬಂದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ವಿಶೇಷವಾಗಿ ಗೊಟ್ಟಿಗೆರೆ ಕೇಂದ್ರ ಅಡುಗೆ ಘಟಕದ ಗೋದಾಮಿನಲ್ಲಿ ಹೆಗ್ಗಣ ಹಾಗೂ ಇಲಿಗಳ ಹಾವಳಿ ಕಂಡುಬಂದ ಹಿನ್ನೆಲೆಯಲ್ಲಿ ಗೋದಾಮನ್ನು ಸೀಲ್ ಮಾಡಲಾಗಿದೆ. ಆಹಾರ ಪದಾರ್ಥಗಳ ಸುರಕ್ಷಿತ ಸಂಗ್ರಹಣೆ ಹಾಗೂ ಸ್ವಚ್ಛತೆಯಲ್ಲಿ ಗಂಭೀರ ಲೋಪ ಕಂಡುಬಂದಿರುವ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ.

ನಿಯಮ ಉಲ್ಲಂಘನೆಗೆ ಸಂಬಂಧಿಸಿದಂತೆ ಗೊಟ್ಟಿಗೆರೆ, ಲಿಂಗರಾಜಪುರ ಹಾಗೂ ಸಿಂಗಸಂದ್ರದ ಮೂರು ಕೇಂದ್ರ ಅಡುಗೆ ಘಟಕಗಳ ಅಧಿಕಾರಿಗಳಿಗೆ ನೋಟಿಸ್ ನೀಡಲಾಗಿದೆ. ಪ್ರಕರಣಗಳನ್ನು ನ್ಯಾಯ ನಿರ್ಣಯಾಧಿಕಾರಿ ಮುಂದೆ ದಾಖಲಿಸಿ, ನಿಯಮಾನುಸಾರ ಮುಂದಿನ ಕಾನೂನು ಕ್ರಮ ಕೈಗೊಳ್ಳಲು ಆಹಾರ ಸುರಕ್ಷತಾ ಇಲಾಖೆ ಶಿಫಾರಸು ಮಾಡಿದೆ. ಸಾರ್ವಜನಿಕರ ಆರೋಗ್ಯದ ವಿಚಾರದಲ್ಲಿ ಯಾವುದೇ ರಾಜಿ ಮಾಡಿಕೊಳ್ಳುವುದಿಲ್ಲ. ಆಹಾರ ತಯಾರಿಕೆ, ಸಂಗ್ರಹಣೆ ಮತ್ತು ವಿತರಣೆಯಲ್ಲಿ ನಿಗದಿತ ಸುರಕ್ಷತಾ ಮಾನದಂಡಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ನಿಯಮ ಉಲ್ಲಂಘಿಸುವ ಘಟಕಗಳ ವಿರುದ್ಧ ಮುಂದಿನ ದಿನಗಳಲ್ಲೂ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ಎಚ್ಚರಿಸಿದ್ದಾರೆ.

# ರಾತ್ರೋರಾತ್ರಿ ದಾಳಿಂಬೆ ಕಳವು

● ವಿಕ್ರಮ ವಾಹಿನಿ | ಚಿಕ್ಕಬಳ್ಳಾಪುರ

ಬರದ ನಡುವೆಯೂ ನೀರಿನ ಕೊರತೆ ಎದುರಿಸಿ ಕಷ್ಟಪಟ್ಟು ಬೆಳೆದಿದ್ದ ದಾಳಿಂಬೆ ಬೆಳೆಯನ್ನು ಕಳ್ಳರು ರಾತ್ರೋರಾತ್ರಿ ಕದ್ದೊಯ್ದಿರುವ ಘಟನೆ ಚಿಕ್ಕಬಳ್ಳಾಪುರ ತಾಲೂಕಿನ ಚದಲಪುರ ಗ್ರಾಮದಲ್ಲಿ ನಡೆದಿದೆ. ರೈತ ಮಂಜುನಾಥ್ ಅವರ ತೋಟದಿಂದ ಸುಮಾರು 2ರಿಂದ 3 ಟನ್ ದಾಳಿಂಬೆ ಕಳವಾಗಿದ್ದು, ಇದರ ಮೌಲ್ಯ ಸುಮಾರು ರೂ 3 ಲಕ್ಷ ಎಂದು ಅಂದಾಜಿಸಲಾಗಿದೆ.

ಮಂಜುನಾಥ್ ಅವರು ತಮ್ಮ ಪತ್ನಿಯ ಚಿನ್ನಾಭರಣಗಳನ್ನು ಅಡವಿಟ್ಟು, ಸಾಲ ಮಾಡಿಕೊಂಡು ಮುಕ್ಕಾಲು ಎಕರೆ ಜಮೀನಿನಲ್ಲಿ ದಾಳಿಂಬೆ ಬೆಳೆದಿದ್ದರು. ನೀರಿನ ಕೊರತೆಯ ನಡುವೆಯೂ ಹನಿ ಹನಿ ನೀರುಣಿಸಿ ಬೆಳೆ ಕಾಪಾಡಿಕೊಂಡಿದ್ದರು. ಫಸಲು ಉತ್ತಮವಾಗಿ ಬಂದಿದ್ದು, ಮಾರುಕಟ್ಟೆಯಲ್ಲಿ ದಾಳಿಂಬೆಗೆ ಕೆಜಿಗೆ ರೂ 130ರಿಂದ ರೂ 150ರವರೆಗೆ ಬೆಲೆ ದೊರೆಯುತ್ತಿತ್ತು ಎನ್ನಲಾಗಿದೆ.

ಉತ್ತಮ ಬೆಲೆ ಸಿಗುತ್ತಿದ್ದ ಹಿನ್ನೆಲೆಯಲ್ಲಿ ಕಳ್ಳರು ತೋಟದ ಮೇಲೆ ಕಣ್ಣಿಟ್ಟಿರುವ ಶಂಕೆ ವ್ಯಕ್ತವಾಗಿದೆ. ರಾತ್ರಿ ವೇಳೆ ತೋಟಕ್ಕೆ ನುಗ್ಗಿದ ಕಳ್ಳರು ಹಣ್ಣುಗಳನ್ನು ಕಿತ್ತು ಸಾಗಿಸಿಕೊಂಡು ಹೋಗಿದ್ದಾರೆ. ಬೆಳಗ್ಗೆ ತೋಟಕ್ಕೆ ತೆರಳಿದಾಗ ಬೆಳೆ ಕಳವಾಗಿರುವುದು ರೈತನ ಗಮನಕ್ಕೆ ಬಂದಿದೆ.ಬೆಳೆ ಮಾರಾಟ ಮಾಡಿ ಸಾಲ ತೀರಿಸುವುದು ಹಾಗೂ ಕುಟುಂಬದ ಆರ್ಥಿಕ ಸಂಕಷ್ಟದಿಂದ ಹೊರಬರುವ ನಿರೀಕ್ಷೆಯಲ್ಲಿದ್ದ ಮಂಜುನಾಥ್ ಅವರಿಗೆ ಕಳ್ಳತನದಿಂದ ಭಾರಿ ನಷ್ಟವಾಗಿದೆ. ಸಾಲ ಮಾಡಿ, ಚಿನ್ನಾಭರಣ ಅಡವಿಟ್ಟು ಬೆಳೆ ಬೆಳೆಸಿದ್ದ ರೈತನ ಕೈಗೆ ಬಂದ ಫಸಲು ಕಳ್ಳರ ಪಾಲಾಗಿರುವುದು ಕುಟುಂಬಕ್ಕೆ ಆಘಾತ ತಂದಿದೆ.



ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರ ತಾಯಿ ನಿಧನದ ಹಿನ್ನೆಲೆಯಲ್ಲಿ ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಅವರು ಕುಮಾರಸ್ವಾಮಿ ಅವರ ನಿವಾಸಕ್ಕೆ ಭೇಟಿ ನೀಡಿ ಸಂತಾಪ ಸೂಚಿಸಿದರು.

# ಜೆಪ್ಟೋ ಗೋಡೌನ್ ಮೇಲೆ ದಾಳಿ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ಆಹಾರ ಸುರಕ್ಷತಾ ಇಲಾಖೆ ಅಧಿಕಾರಿಗಳ ತಪಾಸಣೆ ಮುಂದುವರಿದಿದ್ದು, ಇದೀಗ ಕ್ವಿಕ್ ಡೆಲಿವರಿ ಸಂಸ್ಥೆ ಜೆಪ್ಟೋದ ವೇರ್‌ಹೌಸ್‌ಗಳ ಮೇಲೂ ದಾಳಿ ನಡೆಸಲಾಗಿದೆ.

ಹೊಸಕೋಟೆಯಲ್ಲಿರುವ ಜೆಪ್ಟೋ ಸಂಸ್ಥೆಯ ಬೃಹತ್ ವೇರ್‌ಹೌಸ್‌ಗೆ ಆಹಾರ ಸುರಕ್ಷತಾ ಅಧಿಕಾರಿಗಳು ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ತರಕಾರಿ, ದಿನಸಿ ಹಾಗೂ ಪ್ಯಾಕ್ ಮಾಡಿದ ಆಹಾರ ಪದಾರ್ಥಗಳನ್ನು ಸಂಗ್ರಹಿಸಿ ಗ್ರಾಹಕರಿಗೆ ರವಾನಿಸುವ ಸ್ಥಳದಲ್ಲಿ ಸ್ವಚ್ಛತೆ ಮತ್ತು ಆಹಾರ ಸುರಕ್ಷತಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಆದರೆ, ವೇರ್‌ಹೌಸ್‌ನಲ್ಲಿ ಕೆಲವು ನಿಯಮಗಳ ಉಲ್ಲಂಘನೆ ಕಂಡುಬಂದ ಹಿನ್ನೆಲೆಯಲ್ಲಿ ಅಧಿಕಾರಿಗಳು ಸಂಸ್ಥೆಗೆ ನೋಟಿಸ್ ನೀಡಲು ಮುಂದಾಗಿದ್ದಾರೆ.

ಥಣಿಸಂದ್ರ ಕೇಂದ್ರಕ್ಕೂ ತಪಾಸಣೆ

ಥಣಿಸಂದ್ರದಲ್ಲಿರುವ ಜೆಪ್ಟೋ ಕೇಂದ್ರದ ಮೇಲೂ ಪ್ರತ್ಯೇಕ ತಪಾಸಣೆ ನಡೆಸಲಾಗಿದೆ. ಅಲ್ಲಿ ಸ್ವಚ್ಛತಾ ನಿಯಮಗಳನ್ನು ಸರಿಯಾಗಿ




ಪಾಲಿಸದಿರುವುದು ಕಂಡುಬಂದ ಹಿನ್ನೆಲೆಯಲ್ಲಿ 25 ಸಾವಿರ ದಂಡ ವಿಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕ್ವಿಕ್ ಡೆಲಿವರಿ ಸಂಸ್ಥೆಗಳು ಆಹಾರ ಮತ್ತು ದಿನಸಿ ಉತ್ಪನ್ನಗಳನ್ನು ಅಲ್ಪಾವಧಿಯಲ್ಲಿ ಗ್ರಾಹಕರಿಗೆ ತಲುಪಿಸುತ್ತಿರುವುದರಿಂದ, ಅವುಗಳನ್ನು ಸಂಗ್ರಹಿಸುವ ವೇರ್‌ಹೌಸ್‌ಗಳಲ್ಲಿ ಸ್ವಚ್ಛತೆ ಹಾಗೂ ಆಹಾರ ಸುರಕ್ಷತಾ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಕಡ್ಡಾಯವಾಗಿದೆ. ನಿಯಮ ಉಲ್ಲಂಘನೆ ಕಂಡುಬಂದರೆ ಮುಂದಿನ ದಿನಗಳಲ್ಲೂ ತಪಾಸಣೆ ನಡೆಸಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ಎಚ್ಚರಿಸಿದ್ದಾರೆ.

# ಸಚಿವ ಸ್ಥಾನದಿಂದ ನಾಗೇಂದ್ರ ಹೆಸರು ಕೈಬಿಡಿ– ಬಿ.ವೈ.ವಿಜಯೇಂದ್ರ ಆಗ್ರಹ

● ವಿಕ್ರಮ ವಾಹಿನಿ । ಬೆಂಗಳೂರು

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣದ ತನಿಖೆ ಮುಂದುವರಿದಿರುವ ಹಿನ್ನೆಲೆಯಲ್ಲಿ ಮಾಜಿ ಸಚಿವ ಬಿ. ನಾಗೇಂದ್ರ ಅವರನ್ನು ಮತ್ತೆ ಸಚಿವ ಸಂಪುಟಕ್ಕೆ ಸೇರಿಸಿರುವುದನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತೀವ್ರವಾಗಿ ವಿರೋಧಿಸಿದ್ದಾರೆ. ನಾಗೇಂದ್ರ ಅವರಿಗೆ ಕ್ಲೀನ್‌ಚಿಟ್ ಸಿಕ್ಕಿಲ್ಲ, ಅವರ ವಿರುದ್ಧ ತನಿಖೆ ನಡೆಯುತ್ತಿರುವಾಗಲೇ ಮರುನೇಮಕ ಮಾಡಿರುವುದು ಅಕ್ಷಮ್ಯ ಎಂದು ಅವರು ಆರೋಪಿಸಿದರು.

ಮಲ್ಲೇಶ್ವರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ವಿಜಯೇಂದ್ರ, ನಾಗೇಂದ್ರ ಅವರನ್ನು ಮತ್ತೆ ಸಚಿವರನ್ನಾಗಿ ನೇಮಿಸುವ ಅನಿವಾರ್ಯತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಏನಿತ್ತು ಎಂದು ಪ್ರಶ್ನಿಸಿದರು. ಕಾಂಗ್ರೆಸ್ ಹೈಕಮಾಂಡ್‌ನ ಒತ್ತಡವೇ ಇದಕ್ಕೆ ಕಾರಣವೇ ಎಂಬುದನ್ನೂ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ವಾಲ್ಮೀಕಿ ನಿಗಮದಲ್ಲಿ ನೂರಾರು ಕೋಟಿ ರೂಪಾಯಿ ಅಕ್ರಮ ನಡೆದಿದೆ ಎಂದು ಆರೋಪಿಸಿದ ಅವರು, ಹಗರಣದ ಹೊಣೆ ಹೊತ್ತು ನಾಗೇಂದ್ರ ಅವರು ಈ ಹಿಂದೆ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ನಿಗಮದ ಹಣವನ್ನು ಅಕ್ರಮವಾಗಿ ವರ್ಗಾವಣೆ ಮಾಡಿ ಚುನಾವಣೆಗೆ ಬಳಸಲಾಗಿದೆ ಎಂಬ ಆರೋಪಗಳಿದ್ದು, ಈ ಕುರಿತು ಜಾರಿ ನಿರ್ದೇಶನಾಲಯದ ದಾಖಲೆಗಳಲ್ಲೂ ಉಲ್ಲೇಖವಿದೆ ಎಂದು ಹೇಳಿದರು. ಹಗರಣದ ಬಳಿಕ ಅಮಾಯಕ ಅಧಿಕಾರಿ ಚಂದ್ರಶೇಖರ್ ಆತ್ಮಹತ್ಯೆ ಮಾಡಿಕೊಂಡಿರುವುದನ್ನೂ ಅವರು ಪ್ರಸ್ತಾಪಿಸಿದರು.

ವಿಜಯೇಂದ್ರ ಅವರು, ನಾಗೇಂದ್ರ ವಿರುದ್ಧದ ತನಿಖೆಗಳು ಪೂರ್ಣಗೊಳ್ಳುವ ಮುನ್ನವೇ ಅವರನ್ನು ಮತ್ತೆ ಸಚಿವರನ್ನಾಗಿ ಮಾಡಿರುವುದು ಸರ್ಕಾರದ ನೈತಿಕತೆಯನ್ನೇ ಪ್ರಶ್ನಿಸುವಂತಾಗಿದೆ ಎಂದು ಟೀಕಿಸಿದರು. ನಾಗೇಂದ್ರ ಅವರ ರಾಜೀನಾಮೆ ಪಡೆಯುವವರೆಗೆ ವಿಧಾನಸಭೆಯ ಒಳಗೂ ಹೊರಗೂ ಬಿಜೆಪಿ ಹೋರಾಟ ಮುಂದುವರಿಸಲಿದೆ ಎಂದು ಎಚ್ಚರಿಸಿದರು.

ಮುಂಬರುವ ವಿಧಾನಸಭೆ ಅಧಿವೇಶನದಲ್ಲಿ ವಾಲ್ಮೀಕಿ ನಿಗಮ ಹಗರಣದ ಜತೆಗೆ ಬರ, ರೈತರ ಸಮಸ್ಯೆ, ಅಭಿವೃದ್ಧಿ ಕುಂಠಿತ ಸೇರಿದಂತೆ ರಾಜ್ಯದ ಹಲವು ಜ್ವಲಂತ ವಿಚಾರಗಳನ್ನು ಪ್ರಸ್ತಾಪಿಸಲಾಗುವುದು. ಆಡಳಿತ ಪಕ್ಷವು ವಿರೋಧ ಪಕ್ಷದ ಪ್ರಶ್ನೆಗಳಿಗೆ ಸಮರ್ಪಕ ಉತ್ತರ ನೀಡಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು.

ಸರ್ಕಾರವು ನಾಗೇಂದ್ರ ಅವರನ್ನು ಸಂಪುಟದಿಂದ ಕೈಬಿಟ್ಟು ಪರಿಶಿಷ್ಟ ಪಂಗಡದ ಜನರಿಗೆ ನ್ಯಾಯ ಒದಗಿಸಬೇಕು. ಹಗರಣದ ತನಿಖೆ ಪಾರದರ್ಶಕವಾಗಿ ನಡೆಯುವಂತೆ ನೋಡಿಕೊಳ್ಳಬೇಕು. ಇಲ್ಲದಿದ್ದರೆ ರಾಜ್ಯಾದ್ಯಂತ ಹೋರಾಟ ತೀವ್ರಗೊಳಿಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.




## ಜೆಡಿಎಸ್ ಪಾದಯಾತ್ರೆಗೆ ಸಾಂಕೇತಿಕ ಬೆಂಬಲ

ಜೆಡಿಎಸ್ ನಡೆಸಿದ ಪಾದಯಾತ್ರೆಗೆ ಬಿಜೆಪಿ ಕೋರ್ ಕಮಿಟಿಯಲ್ಲಿ ಸಾಂಕೇತಿಕ ಬೆಂಬಲ ನೀಡಲು ನಿರ್ಧರಿಸಲಾಗಿತ್ತು ಎಂದು ವಿಜಯೇಂದ್ರ ಸ್ಪಷ್ಟಪಡಿಸಿದರು. ಪೂರ್ವನಿಗದಿತ ಕಾರ್ಯಕ್ರಮ ಹಾಗೂ ಬರ ಪರಿಸ್ಥಿತಿ ಪರಿಶೀಲನೆ ಹಿನ್ನೆಲೆಯಲ್ಲಿ ತಾವು ಪಾದಯಾತ್ರೆಯಲ್ಲಿ ಭಾಗವಹಿಸಿರಲಿಲ್ಲ. ಇದಕ್ಕೆ ಯಾವುದೇ ರಾಜಕೀಯ ಕಾರಣವಿಲ್ಲ ಎಂದು ಅವರು ಹೇಳಿದರು. ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಹಾಗೂ ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಉಪಸ್ಥಿತರಿದ್ದರು.

## ಸದನದಲ್ಲೂ ಹೋರಾಟ

ನಾಗೇಂದ್ರ ಅವರ ರಾಜೀನಾಮೆ ಪಡೆಯುವವರೆಗೆ ಸದನದ ಒಳಗೆ ಹಾಗೂ ಹೊರಗೆ ಜೆಡಿಎಸ್ ಜತೆಗೂಡಿ ಹೋರಾಟ ನಡೆಸುವುದಾಗಿ ವಿಜಯೇಂದ್ರ ಎಚ್ಚರಿಸಿದರು. ಪರಿಶಿಷ್ಟ ಪಂಗಡದವರ ಕಲ್ಯಾಣಕ್ಕೆ ಮೀಸಲಿಟ್ಟ ಹಣದ ಅಕ್ರಮವನ್ನು ಗಂಭೀರವಾಗಿ ಪರಿಗಣಿಸಬೇಕು. ನಾಗೇಂದ್ರ ಬದಲಿಗೆ ಅವರ ಸಮುದಾಯದ ಮತ್ತೊಬ್ಬರನ್ನು ಸಚಿವರನ್ನಾಗಿ ನೇಮಿಸಬಹುದು ಎಂದು ಅವರು ಸಲಹೆ ನೀಡಿದರು.

## ಜ್ವಲಂತ ಸಮಸ್ಯೆಗಳ ಚರ್ಚೆಗೆ ಒತ್ತು

ಮುಂಬರುವ ಮುಂಗಾರು ಅಧಿವೇಶನದಲ್ಲಿ ಬರ, ರೈತರ ಸಂಕಷ್ಟ, ಅಭಿವೃದ್ಧಿ ಕುಂಠಿತವಾಗಿರುವುದು, ಸಾಮಾಜಿಕ ಭದ್ರತಾ ಪಿಂಚಣಿಗಳ ಕಡಿತ ಸೇರಿದಂತೆ ರಾಜ್ಯದ ಪ್ರಮುಖ ಸಮಸ್ಯೆಗಳ ಕುರಿತು ಸಮಗ್ರ ಚರ್ಚೆ ನಡೆಸಲಾಗುವುದು ಎಂದು ವಿಜಯೇಂದ್ರ ಹೇಳಿದರು. ಹಾಲು ಉತ್ಪಾದಕರಿಗೆ ಹಿಂದಿನ ಬಿಜೆಪಿ ಸರ್ಕಾರ ಘೋಷಿಸಿದ್ದ ಪ್ರೋತ್ಸಾಹಧನವನ್ನು ಕಾಂಗ್ರೆಸ್ ಸರ್ಕಾರ ನಿಲ್ಲಿಸಿದೆ ಎಂದು ಆರೋಪಿಸಿದ ಅವರು, ರಾಜ್ಯದಲ್ಲಿ ಬರ ಪರಿಸ್ಥಿತಿ ಗಂಭೀರವಾಗಿದ್ದರೂ ಸರ್ಕಾರ ರೈತರ ಸಮಸ್ಯೆಗಳಿಗೆ ಸಮರ್ಪಕವಾಗಿ ಸ್ಪಂದಿಸುತ್ತಿಲ್ಲ ಎಂದು ಟೀಕಿಸಿದರು.

**ಖಾತೆ ಹಂಚಿಕೆ**

ವಿಳಂಬವಾಗಿರುವುದನ್ನೂ ಪ್ರಶ್ನಿಸಿದ ವಿಜಯೇಂದ್ರ, ಅಧಿವೇಶನ ಆರಂಭವಾಗುವ ಹಂತದಲ್ಲಿಯೂ ಕೃಷಿ ಮತ್ತು ತೋಟಗಾರಿಕೆ ಸಚಿವರು ಯಾರು ಎಂಬುದು ರೈತರಿಗೆ ಸ್ಪಷ್ಟವಾಗಿಲ್ಲ ಎಂದು ಹೇಳಿದರು. ಕಾಂಗ್ರೆಸ್ ಹೈಕಮಾಂಡ್‌ನ ಅನುಮತಿ ಇಲ್ಲದೆ ರಾಜ್ಯದಲ್ಲಿ ಯಾವುದೇ ನಿರ್ಧಾರ ಕೈಗೊಳ್ಳಲಾಗದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಿದರು.

# ನೇರ ತೆರಿಗೆಯಲ್ಲಿ ಶೇ.23ರಷ್ಟು ಜಿಗಿತ

● ವಿಕ್ರಮ ವಾಹಿನಿ । ನವದೆಹಲಿ

ಪ್ರಸಕ್ತ ಹಣಕಾಸು ವರ್ಷದಲ್ಲಿ ಭಾರತದ ನೇರ ತೆರಿಗೆ ಸಂಗ್ರಹ ಭರ್ಜರಿ ಏರಿಕೆ ಕಂಡಿದೆ. ಆಗಸ್ಟ್ 10ರವರೆಗೆ ನಿವ್ವಳ ನೇರ ತೆರಿಗೆ ಸಂಗ್ರಹ ರೂ 8.11 ಲಕ್ಷ ಕೋಟಿ ತಲುಪಿದ್ದು, ಕಳೆದ ವರ್ಷದ ಇದೇ ಅವಧಿಯ ರೂ 6.59 ಲಕ್ಷ ಕೋಟಿಗೆ ಹೋಲಿಸಿದರೆ ಶೇ.23.09ರಷ್ಟು ಹೆಚ್ಚಾಗಿದೆ.

ರಿಫಂಡ್‌ಗೂ ಮುನ್ನದ ಒಟ್ಟು ನೇರ ತೆರಿಗೆ ಸಂಗ್ರಹ ರೂ 9.55 ಲಕ್ಷ ಕೋಟಿಯಾಗಿದ್ದು, ಕಳೆದ ವರ್ಷ ರೂ 7.97 ಲಕ್ಷ ಕೋಟಿ ಇತ್ತು. ಈ ಅವಧಿಯಲ್ಲಿ ತೆರಿಗೆದಾರರಿಗೆ ರೂ 1.43 ಲಕ್ಷ ಕೋಟಿ ರಿಫಂಡ್ ನೀಡಲಾಗಿದೆ.

ವೈಯಕ್ತಿಕ ತೆರಿಗೆಯಲ್ಲಿ ಹೆಚ್ಚಳ: ಕಾರ್ಪೊರೇತರ ತೆರಿಗೆಗಳಿಂದ ರೂ 5.07 ಲಕ್ಷ ಕೋಟಿ ಸಂಗ್ರಹವಾಗಿದ್ದು, ಕಳೆದ ವರ್ಷದ ರೂ 4.11 ಲಕ್ಷ ಕೋಟಿಗೆ ಹೋಲಿಸಿದರೆ ಶೇ.23.4ರಷ್ಟು ಏರಿಕೆಯಾಗಿದೆ. ಇದರಲ್ಲಿ ವೈಯಕ್ತಿಕ ಆದಾಯ ತೆರಿಗೆದಾರರು, ಎಚ್‌ಯುಎಫ್‌ಗಳು ಹಾಗೂ ಇತರ ಸಂಸ್ಥೆಗಳ ಕೊಡುಗೆ ಪ್ರಮುಖವಾಗಿದೆ.

ಕಾರ್ಪೊರೇಟ್ ತೆರಿಗೆ ರೂ 2.70 ಲಕ್ಷ ಕೋಟಿ: ನಿವ್ವಳ ಕಾರ್ಪೊರೇಟ್ ತೆರಿಗೆ ಸಂಗ್ರಹವು ರೂ 2.26 ಲಕ್ಷ ಕೋಟಿಯಿಂದ ರೂ 2.70 ಲಕ್ಷ ಕೋಟಿಗೆ ಏರಿಕೆಯಾಗಿದ್ದು, ಶೇ.19.8ರಷ್ಟು ಬೆಳವಣಿಗೆ ದಾಖಲಿಸಿದೆ.


ಎಸ್‌ಟಿಟಿಯಲ್ಲೂ ಭಾರಿ ಜಿಗಿತ: ಷೇರು ಮಾರುಕಟ್ಟೆ ವಹಿವಾಟಿನ ಮೇಲಿನ ಸೆಕ್ಯುರಿಟೀಸ್ ಟ್ರಾನ್ಸಾಕ್ಷನ್ ಟ್ಯಾಕ್ಸ್ ಸಂಗ್ರಹ ರೂ 22,354 ಕೋಟಿಯಿಂದ ರೂ 33,824 ಕೋಟಿಗೆ ಏರಿಕೆಯಾಗಿದೆ. ಇದು ಸುಮಾರು ಶೇ.51ರಷ್ಟು ಹೆಚ್ಚಳವಾಗಿದೆ.

# ಗಣೇಶ ಹಬ್ಬಕ್ಕೆ 254 ವಿಶೇಷ ರೈಲು

● ವಿಕ್ರಮ ವಾಹಿನಿ । ಪಣಜಿ

ಮುಂಬರುವ ಗಣೇಶ ಚತುರ್ಥಿ ಹಬ್ಬದ ಹಿನ್ನೆಲೆಯಲ್ಲಿ ಪ್ರಯಾಣಿಕರ ಹೆಚ್ಚುವರಿ ಸಂಚಾರವನ್ನು ಗಮನದಲ್ಲಿಟ್ಟುಕೊಂಡು ಕೊಂಕಣ ರೈಲ್ವೆ 254 ವಿಶೇಷ ರೈಲುಗಳನ್ನು ಓಡಿಸಲು ನಿರ್ಧರಿಸಿದೆ. ಸೆಪ್ಟೆಂಬರ್ 14ರಂದು ಗಣೇಶ ಚತುರ್ಥಿ ಆಚರಿಸಲಾಗುತ್ತಿದ್ದು, ಹಬ್ಬದ ಹಿನ್ನೆಲೆಯಲ್ಲಿ ಊರುಗಳಿಗೆ ತೆರಳುವ ಪ್ರಯಾಣಿಕರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಈ ವಿಶೇಷ ಸೇವೆ ಆರಂಭಿಸಲಾಗುತ್ತಿದೆ.

ಕೊಂಕಣ ರೈಲ್ವೆ ಕಾರ್ಪೊರೇಷನ್ ಲಿಮಿಟೆಡ್‌ನ ಉಪ ಪ್ರಧಾನ ವ್ಯವಸ್ಥಾಪಕ ಬಬನ್ ಘಾಟ್ಗೆ ಅವರ ಮಾಹಿತಿ ಪ್ರಕಾರ, ಕೇಂದ್ರ ರೈಲ್ವೆಯ ಸಹಯೋಗದೊಂದಿಗೆ 254 ವಿಶೇಷ ರೈಲುಗಳ ಪೈಕಿ 246 ರೈಲುಗಳು ಸೆಪ್ಟೆಂಬರ್ 11ರಿಂದ 27ರವರೆಗೆ ವಿವಿಧ ಮಾರ್ಗಗಳಲ್ಲಿ ಸಂಚರಿಸಲಿವೆ.



**ಮಂಗಳೂರು ಸೇರಿದಂತೆ ಹಲವು ಮಾರ್ಗ**

ವಿಶೇಷ ರೈಲುಗಳು ಮುಂಬೈನ ಛತ್ರಪತಿ ಶಿವಾಜಿ ಮಹಾರಾಜ್ ಟರ್ಮಿನಸ್‌ನಿಂದ ಸಾವಂತವಾಡಿ, ರತ್ನಗಿರಿ, ಮಡಗಾಂವ್ ಹಾಗೂ ಮಂಗಳೂರು ಮಾರ್ಗಗಳಲ್ಲಿ ಸಂಚರಿಸಲಿವೆ. ಇದರೊಂದಿಗೆ ಲೋಕಮಾನ್ಯ ತಿಲಕ್ ಟರ್ಮಿನಸ್‌ನಿಂದ ರತ್ನಗಿರಿ, ಮಡಗಾಂವ್ ಮತ್ತು ಮಂಗಳೂರು ಹಾಗೂ ಪುಣೆಯಿಂದ ರತ್ನಗಿರಿ ಮತ್ತು ಸಾವಂತವಾಡಿ ಮಾರ್ಗಗಳಲ್ಲೂ ವಿಶೇಷ ರೈಲುಗಳನ್ನು ಓಡಿಸಲಾಗುತ್ತದೆ.

**ಪಶ್ಚಿಮ ರೈಲ್ವೆಯಿಂದ 8 ರೈಲು**

ಪಶ್ಚಿಮ ರೈಲ್ವೆಯ ಸಹಯೋಗದೊಂದಿಗೆ ಮತ್ತಷ್ಟು ಎಂಟು ವಿಶೇಷ ರೈಲುಗಳನ್ನು ಓಡಿಸಲಾಗುತ್ತದೆ. ಬಾಂದ್ರಾ ಟರ್ಮಿನಸ್, ವಡೋದರಾ, ವಿಶ್ವಾಮಿತ್ರಿ, ಭೂಸಾವಲ್ ಹಾಗೂ ವಲ್ಸಾದ್ ನಿಲ್ದಾಣಗಳಿಂದ ಈ ರೈಲುಗಳು ಸಂಚರಿಸಲಿವೆ.

ಗಣೇಶ ಹಬ್ಬದ ಸಂದರ್ಭದಲ್ಲಿ ಪ್ರಯಾಣಿಕರ ದಟ್ಟಣೆಯನ್ನು ನಿಯಂತ್ರಿಸುವುದು ಹಾಗೂ ಹೆಚ್ಚುವರಿ ಪ್ರಯಾಣಿಕರಿಗೆ ಸಾರಿಗೆ ಸೌಲಭ್ಯ ಒದಗಿಸುವುದು ವಿಶೇಷ ರೈಲುಗಳ ಪ್ರಮುಖ ಉದ್ದೇಶವಾಗಿದೆ. ಎಲ್ಲಾ ವಿಶೇಷ ರೈಲುಗಳ ಮುಂಗಡ ಬುಕಿಂಗ್ ಈಗಾಗಲೇ ಆರಂಭವಾಗಿದೆ.

ಹಬ್ಬದ ಅವಧಿಯಲ್ಲಿ ಸಾಮಾನ್ಯ ರೈಲುಗಳಲ್ಲಿ ಪ್ರಯಾಣಿಕರ ದಟ್ಟಣೆ ಹೆಚ್ಚಾಗುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ, ವಿಶೇಷ ರೈಲುಗಳ ಸಂಚಾರದಿಂದ ಪ್ರಯಾಣಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ.

# ಟೇಕ್ವಾಂಡೋ: ಚಿತ್ರದುರ್ಗಕ್ಕೆ ಸಮಗ್ರ ಪ್ರಶಸ್ತಿ

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕ ರಾಜ್ಯ ಟೇಕ್ವಾಂಡೋ ಸಂಸ್ಥೆ ವತಿಯಿಂದ ಚಿತ್ರದುರ್ಗದಲ್ಲಿ ನಡೆದ 41ನೇ ರಾಜ್ಯಮಟ್ಟದ ಸಬ್‌ಜೂನಿಯರ್, ಜೂನಿಯರ್ ಹಾಗೂ ಸೀನಿಯರ್ ವಿಭಾಗಗಳ ಟೇಕ್ವಾಂಡೋ ಪಂದ್ಯಾವಳಿಯಲ್ಲಿ ಚಿತ್ರದುರ್ಗ ಜಿಲ್ಲೆ ಸಮಗ್ರ ಪ್ರಶಸ್ತಿ ಗೆದ್ದುಕೊಂಡಿದ್ದು, ತುಮಕೂರು ದ್ವಿತೀಯ ಸ್ಥಾನ ಪಡೆದಿದೆ.

ಮೂರು ದಿನಗಳ ಕಾಲ ನಡೆದ ಕ್ರೀಡಾಕೂಟದಲ್ಲಿ 14 ಜಿಲ್ಲೆಗಳಿಂದ 450ಕ್ಕೂ ಹೆಚ್ಚು ಕ್ರೀಡಾಪಟುಗಳು ಭಾಗವಹಿಸಿದ್ದರು. ಸಬ್‌ಜೂನಿಯರ್, ಜೂನಿಯರ್, ಸೀನಿಯರ್ ವಿಭಾಗಗಳ ಜತೆಗೆ 10ನೇ ಕೆಡೆಟ್ ಕ್ಯೋರುಗಿ, 14ನೇ ಪುಂಸೆ, 3ನೇ ಪ್ಯಾರಾ ಟೇಕ್ವಾಂಡೋ ಹಾಗೂ 4ನೇ ಎಕ್ಸ್‌ಪೋ ಟೇಕ್ವಾಂಡೋ ಸ್ಪರ್ಧೆಗಳು ನಡೆದವು.

ಸಬ್‌ಜೂನಿಯರ್ ಬಾಲಕಿಯರ ವಿಭಾಗದಲ್ಲಿ ತುಮಕೂರು ಪ್ರಥಮ ಹಾಗೂ ಚಿತ್ರದುರ್ಗ ದ್ವಿತೀಯ ಸ್ಥಾನ ಪಡೆದರೆ, ಬಾಲಕರ ವಿಭಾಗದಲ್ಲಿ ಬೆಂಗಳೂರು ಪ್ರಥಮ ಹಾಗೂ ತುಮಕೂರು ದ್ವಿತೀಯ ಸ್ಥಾನ ಗಳಿಸಿತು. ಕೆಡೆಟ್ ಬಾಲಕರ ವಿಭಾಗದಲ್ಲಿ ಬೆಂಗಳೂರು ಪ್ರಥಮ, ತುಮಕೂರು ದ್ವಿತೀಯ




ಹಾಗೂ ಬಾಲಕಿಯರ ವಿಭಾಗದಲ್ಲಿ ಚಿತ್ರದುರ್ಗ ಪ್ರಥಮ, ಬೆಂಗಳೂರು ದ್ವಿತೀಯ ಸ್ಥಾನ ಪಡೆದವು.

ಜೂನಿಯರ್ ಬಾಲಕರ ವಿಭಾಗದಲ್ಲಿ ಚಿತ್ರದುರ್ಗ ಪ್ರಥಮ ಹಾಗೂ ಬೆಂಗಳೂರು ದ್ವಿತೀಯ ಸ್ಥಾನ ಗಳಿಸಿದರೆ, ಜೂನಿಯರ್ ಬಾಲಕಿಯರ ವಿಭಾಗದಲ್ಲಿ ಬೆಂಗಳೂರು ಪ್ರಥಮ ಹಾಗೂ ತುಮಕೂರು ದ್ವಿತೀಯ ಸ್ಥಾನ ಪಡೆದಿತು. ಸೀನಿಯರ್ ವಿಭಾಗದಲ್ಲಿ ತುಮಕೂರು ಪ್ರಥಮ ಹಾಗೂ ಬೆಂಗಳೂರು ದ್ವಿತೀಯ ಸ್ಥಾನ ಗಳಿಸಿತು.

ಕರ್ನಾಟಕ ರಾಜ್ಯ ಟೇಕ್ವಾಂಡೋ ಸಂಸ್ಥೆ ಅಧ್ಯಕ್ಷ ತಿರುಮಾಲ್.ಜೆ ಅವರ ಮಾರ್ಗದರ್ಶನದಲ್ಲಿ ಹಾಗೂ ಚಿತ್ರದುರ್ಗ ಟೇಕ್ವಾಂಡೋ ಸಂಸ್ಥೆಯ ತರಬೇತುದಾರರು ಮತ್ತು ಪಂದ್ಯಾವಳಿ ಆಯೋಜಕರಾದ ಎಂ. ಸುನೀತಾ ಪ್ರವೀಣ್ ಕುಮಾರ್ ಹಾಗೂ ಎಂ. ಅನಿತಾ ಮಾಂತೇಶ್ ನೇತೃತ್ವದಲ್ಲಿ ಪಂದ್ಯಾವಳಿ ಯಶಸ್ವಿಯಾಗಿ ನಡೆಯಿತು.

# ನಾಗೇಂದ್ರ ರಾಜೀನಾಮೆಗೆ ಆಗ್ರಹ: ಅಧಿವೇಶನಕ್ಕೆ ಅಶೋಕ ಎಚ್ಚರಿಕೆ

● ವಿಕ್ರಮ ವಾಹಿನಿ । ಬೆಂಗಳೂರು



ಬಿ.ನಾಗೇಂದ್ರ ಅವರು ಸಚಿವರಾಗಿರುವವರೆಗೆ ವಿಧಾನಸಭೆ ಅಧಿವೇಶನ ಸುಗಮವಾಗಿ ನಡೆಯಲು ಅವಕಾಶ ನೀಡುವುದಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಎಚ್ಚರಿಸಿದ್ದಾರೆ. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ನಾಗೇಂದ್ರ ವಿರುದ್ಧ ತನಿಖೆಗಳು ಮುಂದುವರಿದಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕೂಡಲೇ ಅವರ ರಾಜೀನಾಮೆ ಪಡೆಯಬೇಕು ಎಂದು ಆಗ್ರಹಿಸಿದರು.

ನಾಗೇಂದ್ರ ವಿರುದ್ಧ ಸಿಬಿಐ, ಲೋಕಾಯುಕ್ತ, ಎಸ್‌ಐಟಿ ಹಾಗೂ ಸಿಐಡಿ ತನಿಖೆಗಳು ನಡೆಯುತ್ತಿವೆ. ಇಂತಹ ಸಂದರ್ಭದಲ್ಲಿ ಅವರನ್ನು ಮತ್ತೆ ಸಚಿವರನ್ನಾಗಿ ಮಾಡಿರುವುದು ಸರ್ಕಾರದ ವಿರುದ್ಧ ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ. ನಾಗೇಂದ್ರ ರಾಜೀನಾಮೆ ಪಡೆಯುವವರೆಗೆ ವಿಧಾನಸಭೆಯ ಒಳಗೆ ಹಾಗೂ ಹೊರಗೆ ಬಿಜೆಪಿ ಹೋರಾಟ ನಡೆಸಲಿದೆ. ರಾಜ್ಯದ ಎಲ್ಲ ಜಿಲ್ಲಾಕೇಂದ್ರಗಳಲ್ಲೂ ಪ್ರತಿಭಟನೆ ನಡೆಸಲಾಗುವುದು ಎಂದು ಅಶೋಕ ತಿಳಿಸಿದರು.

ಅಧಿವೇಶನದಲ್ಲಿ ಬಿಡದಿ ಟೌನ್‌ಶಿಪ್, ಕೆಪಿಎಸ್‌ಸಿ ಸೇರಿದಂತೆ ರಾಜ್ಯದ ಪ್ರಮುಖ ಸಮಸ್ಯೆಗಳ ಕುರಿತು ಚರ್ಚೆಯಾಗಬೇಕಿದೆ. ಆದರೆ ಸರ್ಕಾರ ಮೊದಲು ನಾಗೇಂದ್ರ ಅವರ ವಿಚಾರದಲ್ಲಿ ಸ್ಪಷ್ಟ ನಿರ್ಧಾರ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

‘ಸ್ವಚ್ಛ ಬೆಂಗಳೂರು’ ಹೆಸರಿನಲ್ಲಿ ತೆರಿಗೆ ಲೂಟಿ

‘ಸ್ವಚ್ಛ ಬೆಂಗಳೂರು’ ಹೆಸರಿನಲ್ಲಿ ಕಾಂಗ್ರೆಸ್ ಸರ್ಕಾರ ಜನರಿಂದ ಹೆಚ್ಚುವರಿ ತೆರಿಗೆ ವಸೂಲಿ ಮಾಡುತ್ತಿದೆ ಎಂದು ಅಶೋಕ ಆರೋಪಿಸಿದರು. ಕಸ ನಿರ್ವಹಣೆಗೆ ಈಗಾಗಲೇ ತೆರಿಗೆ ಪಾವತಿಸುತ್ತಿರುವ ಜನರ ಮೇಲೆ ಮತ್ತಷ್ಟು ಶುಲ್ಕ ವಿಧಿಸುವುದು ಸರಿಯಲ್ಲ ಎಂದರು.

ಫ್ಲ್ಯಾಟ್‌ಗಳ ಕಸದ ಶುಲ್ಕವನ್ನು 40ರಿಂದ 400ಕ್ಕೆ ಹೆಚ್ಚಿಸಲಾಗಿದೆ. ಆದರೆ ನಗರದಲ್ಲಿ ಕಸದ ಸಮಸ್ಯೆ, ರಸ್ತೆ ಗುಂಡಿ ಹಾಗೂ ಪಾದಚಾರಿ ಮಾರ್ಗಗಳ ಒತ್ತುವರಿ ಇನ್ನೂ ಮುಂದುವರಿದಿದೆ. ಮೂಲಸೌಕರ್ಯ ಸುಧಾರಿಸುವ ಬದಲು ಜನರ ಮೇಲೆ ತೆರಿಗೆ ಹೊರೆ ಹಾಕಲಾಗುತ್ತಿದೆ ಎಂದು ಅವರು ಟೀಕಿಸಿದರು.

ಬೆಂಗಳೂರಿನ ಅಭಿವೃದ್ಧಿಗೆ ಆದ್ಯತೆ ನೀಡದೆ ತೆರಿಗೆ ಸಂಗ್ರಹಿಸುವ ಸರ್ಕಾರಕ್ಕೆ ಜಿಬಿಎ ಚುನಾವಣೆ ವೇಳೆ ಜನರು ತಕ್ಕ ಉತ್ತರ ನೀಡಲಿದ್ದಾರೆ ಎಂದು ಅಶೋಕ ಹೇಳಿದರು.

# ‘ಬರ ಘೋಷಿಸಿ, ಎಕರೆಗೆ ರೂ 50 ಸಾವಿರ ಪರಿಹಾರ ನೀಡಿ’

● ವಿಕ್ರಮ ವಾಹಿನಿ । ಬೆಂಗಳೂರು



**ಬರಪೀಡಿತ ರಾಜ್ಯ ಘೋಷಿಸಿ ರೈತರಿಗೆ ಎಕರೆಗೆ ರೂ 50 ಸಾವಿರ ಪರಿಹಾರ ನೀಡಬೇಕು ಎಂದು ಎನ್. ರವಿಕುಮಾರ್ ಆಗ್ರಹಿಸಿದ್ದಾರೆ. ರಾಜ್ಯ ಸರ್ಕಾರ ರೈತರ ಸಂಕಷ್ಟ ನಿರ್ಲಕ್ಷಿಸುತ್ತಿದ್ದು, ಬರ ಪರಿಹಾರಕ್ಕೆ ತಕ್ಷಣ ಅನುದಾನ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.**

ಕಾಂಗ್ರೆಸ್ ಸರ್ಕಾರದ ನಿರ್ಲಕ್ಷ್ಯ ಹಾಗೂ ಬೇಜವಾಬ್ದಾರಿತನದಿಂದ ರಾಜ್ಯದ ರೈತರು ಆತ್ಮಹತ್ಯೆಯ ಅಂಚಿಗೆ ತಲುಪಿದ್ದಾರೆ. ಕೂಡಲೇ ಕರ್ನಾಟಕವನ್ನು ಬರಪೀಡಿತ ರಾಜ್ಯವೆಂದು ಘೋಷಿಸಿ, ಸಂಕಷ್ಟದಲ್ಲಿರುವ ರೈತರಿಗೆ ಎಕರೆಗೆ ರೂ 50,000 ಪರಿಹಾರ ನೀಡಬೇಕು ಎಂದು ವಿಧಾನ ಪರಿಷತ್ ಪ್ರತಿಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಆಗ್ರಹಿಸಿದರು.

ಬೆಂಗಳೂರಿನ ಪಕ್ಷದ ರಾಜ್ಯ ಕಚೇರಿ ‘ಜಗನ್ನಾಥ ಭವನ’ದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, “ರೈತರ ಕಣ್ಣೀರಿನ ಕಥೆಗಳನ್ನು ಕೇಳಿದರೆ ಕಾಂಗ್ರೆಸ್ ಸರ್ಕಾರ ರೈತರ ಬಗ್ಗೆ ಹೊಂದಿರುವ ಧೋರಣೆ ಎಷ್ಟು ನಿರ್ಲಕ್ಷ್ಯಪೂರ್ಣವಾಗಿದೆ ಎಂಬುದು ಸ್ಪಷ್ಟವಾಗುತ್ತದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರ ರೈತರ ಸಂಕಷ್ಟದ ಬಗ್ಗೆ ಸಂಪೂರ್ಣ ಅಸೂಕ್ಷ್ಮವಾಗಿದೆ. ರೈತರ ಸಮಸ್ಯೆಗಳಿಗೆ ಸ್ಪಂದಿಸುವ ಬದಲು ಮುಖ್ಯಮಂತ್ರಿ ಪಕ್ಷದ ಆಂತರಿಕ ರಾಜಕಾರಣ, ಸಂಪುಟ ವಿಸ್ತರಣೆ ಹಾಗೂ ಖಾತೆ ಹಂಚಿಕೆಯಲ್ಲೇ ಮುಳುಗಿದ್ದಾರೆ” ಎಂದು ಆರೋಪಿಸಿದರು.

ಬೆಳಗಾವಿ, ಬಾಗಲಕೋಟೆ, ವಿಜಯಪುರ ಹಾಗೂ ಧಾರವಾಡ ಜಿಲ್ಲೆಗಳಲ್ಲಿ ಮೂರು ದಿನಗಳ ಬರ ಪರಿಸ್ಥಿತಿ ಪರಿಶೀಲನಾ ಪ್ರವಾಸ ಕೈಗೊಂಡು ಬೆಂಗಳೂರಿಗೆ ಮರಳಿರುವ ರವಿ ಕುಮಾರ್, “ಕಡಿಮೆ ಮಳೆಯಿಂದ ಜಲಾಶಯಗಳ ನೀರಿನ ಮಟ್ಟ ಕುಸಿಯುತ್ತಿದೆ. ಕೃಷಿ ಉತ್ಪಾದನೆ ನಿರೀಕ್ಷಿತ ಮಟ್ಟದಲ್ಲಿಲ್ಲ. ರೈತರು ತೀವ್ರ ಸಂಕಷ್ಟದಲ್ಲಿದ್ದು, ಆತ್ಮಹತ್ಯೆಯ ಅಂಚಿಗೆ ತಲುಪಿದ್ದಾರೆ. ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ಕೊರತೆ ಎದುರಾಗಿದೆ. ಅನೇಕ ರೈತರು ತಮ್ಮ ಅಲ್ಪಸ್ವಲ್ಪ ಸಾಮಾನುಗಳೊಂದಿಗೆ ಬೇರೆ ರಾಜ್ಯಗಳಿಗೆ ವಲಸೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ” ಎಂದರು.

ತಾಲೂಕು ಮಟ್ಟದ ಆಡಳಿತ ಯಂತ್ರವೂ ಸೂಕ್ತ ಮಾರ್ಗದರ್ಶನ ಮತ್ತು ಅನುದಾನದ ಕೊರತೆಯಿಂದ ಸಂಪೂರ್ಣವಾಗಿ ನಿಷ್ಕ್ರಿಯವಾಗಿದೆ ಎಂದು ಆರೋಪಿಸಿದ ಅವರು, “ಮಧ್ಯಮ ಹಂತದ ಅಧಿಕಾರಿಗಳು ಅನಾಮಧೇಯವಾಗಿ ತಮ್ಮ ಅಸಹಾಯಕತೆಯನ್ನು ವ್ಯಕ್ತಪಡಿಸುತ್ತಿದ್ದಾರೆ. ಬರ ಪರಿಹಾರ ಕಾಮಗಾರಿಗಳಿಗೆ ಅಗತ್ಯವಾದಷ್ಟು ಹಣ ತಮ್ಮ ಬಳಿ ಇಲ್ಲ ಎಂದು ಅಧಿಕಾರಿಗಳೇ ಹೇಳುತ್ತಿದ್ದಾರೆ.

ರಾಜ್ಯದ ಬರ ಪರಿಸ್ಥಿತಿಗೆ ಸಂಬಂಧಿಸಿದಂತೆ ಸಮಗ್ರ ವರದಿಯನ್ನು ಬುಧವಾರ ಪಕ್ಷದ ರಾಜ್ಯಾಧ್ಯಕ್ಷರಿಗೆ ಸಲ್ಲಿಸಲಾಗುವುದು. ವಿಧಾನಮಂಡಲದ ಉಭಯ ಸದನಗಳಲ್ಲೂ ಈ ವಿಚಾರವನ್ನು ಗಂಭೀರವಾಗಿ ಪ್ರಸ್ತಾಪಿಸಿ, ಸರ್ಕಾರ ಬರ ಪರಿಹಾರ ಕಾಮಗಾರಿಗಳಿಗೆ ತಕ್ಷಣ ಅನುದಾನ ಬಿಡುಗಡೆ ಮಾಡುವಂತೆ ಒತ್ತಾಯಿಸಲಾಗುವುದು. ಬಳಿಕ ಹೆಚ್ಚುವರಿ ಪರಿಹಾರಕ್ಕಾಗಿ ಕೇಂದ್ರ ಸರ್ಕಾರದ ಮೊರೆ ಹೋಗಲಾಗುವುದು ಎಂದು ರವಿ ಕುಮಾರ್ ತಿಳಿಸಿದರು.

ರಾಂಚಿಯಲ್ಲಿ ವಿದ್ಯಾರ್ಥಿಗಳ ಮೇಲೆ ಲಾಠಿಚಾರ್ಜ್ ಖಂಡನೆ: ಜಾರ್ಖಂಡ್‌ನ ರಾಂಚಿಯಲ್ಲಿ ವಿದ್ಯಾರ್ಥಿಗಳ ಮೇಲೆ ನಡೆದ ಪೊಲೀಸ್ ಲಾಠಿಚಾರ್ಜ್‌ನ್ನು ತೀವ್ರವಾಗಿ ಖಂಡಿಸಿದ ರವಿ ಕುಮಾರ್, ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ಸೇರಿದಂತೆ ಇಡೀ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕು ಎಂದು ಆಗ್ರಹಿಸಿದರು.

“ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಜಾರ್ಖಂಡ್ ಶಿಕ್ಷಣ ಸಚಿವರ ರಾಜೀನಾಮೆಗೆ ಒತ್ತಾಯಿಸುವ ವಿಚಾರದಲ್ಲಿ ಮೌನ ವಹಿಸಿರುವುದು ಆಘಾತಕಾರಿಯಾಗಿದೆ.

ಇದೇ ರಾಹುಲ್ ಗಾಂಧಿ ಅವರು ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ಒತ್ತಾಯಿಸುವಾಗ ತೀವ್ರವಾಗಿ ಧ್ವನಿ ಎತ್ತಿದ್ದರು. ಇದು ಕಾಂಗ್ರೆಸ್‌ನ ಅವಕಾಶವಾದಿ ರಾಜಕಾರಣ ಹಾಗೂ ಸಂದರ್ಭಕ್ಕೆ ತಕ್ಕ ರಾಜಕೀಯದ ಮತ್ತೊಂದು ಉದಾಹರಣೆ. ಜಾರ್ಖಂಡ್ ಶಿಕ್ಷಣ ಸಚಿವರು ರಾಜೀನಾಮೆ ನೀಡಬೇಕು ಹಾಗೂ ಪರೀಕ್ಷೆಗೆ ಸಂಬಂಧಿಸಿದ ಎಲ್ಲಾ ಅಕ್ರಮಗಳನ್ನು ಸಿಬಿಐಗೆ ವಹಿಸಿ ಸಮಗ್ರ ತನಿಖೆ ನಡೆಸಬೇಕು” ಎಂದು ರವಿ ಕುಮಾರ್ ಆಗ್ರಹಿಸಿದರು.

# ಮಂಗಳೂರು ಪೀಠಕ್ಕೆ ಉ.ಕ. ಸೇರ್ಪಡೆಗೆ ಹೆಬ್ಬಾರ್ ವಿರೋಧ

● ವಿಕ್ರಮ ವಾಹಿನಿ । ಕಾರವಾರ

ಮಂಗಳೂರಿನಲ್ಲಿ ಪ್ರಸ್ತಾಪಿಸಲಾಗಿರುವ ಹೈಕೋರ್ಟ್ ಸಂಚಾರಿ ಪೀಠದ ವ್ಯಾಪ್ತಿಗೆ ಉತ್ತರ ಕನ್ನಡ ಜಿಲ್ಲೆಯನ್ನು ಸೇರ್ಪಡೆ ಮಾಡುವ ಪ್ರಸ್ತಾವನೆಗೆ ಶಾಸಕ ಶಿವರಾಮ ಹೆಬ್ಬಾರ್ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ಈ ಸಂಬಂಧ ಉತ್ತರ ಕನ್ನಡ ಜಿಲ್ಲಾ ಬಾರ್ ಅಸೋಸಿಯೇಷನ್ ಹಾಗೂ ವಿವಿಧ ಸಂಘಟನೆಗಳು ಕರೆ ನೀಡಿರುವ ಹೋರಾಟಕ್ಕೆ ಅವರು ಸಂಪೂರ್ಣ ಬೆಂಬಲ ಘೋಷಿಸಿದ್ದಾರೆ.

ವಿಡಿಯೋ ಸಂದೇಶದಲ್ಲಿ ಮಾತನಾಡಿದ ಹೆಬ್ಬಾರ್, ಉತ್ತರ ಕನ್ನಡ ಜಿಲ್ಲೆಯನ್ನು ಮಂಗಳೂರು ಪೀಠದ ವ್ಯಾಪ್ತಿಗೆ ಸೇರಿಸಿದರೆ ಜಿಲ್ಲೆಯ ದೂರದ ಪ್ರದೇಶಗಳ ಜನರು ನ್ಯಾಯಾಂಗ ಸೇವೆ ಪಡೆಯಲು ಸುಮಾರು 400 ಕಿ.ಮೀ.ವರೆಗೆ ಪ್ರಯಾಣಿಸಬೇಕಾಗಬಹುದು. ಇದರಿಂದ ಸಾರ್ವಜನಿಕರಿಗೆ ಹೆಚ್ಚಿನ ಸಮಯ, ಹಣ ಹಾಗೂ ಪ್ರಯಾಣದ ತೊಂದರೆ ಉಂಟಾಗಲಿದೆ ಎಂದು ಹೇಳಿದರು.

**ಜನರ ಹಿತಕ್ಕೆ ಧಕ್ಕೆ ಬೇಡ:** ಉತ್ತರ ಕನ್ನಡ ಜಿಲ್ಲೆಯ ಜನರ ಹಿತಕ್ಕೆ ಧಕ್ಕೆ ತರುವ ಯಾವುದೇ ಪ್ರಸ್ತಾವನೆಯನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ. ನ್ಯಾಯಾಂಗ ಸೇವೆ ಜನರಿಗೆ ಸುಲಭವಾಗಿ ಲಭ್ಯವಾಗುವಂತಿರಬೇಕು. ಹೀಗಾಗಿ ಜಿಲ್ಲೆಯ ವ್ಯಾಪ್ತಿಗೆ ಸಂಬಂಧಿಸಿದ ಯಾವುದೇ ನಿರ್ಧಾರ ಕೈಗೊಳ್ಳುವ ಮುನ್ನ ಸ್ಥಳೀಯ ಜನರ ಹಾಗೂ ವಕೀಲರ ಅಭಿಪ್ರಾಯ ಪರಿಗಣಿಸಬೇಕು ಎಂದು ಆಗ್ರಹಿಸಿದರು.

ಮುಖ್ಯ ನ್ಯಾಯಮೂರ್ತಿಗಳು ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಉತ್ತರ ಕನ್ನಡ ಜಿಲ್ಲೆಯ ಶಾಸಕರು ಮತ್ತು ಜಿಲ್ಲಾ ಬಾರ್ ಅಸೋಸಿಯೇಷನ್ ಪದಾಧಿಕಾರಿಗಳೊಂದಿಗೆ ಚರ್ಚಿಸಿ, ಜಿಲ್ಲೆಯ ಜನರಿಗೆ ಅನುಕೂಲವಾಗುವ ರೀತಿಯಲ್ಲಿ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ಹೆಬ್ಬಾರ್ ಒತ್ತಾಯಿಸಿದರು.

ಉತ್ತರ ಕನ್ನಡ ಜಿಲ್ಲೆಯನ್ನು ಮಂಗಳೂರು ಹೈಕೋರ್ಟ್ ಸಂಚಾರಿ ಪೀಠದ ವ್ಯಾಪ್ತಿಗೆ ಸೇರಿಸುವ ಪ್ರಸ್ತಾವನೆ ಹಿಂಪಡೆಯುವಂತೆ ಆಗ್ರಹಿಸಿ ನಡೆಯುವ ಹೋರಾಟಕ್ಕೆ ತಮ್ಮ ಸಂಪೂರ್ಣ ಬೆಂಬಲವಿದ್ದು, ಜಿಲ್ಲೆಯ ಜನರ ನ್ಯಾಯಾಂಗ ಹಕ್ಕುಗಳಿಗಾಗಿ ಧ್ವನಿ ಎತ್ತುವುದಾಗಿ ಅವರು ತಿಳಿಸಿದರು.

# ಗೃಹಲಕ್ಷ್ಮಿ ಬಳಿಕ ಗೃಹಜ್ಯೋತಿ ಯೋಜನೆ ಪರಿಷ್ಕರಣೆ ಫಿಕ್ಸ್?

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಪರಿಷ್ಕರಣೆಯ ಚರ್ಚೆ ಮುಂದುವರಿದಿರುವ ಬೆನ್ನಲ್ಲೇ, ಇದೀಗ ಗೃಹಜ್ಯೋತಿ ಯೋಜನೆಯಲ್ಲೂ ಬದಲಾವಣೆ ಮಾಡುವ ಸಾಧ್ಯತೆ ವ್ಯಕ್ತವಾಗಿದೆ.

ಸರ್ಕಾರಿ ನೌಕರರು ಹಾಗೂ ಆದಾಯ ತೆರಿಗೆ ಪಾವತಿದಾರರು ಸೇರಿದಂತೆ ಕೆಲವು ವರ್ಗದವರಿಗೆ ಗೃಹಜ್ಯೋತಿ ಸೌಲಭ್ಯ ಮುಂದುವರಿಸಬೇಕೇ ಅಥವಾ ಸ್ಥಗಿತಗೊಳಿಸಬೇಕೇ ಎಂಬ ಬಗ್ಗೆ ಸರ್ಕಾರ ಮಾಹಿತಿ ಸಂಗ್ರಹಿಸುತ್ತಿದ್ದು, ಅಂತಿಮ ನಿರ್ಧಾರವನ್ನು ಸಚಿವ ಸಂಪುಟ ಕೈಗೊಳ್ಳಲಿದೆ ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ. ಸದ್ಯ ಗೃಹಜ್ಯೋತಿ ಯೋಜನೆಯಲ್ಲಿ ಯಾವುದೇ ಪರಿಷ್ಕರಣೆ ಜಾರಿಗೊಳಿಸಿಲ್ಲ.

ಸರ್ಕಾರಿ ನೌಕರರು ಹಾಗೂ ಆದಾಯ ತೆರಿಗೆ ಪಾವತಿದಾರರೂ ಪ್ರಸ್ತುತ ಗೃಹಜ್ಯೋತಿ ಯೋಜನೆಯ ಸೌಲಭ್ಯ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಮಾಹಿತಿ ಸಂಗ್ರಹ ಪೂರ್ಣಗೊಂಡ ಬಳಿಕ ಈ ವರ್ಗದ ಫಲಾನುಭವಿಗಳಿಗೆ ಸೌಲಭ್ಯ ಮುಂದುವರಿಸಬೇಕೇ ಅಥವಾ ಅರ್ಹತಾ ಮಾನದಂಡಗಳಲ್ಲಿ ಬದಲಾವಣೆ ಮಾಡಬೇಕೇ ಎಂಬ ಬಗ್ಗೆ ಸಚಿವ ಸಂಪುಟದಲ್ಲಿ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಜಾರ್ಜ್ ಸ್ಪಷ್ಟಪಡಿಸಿದ್ದಾರೆ.


ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಪರಿಶೀಲನೆ ಹಾಗೂ ಸೌಲಭ್ಯಗಳ ಪರಿಷ್ಕರಣೆ ಕುರಿತು ಸರ್ಕಾರದ ಮಟ್ಟದಲ್ಲಿ ಚರ್ಚೆ ನಡೆಯುತ್ತಿರುವುದರಿಂದ, ಗೃಹಜ್ಯೋತಿ ಯೋಜನೆಯಲ್ಲೂ ಮುಂದಿನ ದಿನಗಳಲ್ಲಿ ಬದಲಾವಣೆ ಆಗಲಿದೆಯೇ ಎಂಬ ಕುತೂಹಲ ಮೂಡಿದೆ. ಸದ್ಯ ಮಾಹಿತಿ ಸಂಗ್ರಹ ಪೂರ್ಣಗೊಂಡ ಬಳಿಕ ಸಚಿವ ಸಂಪುಟದ ನಿರ್ಧಾರವೇ ಅಂತಿಮವಾಗಲಿದೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ವಿಕ್ರಮ ವಾಹಿನಿ

# ಆಸ್ಪತ್ರೆಯಲ್ಲಿದ್ದಾಗಲೂ ರಾಜೀನಾಮೆಗೆ ಸಿಎಂ ಒತ್ತಾಯಿಸಿದ್ದರು: ಹೊರಟ್ಟಿ

● ವಿಕ್ರಮ ವಾಹಿನಿ | ಹುಬ್ಬಳ್ಳಿ

ಅನಾರೋಗ್ಯದ ಹಿನ್ನೆಲೆಯಲ್ಲಿ ಆಸ್ಪತ್ರೆಗೆ ದಾಖಲಾಗಿದ್ದ ಸಂದರ್ಭದಲ್ಲೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ದೂರವಾಣಿ ಮೂಲಕ ಸಂಪರ್ಕಿಸಿ ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಒತ್ತಾಯಿಸಿದ್ದರು ಎಂದು ವಿಧಾನ ಪರಿಷತ್ ಸದಸ್ಯ ಬಸವರಾಜ ಹೊರಟ್ಟಿ ಆರೋಪಿಸಿದ್ದಾರೆ.



ಮಂಗಳವಾರ ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಬೆಳವಣಿಗೆಯ ಕುರಿತು ಅಸಮಾಧಾನ ವ್ಯಕ್ತಪಡಿಸಿದರು. ಮುಖ್ಯಮಂತ್ರಿ ಅವರೊಂದಿಗೆ ಆ.14ರಂದು ರಾಜೀನಾಮೆ ಕುರಿತು ಚರ್ಚೆ ನಡೆಸಲು ನಿರ್ಧರಿಸಲಾಗಿತ್ತು. ಆದರೆ ನಿರಂತರ ಒತ್ತಡದ ಹಿನ್ನೆಲೆಯಲ್ಲಿ ಆ.7ರಂದೇ ರಾಜೀನಾಮೆ ನೀಡಬೇಕಾಯಿತು ಎಂದು ಹೇಳಿದರು.

ತಾವು ಯಾರಿಗೂ ರಾಜೀನಾಮೆ ಪತ್ರ ಸಿದ್ಧಪಡಿಸುವಂತೆ ಸೂಚಿಸಿರಲಿಲ್ಲ. ಆದರೆ ತಮ್ಮ ಎದುರೇ ರಾಜೀನಾಮೆ ಪತ್ರವನ್ನು ಟೈಪ್ ಮಾಡಿ ಸಹಿ ಹಾಕುವಂತೆ ಒತ್ತಡ ಹೇರಲಾಯಿತು. ಕೊನೆಗೆ ಪರಿಸ್ಥಿತಿಗೆ ಮಣಿದು ರಾಜೀನಾಮೆ ನೀಡಬೇಕಾಯಿತು ಎಂದು ಹೊರಟ್ಟಿ ದೂರಿದರು.

ಸರ್ಕಾರದ ನಡೆಗೆ ಅಸಮಾಧಾನ

ಸಭಾಪತಿ ಸ್ಥಾನಕ್ಕೆ ಸಂಬಂಧಿಸಿದಂತೆ ಪಕ್ಷದ ಲೆಟರ್‌ಹೆಡ್‌ನಲ್ಲಿ ಹೆಸರು ಘೋಷಿಸಿರುವುದು ಸರಿಯಲ್ಲ. ದೇಶದಲ್ಲೇ ಇಂತಹ ಬೆಳವಣಿಗೆ ನಡೆದಿರುವುದು ಇದೇ ಮೊದಲಿರಬಹುದು. ಸರ್ಕಾರದ ಈ ನಡೆ ತಮಗೆ ನೋವುಂಟು ಮಾಡಿದೆ ಎಂದು ಹೇಳಿದರು.

1956ರಿಂದ ವಿಧಾನ ಪರಿಷತ್ ಇತಿಹಾಸದಲ್ಲಿ ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಿರುವ ನಿದರ್ಶನವಿಲ್ಲ. ಇದೀಗ ಇಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ತಾವು ಸಭಾಪತಿಯಾಗಿ ಯಾವುದೇ ತಪ್ಪು ಮಾಡಿಲ್ಲ. ಭ್ರಷ್ಟಾಚಾರ ಅಥವಾ ಅವ್ಯವಹಾರ ನಡೆಸಿದ್ದರೆ ತಮ್ಮ ವಿರುದ್ಧ ಯಾವ ಆಧಾರದ ಮೇಲೆ ಅವಿಶ್ವಾಸ ನಿರ್ಣಯ ಮಂಡಿಸಲಾಯಿತು ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು ಎಂದು ಪ್ರಶ್ನಿಸಿದರು. ಮುಂದಿನ ದಿನಗಳಲ್ಲಿ ಸಾಮಾನ್ಯ ವಿಧಾನ ಪರಿಷತ್ ಸದಸ್ಯನಾಗಿ ಕಲಾಪದಲ್ಲಿ ಭಾಗವಹಿಸುವುದಾಗಿ ಹೊರಟ್ಟಿ ತಿಳಿಸಿದರು.

# ಕೆಸೆಟ್ ಪರೀಕ್ಷೆಗೆ ಅರ್ಜಿ ಆಹ್ವಾನ

● ವಿಕ್ರಮ ವಾಹಿನಿ | ಬೆಂಗಳೂರು

ಕರ್ನಾಟಕ ರಾಜ್ಯ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಆರಂಭವಾಗಿದೆ. ಪ್ರಸಕ್ತ ಸಾಲಿನ ಲಿಖಿತ ಪರೀಕ್ಷೆಯನ್ನು ಅಕ್ಟೋಬರ್ 11ರಂದು ನಡೆಸಲಾಗುವುದು ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ ತಿಳಿಸಿದ್ದಾರೆ.

ಈ ಬಾರಿ ಒಟ್ಟು 37 ವಿಷಯಗಳಿಗೆ ಏಖಇಖ ಪರೀಕ್ಷೆ ನಡೆಯಲಿದ್ದು, ಅರ್ಹ ಅಭ್ಯರ್ಥಿಗಳು ಸೆಪ್ಟೆಂಬರ್ 5ರೊಳಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ಅರ್ಜಿ ಶುಲ್ಕವನ್ನು ಸೆಪ್ಟೆಂಬರ್ 6ರೊಳಗೆ ಪಾವತಿಸಬೇಕು ಎಂದು ಕೆಇಎ ತಿಳಿಸಿದೆ.

ಒಂದಕ್ಕಿಂತ ಹೆಚ್ಚು ಸ್ನಾತಕೋತ್ತರ ಪದವಿ ಪಡೆದಿರುವ ಅಭ್ಯರ್ಥಿಗಳು ಯಾವುದಾದರೂ ಒಂದು ವಿಷಯದಲ್ಲಿ ಮಾತ್ರ ಏಖಇಖ ಪರೀಕ್ಷೆಗೆ ಹಾಜರಾಗಲು ಅವಕಾಶವಿದೆ. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಆಯ್ಕೆ ಮಾಡಿಕೊಂಡ ವಿಷಯವನ್ನು ನಂತರ ಬದಲಾಯಿಸಲು ಅವಕಾಶ ಇರುವುದಿಲ್ಲ. ಹೀಗಾಗಿ ಅಭ್ಯರ್ಥಿಗಳು ವಿಷಯ ಆಯ್ಕೆ ಮಾಡುವಾಗ ಎಚ್ಚರಿಕೆ ವಹಿಸಬೇಕು ಎಂದು ಕೆಇಎ ಸೂಚಿಸಿದೆ.

ಪರೀಕ್ಷೆಗೆ ಸಂಬಂಧಿಸಿದ ಅರ್ಹತೆ, ಅರ್ಜಿ ಸಲ್ಲಿಕೆ ವಿಧಾನ, ಶುಲ್ಕ, ಪರೀಕ್ಷಾ ಕೇಂದ್ರಗಳು ಸೇರಿದಂತೆ ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು ಕೆಇಎ ಅಧಿಕೃತ ವೆಬ್‌ಸೈಟ್ ಪರಿಶೀಲಿಸುವಂತೆ ಸೂಚಿಸಲಾಗಿದೆ. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮುನ್ನ ಅಧಿಸೂಚನೆಯಲ್ಲಿ ನೀಡಿರುವ ಅರ್ಹತಾ ಮಾನದಂಡಗಳು ಹಾಗೂ ಅಗತ್ಯ ದಾಖಲೆಗಳ ವಿವರಗಳನ್ನು ಪರಿಶೀಲಿಸಬೇಕು. ನಿಗದಿತ ದಿನಾಂಕದೊಳಗೆ ಅರ್ಜಿ ಸಲ್ಲಿಸಿ, ಶುಲ್ಕ ಪಾವತಿ ಪ್ರಕ್ರಿಯೆಯನ್ನೂ ಪೂರ್ಣಗೊಳಿಸುವಂತೆ ಕೆಇಎ ಸೂಚಿಸಿದೆ.

# ಬಿಡದಿ ರೈತರ ಮನವಿ: 'ರೆಡ್ ಜೋನ್' ಮುಕ್ತಿಗೆ ಆಗ್ರಹ

● ವಿಕ್ರಮ ವಾಹಿನಿ | ಬೆಂಗಳೂರು

ಬೈರಮಂಗಲ ಹಾಗೂ ಕಂಚುಗಾರನಹಳ್ಳಿ ವ್ಯಾಪ್ತಿಯ 'ರೆಡ್ ಜೋನ್' ಸಮಸ್ಯೆಯಿಂದ ಮುಕ್ತಿ ನೀಡಬೇಕು ಹಾಗೂ ಬಿಡದಿ ಟೌನ್‌ಶಿಪ್ ಯೋಜನೆಗಾಗಿ ಭೂಸ್ವಾಧೀನಕ್ಕೆ ಅಂತಿಮ ಅಧಿಸೂಚನೆ ಹೊರಡಿಸಬೇಕು ಎಂದು ಆಗ್ರಹಿಸಿ ಬಿಡದಿ ಸುತ್ತಮುತ್ತಲ ರೈತರ ನಿಯೋಗ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಮಂಗಳವಾರ ಭೇಟಿ ಮಾಡಿ ಮನವಿ ಸಲ್ಲಿಸಿತು.



ವಿಧಾನಸೌಧದಲ್ಲಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿದ ರೈತರು, ಕಳೆದ 20 ವರ್ಷಗಳಿಂದ 'ರೆಡ್ ಜೋನ್' ನಿರ್ಬಂಧಗಳಿಂದ ಜಮೀನು ಅಭಿವೃದ್ಧಿಪಡಿಸಲು, ಮಾರಾಟ ಮಾಡಲು ಹಾಗೂ ಬ್ಯಾಂಕ್ ಸಾಲ ಪಡೆಯಲು ಸಾಧ್ಯವಾಗುತ್ತಿಲ್ಲ. ವೃಷಭಾವತಿ ನದಿಯ ಕೊಳಚೆ ನೀರಿನಿಂದ ಕೃಷಿ ಹಾಗೂ ಕುಡಿಯುವ ನೀರು ಕಲುಷಿತವಾಗಿದ್ದು, ಆರೋಗ್ಯ ಸಮಸ್ಯೆಗಳೂ ಎದುರಾಗುತ್ತಿವೆ ಎಂದು ಅಳಲು ತೋಡಿಕೊಂಡರು.

ಬಿಡದಿ ಟೌನ್‌ಶಿಪ್ ಯೋಜನೆಗೆ ಭೂಮಿ ನೀಡಲು ತಾವು ಸಿದ್ಧರಿದ್ದು, ಸೂಕ್ತ ಪರಿಹಾರ ಹಾಗೂ ಯೋಜನೆಯಲ್ಲಿ ಅಭಿವೃದ್ಧಿಪಡಿಸಿದ ಭೂಮಿಯಲ್ಲಿ ಪಾಲುದಾರಿಕೆ ನೀಡಬೇಕು ಎಂದು ರೈತರು ಮನವಿ ಮಾಡಿದರು. ರಾಜಕೀಯ ಕಾರಣಗಳಿಂದ ತಮ್ಮ ಬದುಕು ಸಂಕಷ್ಟಕ್ಕೆ ಸಿಲುಕಿದ್ದು, ತಕ್ಷಣ ಸಮಸ್ಯೆ ಪರಿಹರಿಸಬೇಕು ಎಂದು ಒತ್ತಾಯಿಸಿದರು.

ಬೈರಮಂಗಲ ಗ್ರಾಮದ ರೈತ ಸುನೀಲ್ ಮಾತನಾಡಿ, 'ರೆಡ್ ಜೋನ್' ಕಾರಣದಿಂದ ಜಮೀನಿನಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಕೈಗೊಳ್ಳಲು ಸಾಧ್ಯವಾಗುತ್ತಿಲ್ಲ. ಆಸ್ಪತ್ರೆ, ಕಲ್ಯಾಣಮಂಟಪ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ನಿರ್ಮಿಸಲು ಅಡ್ಡಿಯಾಗುತ್ತಿದೆ. ಸುತ್ತಮುತ್ತಲ ಪ್ರದೇಶಗಳಲ್ಲಿ ಜಮೀನಿಗೆ ಹೆಚ್ಚಿನ ಸಾಲ ಸಿಗುತ್ತಿದ್ದರೂ ತಮ್ಮ ಪ್ರದೇಶದಲ್ಲಿ ಸಾಲ ಪಡೆಯುವುದು ಕಷ್ಟವಾಗಿದೆ ಎಂದು ಹೇಳಿದರು.

ಹಿರಿಯ ನಾಗರಿಕ ಯಾಲಕ್ಕಿಗೌಡ, ಕಳೆದ ಎರಡು ದಶಕಗಳಿಂದ 'ರೆಡ್ ಜೋನ್' ತೆರವುಗೊಳಿಸುವಂತೆ ಮನವಿ ಮಾಡುತ್ತಿದ್ದರೂ ಹಿಂದಿನ ಸರ್ಕಾರದಿಂದ ಸ್ಪಂದನೆ ದೊರೆಯಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಈಗಿನ ಸರ್ಕಾರ ಸಮಸ್ಯೆ ಬಗೆಹರಿಸಲು ಮುಂದಾಗಿರುವ ಹಿನ್ನೆಲೆಯಲ್ಲಿ ರೈತರಿಗೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದರು.

ಯುವ ರೈತ ಹರೀಶ್ ರೆಡ್ಡಿ ಮಾತನಾಡಿ, ಬೆಂಗಳೂರು ಸುತ್ತಮುತ್ತಲಿನ ಪ್ರದೇಶಗಳು ವೇಗವಾಗಿ ಅಭಿವೃದ್ಧಿಯಾಗುತ್ತಿದ್ದರೂ ಬಿಡದಿ ಮಾತ್ರ ಹಿಂದೆ ಉಳಿದಿದೆ. ಟೌನ್‌ಶಿಪ್ ಯೋಜನೆ ಜಾರಿಯಾದರೆ ಪ್ರದೇಶದ ಅಭಿವೃದ್ಧಿಗೆ ವೇಗ ಸಿಗಲಿದೆ. ರೈತರ ಹಿತ ಕಾಪಾಡುವ ರೀತಿಯಲ್ಲಿ ಯೋಜನೆ ಅನುಷ್ಠಾನಗೊಳಿಸಬೇಕು ಎಂದು ಮನವಿ ಮಾಡಿದರು.

ರೈತರ ಮನವಿಯನ್ನು ಆಲಿಸಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಬೈರಮಂಗಲ ಮತ್ತು ಕಂಚುಗಾರನಹಳ್ಳಿ ಭಾಗದ ಸಮಸ್ಯೆ ಹಾಗೂ ಭೂಸ್ವಾಧೀನ ಪ್ರಕ್ರಿಯೆ ಕುರಿತು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದಾರೆ ಎಂದು ರೈತರು ತಿಳಿಸಿದರು.

# ಉಪವಾಸದಿಂದ ದೇಹ – ಮನಸ್ಸು ಹಗುರ: ರಾಮಚಂದ್ರಾಪುರ ಶ್ರೀ

● ವಿಕ್ರಮ ವಾಹಿನಿ | ಗೋಕರ್ಣ

ಉಪವಾಸ ಸರಿಯಾಗಿ ಮಾಡಿದಾಗ ನಿಶ್ಯಕ್ತಿಯಾಗುವುದಲ್ಲ. ಅದು ಬಲವೃದ್ಧಿಗೆ ಸಹಕಾರಿ. ಉಪವಾಸದಿಂದ ದೇಹ ಮತ್ತು ಮನಸ್ಸು ಹಗುರವಾಗುತ್ತದೆ. ಹೃದಯದಲ್ಲಿ ಶುದ್ಧತೆ, ದೇಹದಿಂದ ಬೇಡವಾದ ಅಂಶಗಳ ನಿರ್ಗಮನ, ಬಾಯಿ–ಗಂಟಲುಗಳ ಶುದ್ಧತೆ, ಹಿತವಾದ ಹಸಿವು ಮುಂತಾದವುಗಳು ಸರಿಯಾಗಿ ಉಪವಾಸವನ್ನು ನಡೆಸಿದಾಗ ಸಿಗುವ ಪ್ರಯೋಜನಗಳಾಗಿವೆ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ತಿಳಿಸಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 11.08.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ 'ಉಪವಾಸ'ದ ಕುರಿತಾಗಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಉಪವಾಸದಲ್ಲಿ ಹಲವಾರು ವಿಧಗಳಿದ್ದು, ನಾವು ಯಾವುದಾದರೂ ವಿಷಯದಲ್ಲಿ ತಲ್ಲೀನರಾದಾಗ ನಡೆಯುವ ಉಪವಾಸ ಒಂದು ರೀತಿಯಾದರೆ, ಧರ್ಮಶಾಸ್ತ್ರದ ಪ್ರಕಾರ ಮೂರು ರೀತಿಯ ಉಪವಾಸಗಳಿದ್ದು, ದಿನದಲ್ಲಿ ಎರಡು ಹೊತ್ತು ಮಾತ್ರ ಊಟ ಮಾಡಿ, ನಡುವೆ ಯಾವುದೇ ಆಹಾರ ಸ್ವೀಕರಿಸದಿರುವುದು ನಿತ್ಯೋಪವಾಸ ಎನಿಸಿಕೊಂಡರೆ, ಏಕಾದಶಿ, ಶಿವರಾತ್ರಿಗಳಲ್ಲಿ ಮಾಡುವ ಉಪವಾಸವು



ವ್ರತೋಪವಾಸ ಹಾಗೂ ಕೃಚ್ಛ್ರ ಎಂಬ ಉಪವಾಸ ವಿಧಿಯು ಪಾಪವನ್ನು ತೊಳೆದುಕೊಳ್ಳುವ ವಿಧವಾಗಿದ್ದು, ಶಾಸ್ತ್ರಗಳಲ್ಲಿ ಅನೇಕ ವಿಧವಾದ ಕೃಚ್ಛ್ರ ಉಪವಾಸವನ್ನು ಸೂಚಿಸಲಾಗಿದ್ದು, ಬೇರೆಬೇರೆ ಪಾಪಗಳನ್ನು ತೊಳೆದುಕೊಳ್ಳಲು ಇರುವ ಪ್ರಾಯಶ್ಚಿತ್ತ ಉಪವಾಸಗಳು ಇವಾಗಿವೆ ಎಂದರು.

ಆಯುರ್ವೇದ ಶಾಸ್ತ್ರವೂ ಉಪವಾಸವನ್ನು ಹೇಳಿದ್ದು, ಊಟವನ್ನು ಸರಿಯಾಗಿ ಮಾಡಿದರೆ ಹಲವು ರೋಗಗಳ ಪರಿಹಾರ. ಊಟದಿಂದ ಪರಿಹಾರವಾಗದಿರುವುದು ಉಪವಾಸದಿಂದ ಪರಿಹಾರ ಮಾಡಿಕೊಳ್ಳಲು ಸಾಧ್ಯ ಮತ್ತು ಊಟ ಹಾಗೂ ಉಪವಾಸ ಎರಡರಲ್ಲಿಯೂ ಪರಿಹಾರವಾಗದಿರುವುದಕ್ಕೆ ಮಾತ್ರ ಆಯುರ್ವೇದ ಔಷಧವನ್ನು ಸೂಚಿಸುತ್ತದೆ ಎಂದರು.

ತಪ್ಪಾದ ರೀತಿಯಲ್ಲಿ ಅಥವಾ ಅತಿಯಾಗಿ ಉಪವಾಸವನ್ನು ಮಾಡಿದರೆ ಸಂಧಿನೋವು, ದೇಹದ ದುರ್ಬಲತೆ, ಬಾಯಾರಿಕೆ, ಹಸಿವಿನ ನಾಶ, ರುಚಿ ಕಡಿಮೆಯಾಗುವುದು, ಮಾನಸಿಕ ಅಸಮತೋಲನ ಮುಂತಾದ ಸಮಸ್ಯೆಗಳು ಉಂಟಾಗಬಹುದು. ಆದ್ದರಿಂದ ವೈದ್ಯರ ಸಲಹೆ ಇಲ್ಲದೆ ಚಿಕಿತ್ಸೆಯ ಉದ್ದೇಶದಿಂದ ಉಪವಾಸ ಮಾಡಬಾರದು ಹಾಗೂ ಧಾರ್ಮಿಕ ಉಪವಾಸಗಳನ್ನೂ ಕೂಡ ಸರಿಯಾದ ಮಾರ್ಗದರ್ಶನದೊಂದಿಗೆ ಮಾಡಬೇಕು. ಗರ್ಭಿಣಿಯರು, ಮಕ್ಕಳು, ವೃದ್ಧರು, ದುರ್ಬಲರು, ಅತಿಹಸಿವು ಅಥವಾ ಬಾಯಾರಿಕೆ ಇರುವವರು ಮತ್ತು ಕೆಲವು ಕಾಯಿಲೆಗಳಿರುವವರು ಸ್ವಯಂಪ್ರೇರಿತವಾಗಿ ಉಪವಾಸ ಮಾಡಬಾರದು ಎಂದು ಎಚ್ಚರಿಸಿದರು.

ಖ್ಯಾತ ಉದ್ಯಮಿಗಳಾದ ಪದ್ಮಶ್ರೀ ಡಾ|| ವಿಜಯ ಸಂಕೇಶ್ವರ್ ದಂಪತಿಗಳು ಶ್ರೀಕರಾರ್ಚಿತ ರಾಮಪೂಜೆ, ಗೋಪೂಜೆಗಳಲ್ಲಿ ಭಾಗವಹಿಸಿ, ಶ್ರೀಗಳನ್ನು ಭೇಟಿಯಾಗಿ ಆಶೀರ್ವಾದ ಪಡೆದರು.

ಸಿದ್ದಾಪುರ ಹವ್ಯಕ ಮಂಡಲದ ಭಾನ್ಕುಳಿ, ಇಟಗಿ, ದೊಡ್ಮನೆ, ಚಪ್ಪರಮನೆ, ತಾಳಗುಪ್ಪಇಡುವಾಣಿ ವಲಯಗಳ ಪರವಾಗಿ ಬಿ.ಎಸ್.ಮಂಜುನಾಥ ಶರ್ಮಾ ದಂಪತಿಗಳು ಗುರುಭಿಕ್ಷಾ ಸೇವೆ ನೆರವೇರಿಸಿದರು. ಕೆ. ಎನ್. ಮಂಜುನಾಥ ಭಟ್, ಶಾಂತಾರಾಮ ಹಿರೇಮನೆ, ಜಯಂತಿ ಹೆಗಡೆ, ರಾಘವೇಂದ್ರ ಹೆಗಡೆ ಮುಸವಳ್ಳಿ, ದಿನ ಪ್ರಧಾನರಾಗಿ ರಾಧಾಕೃಷ್ಣ ಭಟ್ ದಂಪತಿಗಳು ಉಪಸ್ಥಿತರಿದ್ದರು.

# 'ವಂದೇ ಮಾತರಂ' ಅವಮಾನ ಇನ್ಮೇಲೆ ಅಪರಾಧ

● ವಿಕ್ರಮ ವಾಹಿನಿ | ನವದೆಹಲಿ

ರಾಷ್ಟ್ರೀಯ ಗೀತೆ 'ವಂದೇ ಮಾತರಂ'ಗೆ ಅವಮಾನ ಮಾಡುವುದು ಅಥವಾ ಅದರ ಗಾಯನಕ್ಕೆ ಉದ್ದೇಶಪೂರ್ವಕವಾಗಿ ಅಡ್ಡಿಪಡಿಸುವುದನ್ನು ಶಿಕ್ಷಾರ್ಹ ಅಪರಾಧವನ್ನಾಗಿಸುವ 'ರಾಷ್ಟ್ರೀಯ ಗೌರವಕ್ಕೆ ಅವಮಾನಗಳ ತಡೆ (ತಿದ್ದುಪಡಿ) ಮಸೂದೆ, 2026'ಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅಂಕಿತ ಹಾಕಿದ್ದಾರೆ. ಇದರೊಂದಿಗೆ ಸಂಸತ್ತಿನಲ್ಲಿ ಅಂಗೀಕಾರಗೊಂಡಿದ್ದ ಮಸೂದೆ ಇದೀಗ ಕಾನೂನಾಗಿ ಜಾರಿಯಾಗಿದೆ.

'ವಂದೇ ಮಾತರಂ'ಗೆ ರಾಷ್ಟ್ರೀಯ ಗೀತೆ 'ಜನ ಗಣ ಮನ'ಕ್ಕೆ ಸಮಾನವಾದ ಕಾನೂನು ಸ್ಥಾನಮಾನ ಕಲ್ಪಿಸುವುದು ತಿದ್ದುಪಡಿ ಮಸೂದೆಯ ಪ್ರಮುಖ ಉದ್ದೇಶವಾಗಿದೆ. ದೇಶದ ರಾಷ್ಟ್ರೀಯ ಗೌರವಕ್ಕೆ ಧಕ್ಕೆ ತರುವ ರೀತಿಯಲ್ಲಿ ಗೀತೆಯನ್ನು ಅವಮಾನಿಸುವುದು, ಗಾಯನಕ್ಕೆ ಅಡ್ಡಿಪಡಿಸುವುದು ಅಥವಾ ಉದ್ದೇಶಪೂರ್ವಕವಾಗಿ ಅದರ ಗೌರವಕ್ಕೆ ಧಕ್ಕೆ ತರುವ ಕೃತ್ಯಗಳನ್ನು ಕಾನೂನಿನ ವ್ಯಾಪ್ತಿಗೆ ತರಲು ಇದರಲ್ಲಿ ಅವಕಾಶ ಕಲ್ಪಿಸಲಾಗಿದೆ.



ತಿದ್ದುಪಡಿ ಮಸೂದೆಯನ್ನು ರಾಜ್ಯಸಭೆಯು ಜುಲೈ 29ರಂದು ಅಂಗೀಕರಿಸಿತ್ತು. ಬಳಿಕ ಜುಲೈ 30ರಂದು ಲೋಕಸಭೆಯಲ್ಲೂ ಮಸೂದೆಗೆ ಅನುಮೋದನೆ ದೊರೆಯಿತು. ಎರಡೂ ಸದನಗಳ ಅಂಗೀಕಾರದ ನಂತರ ಮಸೂದೆಯನ್ನು ರಾಷ್ಟ್ರಪತಿಗಳ ಅಂಕಿತಕ್ಕಾಗಿ ಕಳುಹಿಸಲಾಗಿತ್ತು.

ಇದೀಗ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮಸೂದೆಗೆ ಅಂಕಿತ ಹಾಕಿರುವುದರಿಂದ ಅದು ಅಧಿಕೃತವಾಗಿ ಕಾನೂನಿನ ಸ್ವರೂಪ ಪಡೆದಿದೆ.

ಬಂಕಿಮಚಂದ್ರ ಚಟ್ಟೋಪಾಧ್ಯಾಯ ಅವರ 'ಆನಂದಮಠ' ಕೃತಿಯಲ್ಲಿರುವ 'ವಂದೇ ಮಾತರಂ' ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ದೇಶಭಕ್ತಿಯ ಪ್ರಮುಖ ಗೀತೆಯಾಗಿ ಗುರುತಿಸಿಕೊಂಡಿತ್ತು. ಸ್ವಾತಂತ್ರ್ಯ ಹೋರಾಟದಲ್ಲಿ ಈ ಗೀತೆಯು ಜನರಲ್ಲಿ ರಾಷ್ಟ್ರೀಯ ಭಾವನೆ ಮತ್ತು ಒಗ್ಗಟ್ಟಿನ ಮನೋಭಾವ ಮೂಡಿಸುವಲ್ಲಿ ಮಹತ್ವದ ಪಾತ್ರ ವಹಿಸಿತ್ತು.

ಹೊಸ ಕಾನೂನಿನ ಅಡಿಯಲ್ಲಿ 'ವಂದೇ ಮಾತರಂ'ಗೆ ಉದ್ದೇಶಪೂರ್ವಕವಾಗಿ ಅವಮಾನ ಮಾಡುವುದು ಅಥವಾ ಅದರ ಗಾಯನಕ್ಕೆ ಅಡ್ಡಿಪಡಿಸುವಂತಹ ಕೃತ್ಯಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಅವಕಾಶವಿದೆ. ರಾಷ್ಟ್ರೀಯ ಗೀತೆಯ ಗೌರವವನ್ನು ಕಾಪಾಡುವ ಉದ್ದೇಶದಿಂದ ಇಂತಹ ಕೃತ್ಯಗಳನ್ನು ಶಿಕ್ಷಾರ್ಹ ವ್ಯಾಪ್ತಿಗೆ ತರಲಾಗಿದೆ.

# ಆ.14ರಂದು ಸ್ಪೀಕರ್, ಸಭಾಪತಿ ಸ್ಥಾನಕ್ಕೆ ಚುನಾವಣೆ

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯ ವಿಧಾನಮಂಡಲದ ವಿಧಾನಸಭೆ ಸ್ಪೀಕರ್ ಹಾಗೂ ವಿಧಾನ ಪರಿಷತ್ ಸಭಾಪತಿ ಸ್ಥಾನಗಳಿಗೆ ಚುನಾವಣೆ ದಿನಾಂಕ ನಿಗದಿಯಾಗಿದ್ದು, ಆಗಸ್ಟ್ 14ರಂದು ಎರಡೂ ಹುದ್ದೆಗಳಿಗೆ ಚುನಾವಣೆ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಆಡಳಿತಾರೂಢ ಹಾಗೂ ಪ್ರತಿಪಕ್ಷಗಳ ರಾಜಕೀಯ ಲೆಕ್ಕಾಚಾರ ಚುರುಕುಗೊಂಡಿದೆ.



ವಿಧಾನಸಭೆ ಮತ್ತು ವಿಧಾನ ಪರಿಷತ್‌ನಲ್ಲಿ ಆಡಳಿತಾರೂಢ ಕಾಂಗ್ರೆಸ್‌ಗೆ ಅಗತ್ಯ ಸಂಖ್ಯಾಬಲ ಇರುವುದರಿಂದ ಎರಡೂ ಹುದ್ದೆಗಳಿಗೆ ಅವಿರೋಧ ಆಯ್ಕೆ ನಡೆಯುವ ಸಾಧ್ಯತೆ ಹೆಚ್ಚಾಗಿದೆ. ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಕೂಟಕ್ಕೆ ಅಗತ್ಯ ಸಂಖ್ಯಾಬಲದ ಕೊರತೆ ಇರುವ ಹಿನ್ನೆಲೆಯಲ್ಲಿ ಪ್ರತಿಪಕ್ಷಗಳು ಅಭ್ಯರ್ಥಿಗಳನ್ನು ಕಣಕ್ಕಿಳಿಸುವ ಸಾಧ್ಯತೆ ಕಡಿಮೆ ಎನ್ನಲಾಗಿದೆ.

ಜಿ.ಎಸ್. ಪಾಟೀಲ್ ಹೆಸರು ಮುನ್ನೆಲೆಯಲ್ಲಿ

ಕೊನೆಯ ಕ್ಷಣದಲ್ಲಿ ಯಾವುದೇ ಬದಲಾವಣೆ ಆಗದಿದ್ದರೆ ವಿಧಾನಸಭೆ ಸ್ಪೀಕರ್ ಸ್ಥಾನಕ್ಕೆ ಕಾಂಗ್ರೆಸ್‌ನ ಜಿ.ಎಸ್. ಪಾಟೀಲ್ ಆಯ್ಕೆಯಾಗುವ ಸಾಧ್ಯತೆ ಇದೆ. ಪಕ್ಷದೊಳಗಿನ ಚರ್ಚೆ ಹಾಗೂ ಸಂಖ್ಯಾಬಲವನ್ನು ಗಮನಿಸಿದರೆ ಅವರ ಆಯ್ಕೆಗೆ ಹೆಚ್ಚಿನ ಅವಕಾಶವಿದೆ ಎಂದು ಮೂಲಗಳು ತಿಳಿಸಿವೆ.

ವಿಧಾನ ಪರಿಷತ್ ಸಭಾಪತಿ ಸ್ಥಾನಕ್ಕೂ ಆಗಸ್ಟ್ 14ರಂದು ಚುನಾವಣೆ ನಡೆಯಲಿದ್ದು, ಸಲೀಂ ಅಹಮದ್ ಅವರ ಹೆಸರು ಮುನ್ನೆಲೆಗೆ ಬಂದಿದೆ. ಆಡಳಿತಾರೂಢ ಪಕ್ಷದ ಸಂಖ್ಯಾಬಲದ ಹಿನ್ನೆಲೆಯಲ್ಲಿ ಅವರ ಆಯ್ಕೆಯೂ ಬಹುತೇಕ ಖಚಿತ ಎನ್ನಲಾಗಿದೆ.

ಎರಡೂ ಹುದ್ದೆಗಳಿಗೆ ಪ್ರತಿಪಕ್ಷಗಳು ಅಭ್ಯರ್ಥಿಗಳನ್ನು ಕಣಕ್ಕಿಳಿಸದಿದ್ದಲ್ಲಿ, ಚುನಾವಣಾ ಪ್ರಕ್ರಿಯೆ ಸರಳವಾಗಿ ಪೂರ್ಣಗೊಂಡು ಅವಿರೋಧ ಆಯ್ಕೆ ನಡೆಯಲಿದೆ. ಆದರೆ ನಾಮಪತ್ರ ಸಲ್ಲಿಕೆ ಹಾಗೂ ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಕೊನೆಯ ಕ್ಷಣದ ರಾಜಕೀಯ ಬೆಳವಣಿಗೆಗಳ ಬಗ್ಗೆ ಕುತೂಹಲ ಮುಂದುವರಿಯಲಿದೆ.

ಸ್ಪೀಕರ್ ಹಾಗೂ ಸಭಾಪತಿ ಸ್ಥಾನಗಳಿಗೆ ಚುನಾವಣೆ ನಿಗದಿಯಾಗಿರುವ ಹಿನ್ನೆಲೆಯಲ್ಲಿ ವಿಧಾನಮಂಡಲದ ಮುಂದಿನ ಅಧಿವೇಶನದ ಕಾರ್ಯಕಲಾಪಗಳ ಮೇಲೂ ಗಮನ ನೆಟ್ಟಿದೆ. ಎರಡೂ ಸ್ಥಾನಗಳಿಗೆ ಹೊಸ ಪದಾಧಿಕಾರಿಗಳ ಆಯ್ಕೆಯೊಂದಿಗೆ ಸದನದ ಕಲಾಪಗಳು ಮತ್ತಷ್ಟು ಸುಗಮವಾಗಿ ನಡೆಯುವ ನಿರೀಕ್ಷೆ ವ್ಯಕ್ತವಾಗಿದೆ.

# ನವಿಮುಂಬೈಗೆ ಪುತ್ತಿಗೆ ಶ್ರೀಪಾದರ ಚಾತುರ್ಮಾಸ್ಯ ಪ್ರವೇಶ

● ವಿಕ್ರಮ ವಾಹಿನಿ | ನವಿಮುಂಬೈ

ಪರಮಪೂಜ್ಯ ಪುತ್ತಿಗೆ ಮಠಾಧೀಶರಾದ ಶ್ರೀ ಸುಗುಣೇಂದ್ರ ತೀರ್ಥ ಶ್ರೀಪಾದರು ಚಾತುರ್ಮಾಸ್ಯ ವ್ರತಾಚರಣೆಗಾಗಿ ನವಿಮುಂಬೈ ಮಹಾನಗರಕ್ಕೆ ಭಾನುವಾರ ಆಗಮಿಸಿದರು. ಅಪಾರ ಭಕ್ತರ ಸಮ್ಮುಖದಲ್ಲಿ ಶ್ರೀಪಾದರಿಗೆ ಭವ್ಯ ಸ್ವಾಗತ ಕೋರಲಾಯಿತು.

ಗುರುವಾಯೂರಪ್ಪ ದೇವಾಲಯದಿಂದ ಆರಂಭವಾದ ಪುರಪ್ರವೇಶ ಮೆರವಣಿಗೆಯಲ್ಲಿ ವೇದಘೋಷ, ಭಜನೆ, ಯಕ್ಷಗಾನ, ನೃತ್ಯ, ಕೊಂಬು–ಕಹಳೆ, ನಾಗಸ್ವರ ಸೇರಿದಂತೆ ವಿವಿಧ ವಾದ್ಯಗೋಷ್ಠಿಗಳು ಮೆರುಗು ನೀಡಿದವು. ದೇವಾಲಯದ ಸಮಿತಿ ಪದಾಧಿಕಾರಿಗಳು ಹಾಗೂ ಭಕ್ತರು ಶ್ರೀಪಾದರನ್ನು ಗೌರವಪೂರ್ವಕವಾಗಿ ಬರಮಾಡಿಕೊಂಡರು.


ಶ್ರೀ ವಿಠಲ ದೇವರೊಂದಿಗೆ ಶ್ರೀಪಾದರು ವೈಭವದ ಮೆರವಣಿಗೆಯಲ್ಲಿ ಸಾಗಿದ ಬಳಿಕ, ನವಿಮುಂಬೈನಲ್ಲಿ ನೂತನವಾಗಿ ಆರಂಭಗೊಳ್ಳುತ್ತಿರುವ ಪುತ್ತಿಗೆ ಮಠದ ಶಾಖೆಯನ್ನು ಪ್ರವೇಶಿಸಿದರು. ಮಳೆಯ ಸಿಂಚನದ ನಡುವೆಯೂ ಅಪಾರ ಸಂಖ್ಯೆಯ ಭಕ್ತರು ಮೆರವಣಿಗೆಯಲ್ಲಿ ಪಾಲ್ಗೊಂಡು ಭಕ್ತಿ ಮತ್ತು ಉತ್ಸಾಹದಿಂದ ಶ್ರೀಪಾದರನ್ನು ಸ್ವಾಗತಿಸಿದರು.

ಬಳಿಕ ಮಠದ ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ಚಾತುರ್ಮಾಸ್ಯ ಸಮಿತಿಯ ಅಧ್ಯಕ್ಷ ಶಿವರಾಮ ಶೆಟ್ಟಿ, ಉಪಾಧ್ಯಕ್ಷರಾದ ಗೋಪಾಲ ವೈ. ಶೆಟ್ಟಿ ಹಾಗೂ ಎನ್.ಆರ್. ರೈ, ಕಾರ್ಯಾಧ್ಯಕ್ಷ ಧರ್ಮದರ್ಶಿ ಅಣ್ಣಿ ಶೆಟ್ಟಿ, ಗೋಕುಲದ ಮಾಜಿ ಅಧ್ಯಕ್ಷ ಡಾ. ಸುರೇಶ್ ರಾವ್, ಅದಮಾರು ಮಠದ ಮುಖ್ಯ ಪ್ರಬಂಧಕ ರಾಜೇಶ್ ಭಟ್ ಹಾಗೂ ನಗರಸೇವಕ ಸಂತೋಷ್ ಶೆಟ್ಟಿ ಉಪಸ್ಥಿತರಿದ್ದರು.

ಶ್ರೀ ಸುಗುಣೇಂದ್ರ ತೀರ್ಥ ಶ್ರೀಪಾದರು ದೀಪ ಪ್ರಜ್ವಲಿಸುವ ಮೂಲಕ ಚಾತುರ್ಮಾಸ್ಯ ಕಾರ್ಯಕ್ರಮಗಳಿಗೆ ಚಾಲನೆ ನೀಡಿದರು. ಆಶೀರ್ವಚನ ನೀಡಿದ ಅವರು, ಚಾತುರ್ಮಾಸ್ಯದ ಅವಧಿಯಲ್ಲಿ ವಿವಿಧ ಜ್ಞಾನ, ಧಾರ್ಮಿಕ ಹಾಗೂ ಆಧ್ಯಾತ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಶ್ರೀ ಪಾಂಡುರಂಗ ವಿಠಲ ದೇವರ ಅನುಗ್ರಹದಿಂದ ಲೋಕಕ್ಕೆ ಮಂಗಳವಾಗಲಿ ಹಾಗೂ ಭಕ್ತರ ಜೀವನ ಸುಖ, ಶಾಂತಿ ಮತ್ತು ಭಕ್ತಿಭಾವದಿಂದ ಸಮೃದ್ಧವಾಗಲಿ ಎಂದು ಹಾರೈಸಿದರು.

ಸಭಾ ಕಾರ್ಯಕ್ರಮವನ್ನು ಸ್ಥಳೀಯ ಭಕ್ತ ಹಾಗೂ ಸಮಾಜಸೇವಕ ದಿನೇಶ್ ಕುಲಾಲ್ ನಿರ್ವಹಿಸಿದರು. ವಿಕ್ರಮ್ ಕುಮಾರ್ ಕೊಂಟಾರ್ ವಂದನಾರ್ಪಣೆ ಸಲ್ಲಿಸಿದರು.

ಇಂದಿನಿಂದ ಚಾತುರ್ಮಾಸ್ಯ ವ್ರತ: ಶ್ರೀಪಾದರು ನವಿಮುಂಬೈ ಮಹಾನಗರದಲ್ಲಿ ವಿಧ್ಯುಕ್ತವಾಗಿ ಚಾತುರ್ಮಾಸ್ಯ ವ್ರತವನ್ನು ಸ್ವೀಕರಿಸಲಿದ್ದು,



ವ್ರತದ ಅವಧಿಯಲ್ಲಿ ವಿವಿಧ ಧಾರ್ಮಿಕ, ಆಧ್ಯಾತ್ಮಿಕ ಹಾಗೂ ಜ್ಞಾನ ಕಾರ್ಯಕ್ರಮಗಳು ನಡೆಯಲಿವೆ.

ಇದೇ ಸಂದರ್ಭದಲ್ಲಿ ಶ್ರೀಪಾದರ ದರ್ಶನಕ್ಕಾಗಿ ನವಿಮುಂಬೈನ ವಿವಿಧ ಭಾಗಗಳಿಂದ ಭಕ್ತರು ಆಗಮಿಸಿದ್ದರು. ಮೆರವಣಿಗೆಯುದ್ದಕ್ಕೂ ಭಕ್ತರು ಭಜನೆ, ಘೋಷಣೆ ಹಾಗೂ ಆರಾಧನಾ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ತಮ್ಮ ಭಕ್ತಿಭಾವ ವ್ಯಕ್ತಪಡಿಸಿದರು. ಮಠದ ವತಿಯಿಂದ ಭಕ್ತರಿಗೆ ಅಗತ್ಯ ವ್ಯವಸ್ಥೆಗಳನ್ನು ಕಲ್ಪಿಸಲಾಗಿತ್ತು.

ಚಾತುರ್ಮಾಸ್ಯದ ಅಂಗವಾಗಿ ಪ್ರತಿದಿನ ಪೂಜೆ, ಪ್ರವಚನ, ಭಜನೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಸ್ಥಳೀಯ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶ್ರೀಪಾದರ ಆಶೀರ್ವಾದ ಪಡೆಯುವಂತೆ ಆಯೋಜಕರು ಮನವಿ ಮಾಡಿದ್ದಾರೆ.

ಚಾತುರ್ಮಾಸ್ಯ ವ್ರತದ ಹಿನ್ನೆಲೆಯಲ್ಲಿ ನವಿಮುಂಬೈ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಭಕ್ತರಲ್ಲಿ ವಿಶೇಷ ಉತ್ಸಾಹ ಮೂಡಿದೆ. ಮುಂದಿನ ದಿನಗಳಲ್ಲಿ ನಡೆಯಲಿರುವ ವಿವಿಧ ಧಾರ್ಮಿಕ ಹಾಗೂ ಜ್ಞಾನ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸುವ ನಿರೀಕ್ಷೆಯಿದೆ.

# ಅರುಣಾಚಲ ನಮ್ಮದೇ: ಚೀನಾಗೆ ಭಾರತ ತಿರುಗೇಟು

● ವಿಕ್ರಮ ವಾಹಿನಿ | ನವದೆಹಲಿ

ಅರುಣಾಚಲ ಪ್ರದೇಶವು ಭಾರತದ ಅವಿಭಾಜ್ಯ ಮತ್ತು ಬೇರ್ಪಡಿಸಲಾಗದ ಅಂಗವಾಗಿದ್ದು, ಈ ಐತಿಹಾಸಿಕ ಹಾಗೂ ಭೌಗೋಳಿಕ ವಾಸ್ತವವನ್ನು ಯಾರಿಂದಲೂ ಬದಲಾಯಿಸಲು ಸಾಧ್ಯವಿಲ್ಲ ಎಂದು ಭಾರತ ಮತ್ತೊಮ್ಮೆ ಸ್ಪಷ್ಟಪಡಿಸಿದೆ. ಭಾರತದ ಅಧಿಕೃತ ನಕ್ಷೆಯಲ್ಲಿ ಅರುಣಾಚಲ ಪ್ರದೇಶದ 27 ಪ್ರಮುಖ ಸ್ಥಳಗಳನ್ನು ಸೇರ್ಪಡೆಗೊಳಿಸಿರುವುದಕ್ಕೆ ಚೀನಾ ವ್ಯಕ್ತಪಡಿಸಿರುವ ಆಕ್ಷೇಪಕ್ಕೆ ವಿದೇಶಾಂಗ ಸಚಿವಾಲಯ ಖಡಕ್ ಪ್ರತಿಕ್ರಿಯೆ ನೀಡಿದೆ.

ಚೀನಾ ಭಾರತದ ಕ್ರಮವನ್ನು 'ಅಕ್ರಮ' ಎಂದು ಬಣ್ಣಿಸಿರುವ ಹಿನ್ನೆಲೆಯಲ್ಲಿ ಪ್ರತಿಕ್ರಿಯಿಸಿರುವ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಅರುಣಾಚಲ ಪ್ರದೇಶವು ಹಿಂದಿನಿಂದಲೂ ಭಾರತದ ಭಾಗವಾಗಿದ್ದು, ಮುಂದೆಯೂ ಭಾರತದ ಭಾಗವಾಗಿಯೇ ಇರಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಜೈಸ್ವಾಲ್, "ಅರುಣಾಚಲ ಪ್ರದೇಶವು ಭಾರತದ ಅವಿಭಾಜ್ಯ ಅಂಗವಾಗಿದೆ. ಇದು ಬದಲಾಯಿಸಲಾಗದ ವಾಸ್ತವ" ಎಂದು ಹೇಳಿದ್ದಾರೆ. ಈ ಮೂಲಕ ಅರುಣಾಚಲ ಪ್ರದೇಶದ ಮೇಲಿನ ಭಾರತದ ಸಾರ್ವಭೌಮತ್ವದ ನಿಲುವಿನಲ್ಲಿ ಯಾವುದೇ ಬದಲಾವಣೆ ಇಲ್ಲ ಎಂಬ ಸಂದೇಶವನ್ನು ಚೀನಾಗೆ ರವಾನಿಸಿದ್ದಾರೆ.

ಭಾರತದ ನಕ್ಷೆಯಲ್ಲಿ ರಾಜ್ಯದ ವಿವಿಧ ಸ್ಥಳಗಳನ್ನು ಅಧಿಕೃತವಾಗಿ ಗುರುತಿಸುವುದು ದೇಶದ ಆಡಳಿತಾತ್ಮಕ ಮತ್ತು ಸಾರ್ವಭೌಮ ಹಕ್ಕಿನ ಭಾಗವಾಗಿದೆ. ಇಂತಹ ಕ್ರಮಗಳನ್ನು ಪ್ರಶ್ನಿಸುವ ಯಾವುದೇ ಪ್ರಯತ್ನವನ್ನು ಭಾರತ ಒಪ್ಪುವುದಿಲ್ಲ ಎಂಬುದನ್ನೂ



ಚೀನಾದ ಆಕ್ಷೇಪಕ್ಕೆ ಭಾರತ ಖಡಕ್ ತಿರುಗೇಟು ನೀಡಿದ್ದು, ಅರುಣಾಚಲ ಪ್ರದೇಶ ಭಾರತದ ಅವಿಭಾಜ್ಯ ಅಂಗವಾಗಿದ್ದು, ಈ ವಾಸ್ತವವನ್ನು ಯಾರಿಂದಲೂ ಬದಲಾಯಿಸಲು ಸಾಧ್ಯವಿಲ್ಲ ಎಂದು ವಿದೇಶಾಂಗ ಸಚಿವಾಲಯ ಸ್ಪಷ್ಟಪಡಿಸಿದೆ.

ವಿದೇಶಾಂಗ ಸಚಿವಾಲಯದ ಹೇಳಿಕೆ ಸ್ಪಷ್ಟಪಡಿಸಿದೆ.

ಅರುಣಾಚಲ ಪ್ರದೇಶದ ಹಲವು ಪ್ರದೇಶಗಳು ಹಾಗೂ ಸ್ಥಳಗಳಿಗೆ ಚೀನಾ ತನ್ನದೇ ಆದ ಹೆಸರುಗಳನ್ನು ನೀಡುವ ಮೂಲಕ ಅವುಗಳ ಮೇಲಿನ ತನ್ನ ಹಕ್ಕನ್ನು ಪ್ರತಿಪಾದಿಸಲು ನಿರಂತರವಾಗಿ ಪ್ರಯತ್ನಿಸುತ್ತಿದೆ. ಸ್ಥಳಗಳ ಹೆಸರು ಬದಲಾಯಿಸುವ ಮೂಲಕ ಭೌಗೋಳಿಕ ವಾಸ್ತವವನ್ನು ಬದಲಾಯಿಸಲು ಸಾಧ್ಯವಿಲ್ಲ ಎಂಬುದು ಭಾರತದ ನಿಲುವಾಗಿದೆ.

ಚೀನಾದ ಇಂತಹ ಪ್ರಯತ್ನಗಳಿಗೆ ಪ್ರತಿಯಾಗಿ ಭಾರತವೂ ತನ್ನ ಅಧಿಕೃತ ದಾಖಲೆಗಳು ಮತ್ತು ನಕ್ಷೆಗಳಲ್ಲಿ ಗಡಿ ಪ್ರದೇಶಗಳನ್ನು ಸ್ಪಷ್ಟವಾಗಿ ಗುರುತಿಸುತ್ತಿದೆ. ಇದರ ಭಾಗವಾಗಿ ಅರುಣಾಚಲ ಪ್ರದೇಶದ 27 ಪ್ರಮುಖ ಸ್ಥಳಗಳನ್ನು ಅಧಿಕೃತ ನಕ್ಷೆಯಲ್ಲಿ ಸೇರಿಸಿರುವುದು ಚೀನಾದ ಗಮನ ಸೆಳೆದಿದೆ.

ಅರುಣಾಚಲ ಪ್ರದೇಶ ಸೇರಿದಂತೆ ಗಡಿ ಪ್ರದೇಶಗಳ ಭದ್ರತೆ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಭಾರತ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದೆ. ಗಡಿ ಪ್ರದೇಶಗಳಲ್ಲಿ ರಸ್ತೆ, ಸೇತುವೆ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಬಲಪಡಿಸುವ ಜೊತೆಗೆ, ಗಡಿ ಭದ್ರತೆಯನ್ನು ಮತ್ತಷ್ಟು ಪರಿಣಾಮಕಾರಿಗೊಳಿಸುವ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಭಾರತ–ಚೀನಾ ಗಡಿಯಲ್ಲಿ ಹಲವು ವರ್ಷಗಳಿಂದ ಗಡಿ ವಿವಾದ ಮುಂದುವರಿದಿರುವ ಹಿನ್ನೆಲೆಯಲ್ಲಿ ಅರುಣಾಚಲ ಪ್ರದೇಶಕ್ಕೆ ಸಂಬಂಧಿಸಿದ ಬೆಳವಣಿಗೆಗಳು ವಿಶೇಷ ಮಹತ್ವ ಪಡೆದಿವೆ. ಚೀನಾ ತನ್ನ ಹಕ್ಕು ಪ್ರತಿಪಾದನೆ ಮುಂದುವರಿಸುತ್ತಿದ್ದರೂ, ಅರುಣಾಚಲ ಪ್ರದೇಶದ ಮೇಲಿನ ತನ್ನ ಸಾರ್ವಭೌಮತ್ವದಲ್ಲಿ ಯಾವುದೇ ರಾಜಿ ಇಲ್ಲ ಎಂಬ ನಿಲುವನ್ನು ಭಾರತ ಪದೇಪದೇ ಪುನರುಚ್ಚರಿಸುತ್ತಿದೆ.

ಅರುಣಾಚಲ ಪ್ರದೇಶದ ಸ್ಥಳಗಳಿಗೆ ಮರುನಾಮಕರಣ ಮಾಡುವ ಚೀನಾದ ಪ್ರಯತ್ನಗಳನ್ನು ಭಾರತ ಈ ಹಿಂದೆಯೂ ತಿರಸ್ಕರಿಸಿತ್ತು. ಕೇವಲ ಹೆಸರು ಬದಲಾಯಿಸುವುದರಿಂದ ಯಾವುದೇ ಪ್ರದೇಶದ ವಾಸ್ತವಿಕ ಸ್ಥಾನಮಾನ ಅಥವಾ ಸಾರ್ವಭೌಮತ್ವ ಬದಲಾಗುವುದಿಲ್ಲ ಎಂದು ಭಾರತ ಸ್ಪಷ್ಟಪಡಿಸಿದೆ.

ಇದೀಗ 27 ಸ್ಥಳಗಳನ್ನು ಭಾರತದ ಅಧಿಕೃತ ನಕ್ಷೆಯಲ್ಲಿ ಗುರುತಿಸಿರುವುದಕ್ಕೆ ಚೀನಾ ಆಕ್ಷೇಪ ವ್ಯಕ್ತಪಡಿಸಿರುವ ಬೆನ್ನಲ್ಲೇ, ವಿದೇಶಾಂಗ ಸಚಿವಾಲಯದ ಪ್ರತಿಕ್ರಿಯೆ ಉಭಯ ದೇಶಗಳ ನಡುವಿನ ಗಡಿ ವಿಚಾರದಲ್ಲಿ ಭಾರತದ ನಿಲುವು ಮತ್ತೊಮ್ಮೆ ಸ್ಪಷ್ಟಪಡಿಸಿದೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481
vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 136,